

ನೋಟು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 241, ಪುಟಗಳು: 8, ಭಾನುವಾರ, 9 ಜೂನ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ




### ಸುಭಾಷಿತ

ನಿನ್ನಿಂದ ಸಾಧ್ಯವಾಗದ್ದನ್ನು ನಾನು ಮಾಡಬಲ್ಲೆ, ನನ್ನಿಂದ ಸಾಧ್ಯವಾಗದ್ದನ್ನು ನೀಡು ಮಾಡಬಹುದು. ನಾವು ಒಟ್ಟಿಗೆ ಸೇರಿದರೆ ಮಹತ್ತರ ಕೆಲಸಗಳನ್ನು ಮಾಡಲು ಸಾಧ್ಯ ಬೇಕು.

। ಮದರ್ ತೆರೆಸಾ

### ಪಂಚಾಂಗ

(ಭಾನುವಾರ 9, ಜೂನ್-2024)

- ಸಂವತ್ಸರ: ಕ್ರೋಧಿ, ಋತು: ಗ್ರೀಷ್ಮ
- ಅಯನ: ಉತ್ತರಾಯಣ, ಮಾಸ: ಜೇಷ್ಠ
- ಪಕ್ಷ: ಶುಕ್ಲ, ತಿಥಿ: ತದಿಗೆ
- ನಕ್ಷತ್ರ: ಪುನರ್ವಸು
- ರಾಹುಕಾಲ: 05:08-6:45
- ಗುಳಿಕಕಾಲ: 03:32-5:08
- ಯಮಗಂಡಕಾಲ: 12:18-1:55

## ಸಂಕ್ಷಿಪ್ತ ಸುದ್ದಿ

### ಕಾಂಗ್ರೆಸ್‌ನ ಸಂಸದೀಯ ಪಕ್ಷದ ನಾಯಕಿಯಾಗಿ ಸೋನಿಯಾ ಗಾಂಧಿ ಮರು ಆಯ್ಕೆ



**ನವದೆಹಲಿ:** ಕಾಂಗ್ರೆಸ್‌ನ ಸಂಸದೀಯ ಪಕ್ಷದ ನಾಯಕಿಯಾಗಿ ಸೋನಿಯಾ ಗಾಂಧಿಯವರು ಅವಿರೋಧವಾಗಿ ಮರು ಆಯ್ಕೆಯಾಗಿದ್ದಾರೆ.

ಪಕ್ಷದ ಸಂಸದರ ಸಭೆಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆಯವರು ಸಂಸದೀಯ ಪಕ್ಷದ ಅಧ್ಯಕ್ಷರಾಗಿ ಸೋನಿಯಾ ಗಾಂಧಿಯವರ ಹೆಸರನ್ನು ಪ್ರಸ್ತಾಪಿಸಿದರು. ಈ ಪ್ರಸ್ತಾವನೆಯನ್ನು ಗೌರವ್ ಗೊಗೊಯ್, ಕೆ ಸುಧಾಕರನ್ ಮತ್ತು ತಾರಿಕ್ ಅನ್ವರ್ ಅನುಮೋದಿಸಿದ್ದಾರೆ. ಸೋನಿಯಾ ಗಾಂಧಿಯವರು ಫೆಬ್ರವರಿಯಲ್ಲಿ ರಾಜ್ಯಸಭೆಗೆ ಆಯ್ಕೆಯಾಗಿದ್ದರು. ಪುಟ 2

### ಕುಮಾರಸ್ವಾಮಿ ಕೇಂದ್ರ ಸಚಿವರಾಗಿ ಪ್ರಮಾಣವಚನ ಸ್ವೀಕರಿಸುತ್ತಾರೆ



**ನವದೆಹಲಿ/ಬೆಂಗಳೂರು:** ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿ ಭರ್ಜರಿ ಗೆದ್ದಿರುವ ಮಾಜಿ ಮುಖ್ಯಮಂತ್ರಿ, ಸಂಸದ ಹೆಚ್ ಡಿ ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾಗಿ ಪ್ರಮಾಣವಚನ ಸ್ವೀಕರಿಸುತ್ತಾರೆ ಎಂದು ಬಿಜೆಪಿ ನೂತನ ಸಂಸದ ಡಾ.ಮಂಜುನಾಥ್ ಹೇಳಿದರು. ನವದೆಹಲಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಹೆ ಚ್ .ಡಿ. ಕುಮಾರಸ್ವಾಮಿಯವರು ಸಚಿವರಾಗುತ್ತಿರುವುದು ಖುಷಿ ತಂದಿದೆ. ಜೆಡಿಎಸ್ ಪಕ್ಷದ ನಾಯಕರು, ಕಾರ್ಯಕರ್ತರಿಗೆ ಆತ್ಮವಿಶ್ವಾಸ ತುಂಬಿದೆ ಎಂದರು. ಪುಟ 2

### ಘಟಾನುಘಟಿಗಳ ಕ್ಷೇತ್ರದಲ್ಲೇ ಕಾಂಗ್ರೆಸ್‌ಗೆ ಹಿನ್ನಡೆ

# ತಲೆದಂಡ ಇಲ್ಲ!

**ಬೆಂಗಳೂರು:** ಲೋಕಸಭೆ ಚುನಾವಣೆಯಲ್ಲಿ ಸ್ವ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಲೀಡ್ ಕೊಡಿಸಲು ವಿಫಲರಾಗಿ ರಾಹುಲ್ ಗಾಂಧಿ ಅವರ ಕೆಂಗಣ್ಣಿಗೆ ಗುರಿಯಾದ ಕೆಲವು ಸಚಿವರು ತಮ್ಮ ಪತ್ನಿ, ಪುತ್ರ ಹಾಗೂ ಸಂಬಂಧಿಕರೇ ಸ್ಪರ್ಧಿಸಿದ್ದರೂ ಅವರಿಗೆ ಲೀಡ್ ಕೊಡಿಸಲು ಸಾಧ್ಯವಾಗಿಲ್ಲ. ಕುತೂಹಲಕಾರಿ ಸಂಗತಿಯೆಂದರೆ, ಹೀಗೆ ಲೀಡ್ ಕೊಡಿಸದೆ ಇರುವವರಲ್ಲಿ ಅತ್ಯಂತ ಪ್ರಭಾವಿ ಸಚಿವರೇ ಹೆಚ್ಚಿದ್ದು, ಅವರ ಮೇಲೆ ಹೈಕಮಾಂಡ್ ನಿಜಕ್ಕೂ ಕ್ರಮ ಕೈಗೊಳ್ಳುವುದು ಅನುಮಾನ ಎಂದೇ ಹೇಳಲಾಗುತ್ತಿದೆ. ಸ್ವಂತ ಕ್ಷೇತ್ರದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಅಭ್ಯರ್ಥಿಗಳಿಗೆ ಲೀಡ್ ಕೊಟ್ಟಿರುವ ಸಚಿವರ ಪೈಕಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಮುಂದಿದ್ದಾರೆ.

» **ಲೀಡ್ ಕೊಡಿಸದ ಸಚಿವರ**



ತಮ್ಮ ಮಗನನ್ನು ಬೆಳಗಾವಿ ಕ್ಷೇತ್ರದಿಂದ ಬಿಜೆಪಿಯ ಜಗದೀಶ್ ಶೆಟ್ಟರ್ ವಿರುದ್ಧ ಕಣಕ್ಕಿಳಿಸಿದ್ದ ಅವರು ಸ್ವಂತ ಕ್ಷೇತ್ರವಾದ ಬೆಳಗಾವಿ ಗ್ರಾಮಾಂತರದಲ್ಲಿ ಬರೋಬ್ಬರಿ 50,529 ಮತಗಳ ಲೀಡ್ ಬಿಟ್ಟುಕೊಟ್ಟಿದ್ದಾರೆ. ಲಕ್ಷ್ಮೀ ಅವರ ಕ್ಷೇತ್ರದಲ್ಲಿ ಮೃಣಾಲ್ ಹೆಬ್ಬಾಳ್ಕರ್‌ಗೆ ಕೇವಲ 74,441 ಮತ ಬಂದಿದ್ದರೆ, ಜಗದೀಶ್ ಶೆಟ್ಟರ್ ಅವರಿಗೆ 1.24 ಲಕ್ಷ ಮತ ಬಂದಿದೆ. ತನ್ಮೂಲಕ ಸ್ವಂತ ಕ್ಷೇತ್ರದಲ್ಲಿ ಮಗನಿಗೆ ಹಿನ್ನಡೆಯಾಗುವಂತಾಗಿದೆ. ಇನ್ನು ದಾವಣಗೆರೆ ಉತ್ತರ ಶಾಸಕ ಹಾಗೂ ತೋಟಗಾರಿಕೆ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ ಅವರ ಕ್ಷೇತ್ರದಲ್ಲಿ ಅವರ ಪತ್ನಿ ಪ್ರಭಾ ಮಲ್ಲಿಕಾರ್ಜುನ ಅವರಿಗೆ ಬಿಜೆಪಿಯ ಗಾಯತ್ರಿ ಸಿದ್ದೇಶ್ವರ ವಿರುದ್ಧ 24,988 ಮತಗಳ ಹಿನ್ನಡೆ ಉಂಟಾಗಿದೆ.

ಅದೇ ರೀತಿ ಬೆಂಗಳೂರು ದಕ್ಷಿಣದಿಂದ ಪುತ್ರಿ ಸೌಮ್ಯಾರೆಡ್ಡಿ ಅವರನ್ನು ಕಣಕ್ಕಿಳಿಸಿದ್ದ ರಾಮಲಿಂಗಾರೆಡ್ಡಿ ಅವರು ಸ್ವಂತ ಕ್ಷೇತ್ರ ಬಿಟಿಎಂ ಲೇಔಟ್‌ನಲ್ಲಿ ಲೀಡ್ ಕೊಡಿಸಲು ವಿಫಲರಾಗಿದ್ದಾರೆ. ತೇಜಸ್ವಿ ಸೂರ್ಯ ವಿರುದ್ಧ ಬಿಟಿಎಂ ಬಡಾವಣೆಯಲ್ಲಿ ಸೌಮ್ಯಾರೆಡ್ಡಿ 9,349 ಮತಗಳ ಹಿನ್ನಡೆ ಅನುಭವಿಸಿದ್ದಾರೆ. ಇನ್ನು ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರ ಸೊರಬ ಕ್ಷೇತ್ರದಲ್ಲಿ ಅವರ ಸಹೋದರಿ ಗೀತಾ ಶಿವರಾಜ್ ಕುಮಾರ್ ಅವರಿಗೆ 17,937 ಮತಗಳ ಹಿನ್ನಡೆ ಉಂಟಾಗಿದೆ.

**ಹಿನ್ನಡೆ ಅನುಭವಿಸಿದ ಇತರೆ ಸಚಿವರು:** ಬೆಂಗಳೂರು ಕೇಂದ್ರ, ಲೋಕಸಭಾ ಕ್ಷೇತ್ರದ ಪೈಕಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಪ್ರತಿನಿಧಿಸುವ ಗಾಂಧಿನಗರದಲ್ಲಿ 23,324 ಮತಗಳ ಹಿನ್ನಡೆ, ಸಚಿವ ಕೆ.ಎಚ್.ಮುನಿಯಪ್ಪ ಪ್ರತಿನಿಧಿಸುವ ದೇವನಹಳ್ಳಿಯಲ್ಲಿ ಚಿಕ್ಕಬಳ್ಳಾಪುರ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ರಕ್ಷಾ ರಾಮಯ್ಯ ಅವರಿಗೆ 5,231 ಮತಗಳ ಹಿನ್ನಡೆ ಉಂಟಾಗಿದೆ. ಇನ್ನು ಉತ್ತರ ಕನ್ನಡ ಲೋಕಸಭೆ ಕ್ಷೇತ್ರದ ಭಟ್ಕಳ ಶಾಸಕ ಹಾಗೂ ಮೀನುಗಾರಿಕೆ ಸಚಿವ ಮಾಂಕಾಳ ವೈದ್ಯ ಅವರ ಕ್ಷೇತ್ರದಲ್ಲಿ ಡಾ.ಅಂಜಲಿ ನಿಂಬಾಳ್ಕರ್ ಅವರು 32,403 ಮತಗಳ ಹಿನ್ನಡೆ ಅನುಭವಿಸಿದ್ದಾರೆ.

ಕಾರ್ಮಿಕ ಸಚಿವ ಸಂತೋಷ್ ಲಾಡ್ ಪ್ರತಿನಿಧಿಸುವ ಧಾರವಾಡ ಲೋಕಸಭಾ ಕ್ಷೇತ್ರದ ಕಲಘಟಗಿ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ವಿನೋದ್ ಅಸೂಟಿ ವಿರುದ್ಧ ಬಿಜೆಪಿಯ ಪ್ರಹ್ಲಾದ್ ಜೋಷಿ ಅವರಿಗೆ 32,797 ಮತಗಳ ಲೀಡ್ ದೊರೆತಿದೆ. ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ಅವರ ಬಬಲೇಶ್ವರ ಕ್ಷೇತ್ರದಲ್ಲಿ ವಿಜಯಪುರ ಲೋಕಸಭೆ ಕಾಂಗ್ರೆಸ್ ಸ್ಪರ್ಧಿ ರಾಜು ಅಲಗೂರ ಅವರಿಗೆ 3,351 ಮತಗಳ ಅಲ್ಪ ಹಿನ್ನಡೆ ಆಗಿದೆ. ಸಚಿವ ಡಿ.ಸುಧಾಕರ್ ಅವರ ಚಿತ್ರದುರ್ಗದ ಹಿರಿಯೂರು ಕ್ಷೇತ್ರದಲ್ಲಿ ಬಿ.ಎನ್.ಚಂದ್ರಪ್ಪ ಅವರಿಗೆ 6,197 ಮತಗಳ ಹಿನ್ನಡೆ, ಕೋಲಾರದಲ್ಲಿ ಡಾ.ಎಂ.ಸಿ.ಸುಧಾಕರ್ ಅವರ ಚಿಂತಾಮಣಿ ಕ್ಷೇತ್ರದಲ್ಲಿ 7,250 ಮತಗಳ ಹಿನ್ನಡೆ ಉಂಟಾಗಿದೆ. ಇನ್ನು ತುಮಕೂರು ಜಿಲ್ಲೆಯ ಸಚಿವರಾದ ಡಾ.ಜಿ.ಪರಮೇಶ್ವರ್ ಹಾಗೂ ಕೆ.ಎನ್.ರಾಜಣ್ಣ ಇಬ್ಬರ ಕ್ಷೇತ್ರದಲ್ಲೂ ಕಾಂಗ್ರೆಸ್‌ಗೆ ಹಿನ್ನಡೆ ಉಂಟಾಗಿದೆ.

ತುಮಕೂರು ಕಾಂಗ್ರೆಸ್ ಅಭ್ಯರ್ಥಿ ಮುದ್ದಹನುಮೇಗೌಡ ವಿರುದ್ಧ ಬಿಜೆಪಿಯ ವಿ.ಸೋಮಣ್ಣ ಅವರಿಗೆ ಪರಮೇಶ್ವರ್ ಅವರ ಕೊರಟಗೆರೆಯಲ್ಲಿ 25,541, ಕೆ.ಎನ್.ರಾಜಣ್ಣ ಅವರ ಮಧುಗಿರಿ ಕ್ಷೇತ್ರದಲ್ಲಿ 12,802 ಮತಗಳ ಲೀಡ್ ಲಭಿಸಿದೆ. ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಲ್ಲಿ ಸಚಿವ ಕೃಷ್ಣ ಬೈರೇಗೌಡ ಅವರ ಬ್ಯಾಟರಾಯನಪುರ ಕ್ಷೇತ್ರದಲ್ಲಿ 35,051 ಮತ, ಮಂಡ್ಯ ಲೋಕಸಭೆ ಕ್ಷೇತ್ರದ ಸಚಿವ ಎನ್.ಚಲುವರಾಯಸ್ವಾಮಿ ಅವರ ನಾಗಮಂಗಲದಲ್ಲಿ 46,511, ಹಾವೇರಿ ಲೋಕಸಭೆ ಕ್ಷೇತ್ರದ ಪೈಕಿ ಸಚಿವ ಎಚ್.ಕೆ.ಪಾಟೀಲ್ ಅವರ ಗದಗ ಕ್ಷೇತ್ರದಲ್ಲಿ 10,509 ಮತಗಳ ಹಿನ್ನಡೆ ಉಂಟಾಗಿದೆ. ಸಚಿವ ಶಿವಾನಂದ ಪಾಟೀಲ್ ಅವರ ವಿಜಯಪುರ ಕ್ಷೇತ್ರದ ಬಸವನ ಬಾಗೇವಾಡಿಯಲ್ಲಿ 17,553 ಮತಗಳ ಲೀಡ್ ಪ್ರತಿಪಕ್ಷಕ್ಕೆ ದೊರೆತಿದೆ.

### ಹ್ಯಾಟ್ರಿಕ್ ಪ್ರಧಾನಿಯಾಗಿ ಇಂದು ಮೋದಿ ಶಪಥ

# ಯಾರ ಪಾಲಿಗೆ ಮಂತ್ರಿ ಭಾಗ್ಯ

**ನವದೆಹಲಿ:** ಇತ್ತೀಚೆಗೆ ನಡೆದ ಲೋಕಸಭಾ ಚುನಾವಣೆಯಲ್ಲಿ 293 ಸ್ಥಾನ ಗೆದ್ದು ಅಧಿಕಾರದ ಭಾಗ್ಯ ಪಡೆದಿರುವ ಬಿಜೆಪಿ ನೇತೃತ್ವದ ಎನ್‌ಡಿಎ ಕೂಟ ಇಂದು ಅಸ್ತಿತ್ವಕ್ಕೆ ಬರಲಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ಮಂತ್ರಿಮಂಡಲದ ಸದಸ್ಯರು ಸಂಜೆ 7.15ಕ್ಕೆ ಆರಂಭವಾಗಲಿರುವ ಕಾರ್ಯಕ್ರಮದಲ್ಲಿ ಪ್ರಮಾಣ ವಚನ ಸ್ವೀಕಾರ ಮಾಡುವುದರೊಂದಿಗೆ ನೂತನ ಸರ್ಕಾರ ರಚನೆಯಾಗಲಿದೆ. ಈ ಕಾರ್ಯಕ್ರಮದಲ್ಲಿ ನೆರೆಯ ಶ್ರೀಲಂಕಾ, ನೇಪಾಳ, ಬಾಂಗ್ಲಾದೇಶ, ಭೂತಾನ್, ಮಾರಿಷಸ್, ಸೀಶೆಲ್ಸ್ ದೇಶಗಳ ಮುಖ್ಯಸ್ಥರಿಗೂ ಆಹ್ವಾನ ನೀಡಲಾಗಿದ್ದು, ಅವರೆಲ್ಲಾ ಪ್ರಮಾಣ ವಚನಕ್ಕೆ ಸಾಕ್ಷಿಯಾಗಲಿದ್ದಾರೆ.

ಇದರೊಂದಿಗೆ ಪಂ. ಜವಾಹರಲಾಲ್ ನೆಹರು ಅವರ ನಂತರ ಸತತ 3ನೇ ಬಾರಿಗೆ ಪ್ರಧಾನಿ ಆದ ಮೊದಲ ಪ್ರಧಾನಿ ಎಂಬ ಕೀರ್ತಿಗೆ ಮೋದಿ ಭಾಜನರಾಗಲಿದ್ದಾರೆ. ಜತೆಗೆ ಸತತ 3 ಬಾರಿ ಪ್ರಧಾನಿಯಾದ ಏಕೈಕ ಕಾಂಗ್ರೆಸ್ಸೇತರ ನಾಯಕ ಎಂಬ ಕೀರ್ತಿಯನ್ನೂ ಮೋದಿ ಸಂಪಾದಿಸಲಿದ್ದಾರೆ. ಈ ಹಿಂದೆ 2014. 2019ರಲ್ಲಿ ಬಿಜೆಪಿ ಏಕಾಂಗಿಯಾಗಿ ಬಹುಮತ ಪಡೆದಿತ್ತು. ಮಿತ್ರರ ಬಲವೂ ಸೇರಿ ಎನ್‌ಡಿಎ ಮೈತ್ರಿಕೂಟ ಸಂಖ್ಯಾಬಲ 300ರ ಗಡಿ ದಾಟಿತ್ತು. ಆದರೆ ಈ ಬಾರಿ ಬಿಜೆಪಿ 240 ಮತ್ತು ಎನ್‌ಡಿಎ ಮೈತ್ರಿಕೂಟ 293 ಸ್ಥಾನ ಪಡೆದಿದೆ. ಹೀಗಾಗಿ 5 ವರ್ಷ ಪೂರ್ಣಕಾಲ ಮಿತ್ರಪಕ್ಷಗಳಾದ ಟಿಡಿಪಿ (16 ಸ್ಥಾನ), ಜೆಡಿಯು (12) ಸೇರಿದಂತೆ ಇತರೆ ಪಕ್ಷಗಳ ಬೆಂಬಲ ಅನಿವಾರ್ಯ. ಪ್ರಧಾನಿ ಮೋದಿ ಅವರ ಪಾಲಿಗೆ ಇದು ಮೊದಲ ಸಮ್ಮಿಶ್ರ ಸರ್ಕಾರದ ಅನುಭವ.

ಹೀಗಾಗಿಯೇ ಮಿತ್ರಪಕ್ಷಗಳು ಕೂಡಾ ಸಂಪುಟದಲ್ಲಿ ಹೆಚ್ಚಿನ ಸ್ಥಾನ ಮತ್ತು ಮಹತ್ವದ ಖಾತೆಗಳಿಗೆ ಬೇಡಿಕೆ ಸಲ್ಲಿಸಿವೆ ಎಂಬ ಮಾತುಗಳಿಗೆ. ಹೀಗಾಗಿ ಈ ಕಸರತ್ತನ್ನು ಪ್ರಧಾನಿ ಮೋದಿ ಮತ್ತು ಬಿಜೆಪಿ ಹೇಗೆ ನಿರ್ವಹಿಸುತ್ತದೆ ಎಂಬುದು ಸದ್ಯದ ಕುತೂಹಲ. ಪುಟ 2



### 12 ರಂದು ಚಂದ್ರಬಾಬು ನಾಯ್ಡು

# ಪ್ರಮಾಣವಚನ

**ಹೈದರಾಬಾದ್:** ಆಂಧ್ರಪ್ರದೇಶದ ಮುಖ್ಯಮಂತ್ರಿಯಾಗಿ ಟಿಡಿಪಿ ಮುಖ್ಯಸ್ಥ ಚಂದ್ರಬಾಬು ನಾಯ್ಡು ಅವರು ಇದೇ ಜೂ.12 ರಂದು ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಈ ಕುರಿತು ಆಂಧ್ರ ಸಿಎಂ ಅಧಿಕೃತ ಖಾತೆಯು ಎಕ್ಸ್‌ನಲ್ಲಿ ಪೋಸ್ಟ್ ಹಾಕಿದೆ. ಜೂ.12 ರಂದು ಬೆಳಗ್ಗೆ 11:27 ಕ್ಕೆ ಮುಖ್ಯಮಂತ್ರಿಯಾಗಿ ಚಂದ್ರಬಾಬು ನಾಯ್ಡು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಕೃಷ್ಣಾ ಜಿಲ್ಲೆಯ ಗನ್ನವರಂನ ಕೇಸರಪಲ್ಲಿ ಐಟಿ ಪಾರ್ಕ್‌ನಲ್ಲಿ ಪ್ರಮಾಣ ವಚನ ಸಮಾರಂಭ ನಡೆಯಲಿದೆ.



ಆಂಧ್ರಪ್ರದೇಶದಲ್ಲಿ ನಡೆದ 2024ರ ವಿಧಾನಸಭಾ ಚುನಾವಣೆಯಲ್ಲಿ ನಾಯ್ಡು ನೇತೃತ್ವದ ತೆಲುಗು ದೇಶಂ ಪಕ್ಷವು 175 ಸ್ಥಾನಗಳ ಪೈಕಿ 135 ಸ್ಥಾನಗಳನ್ನು ಗೆದ್ದು ಅಭೂತಪೂರ್ವ ಸಾಧನೆ ಮಾಡಿತು.

ಜನಸೇನಾ ಪಕ್ಷ 21, ಆಡಳಿತಾರೂಢ ಪಕ್ಷ ವೈಎಸ್‌ಆರ್‌ಸಿಪಿ ಕೇವಲ 11 ಹಾಗೂ ಬಿಜೆಪಿ 8 ಸ್ಥಾನಗಳನ್ನು ಗೆದ್ದಿದೆ.

### ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ

# ಬ್ಯಾಂಕ್ ಸಿಬ್ಬಂದಿಗೆ ಎಸ್‌ಐಟಿ ನೋಟಿಸ್

**ಬೆಂಗಳೂರು:** ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಬ್ಯಾಂಕ್ ಸಿಬ್ಬಂದಿಗೆ ಎಸ್‌ಐಟಿ ನೋಟಿಸ್ ನೀಡಿದೆ.

ಯೂನಿಯನ್ ಬ್ಯಾಂಕ್‌ನ ಮೂವರು ಸಿಬ್ಬಂದಿಗೆ ಎಸ್‌ಐಟಿ ನೋಟಿಸ್ ಕೊಟ್ಟಿದೆ. ಬ್ಯಾಂಕ್ ಮ್ಯಾನೇಜರ್ ಸುಚಿಸ್ಮಿತ ರೌಲ್, ಬ್ಯಾಂಕ್ ಬ್ರಾಂಚ್ ಹೆಡ್ ದೀಪಾ ಎಸ್, ಕೃಷ್ಣಮೂರ್ತಿಗೆ ನೋಟಿಸ್ ನೀಡಲಾಗಿದೆ. ತುರ್ತಾಗಿ ವಿಚಾರಣೆಗೆ ಹಾಜರಾಗಲು ನೋಟಿಸ್ ಕೊಡಲಾಗಿದೆ.

ಸಿಬಿಐ ಬಳಿಕ ಇ.ಡಿ ಈ ಪ್ರಕರಣಕ್ಕೆ ಎಂಟ್ರಿಕೊಟ್ಟಿದ್ದು, ಯೂನಿಯನ್ ಬ್ಯಾಂಕ್ ನೀಡಿದ ದೂರಿನ ಮಾಹಿತಿ ಪಡೆದಿದೆ. ಸಿಬಿಐ ಬಳಿ ಇ.ಡಿ ಅಧಿಕಾರಿಗಳು ಮಾಹಿತಿ ಪಡೆದುಕೊಂಡಿದ್ದಾರೆ. ಹಣ ಅಕ್ರಮ ವರ್ಗಾವಣೆ (ಹವಾಲ) ನಡೆದಿರೋ ಶಂಕೆ ಹಿನ್ನೆಲೆ ಇ.ಡಿ ಮಾಹಿತಿ ಪಡೆದಿದ್ದು, ಸಿಬಿಐ ಬಳಿ ಎಫ್‌ಐಆರ್ ಬಗೆಗಿನ ಮಾಹಿತಿ ಪಡೆದಿದೆ.

ಸಿಬಿಐ ಬಳಿಕ ಇ.ಡಿ ಎಫ್‌ಐಆರ್ ದಾಖಲಿಸುವ ಪುಟ 2

### ನೀಟ್ ವಿವಾದ ಪರಿಶೀಲನೆ

# 4 ತಜ್ಞರ ತಂಡ ರಚನೆ

**ನವದೆಹಲಿ:** ವೈದ್ಯಕೀಯ ಸ್ನಾತಕೋತ್ತರ ಸಾಮಾನ್ಯ ಪ್ರವೇಶ ಪರೀಕ್ಷೆಯಾದ 'ನೀಟ್' ಫಲಿತಾಂಶದಲ್ಲಿ ಭಾರಿ ಅಕ್ರಮ ನಡೆದಿದೆ ಎಂಬ ಆರೋಪಗಳ ಬೆನ್ನಲ್ಲೇ, ಈ ಆರೋಪಗಳ ಕುರಿತು ತನಿಖೆ ನಡೆಸಲು ಕೇಂದ್ರ ಶಿಕ್ಷಣ ಸಚಿವಾಲಯವು ನಾಲ್ವರು ತಜ್ಞರ ತಂಡ ರಚಿಸಿದೆ. ಈ ತಂಡವು, 'ಆಯ್ದ 6 ಪರೀಕ್ಷಾ ಕೇಂದ್ರಗಳ 1500 ನೀಟ್ ವಿದ್ಯಾರ್ಥಿಗಳಿಗೆ ಗ್ರೇಸ್ ಮಾರ್ಕ್ಸ್ ನೀಡಿದ ಕಾರಣ ಅವರೆಲ್ಲಾ ಗರಿಷ್ಠ ಅಂಕ ಪಡೆಯಲು ಸಾಧ್ಯವಾಯಿತು' ಎಂಬ ಆರೋಪದ ತನಿಖೆ ನಡೆಸಲಿದೆ.

ಯುಪಿಎಸ್‌ಸಿ ಮಾಜಿ ಮುಖ್ಯಸ್ಥರ ನೇತೃತ್ವದ ನಾಲ್ವರ ತಂಡ ಆರೋಪಗಳ ಕುರಿತು ಪರಿಶೀಲನೆ ನಡೆಸಿ ಇನ್ನೊಂದು ವಾರದಲ್ಲಿ ತನ್ನ ವರದಿಯನ್ನು ಕೇಂದ್ರಕ್ಕೆ ಸಲ್ಲಿಸಲಿದೆ. ಅದರ ಆಧಾರದಲ್ಲಿ ನೀಟ್ ಪರೀಕ್ಷೆಗಳನ್ನು ಆಯೋಜಿಸುವ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ (ಎನ್‌ಟಿಎ), ಕೆಲ ಟಾಪರ್ಸ್‌ಗಳ ಅಂಕದಲ್ಲಿ ಬದಲಾವಣೆ ಮಾಡುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.



ಈ ಬಾರಿ ನೀಟ್ ಸ್ನಾತಕೋತ್ತರ ಪ್ರವೇಶ ಪರೀಕ್ಷೆಯಲ್ಲಿ ದಾಖಲೆಯ 67 ವಿದ್ಯಾರ್ಥಿಗಳು ಮೊದಲ ರ್‍ಯಾಂಕ್ ಪಡೆದಿದ್ದರು. ಪುಟ 2

# ಪ್ರತಿ ಸೋಮವಾರ ಕೇಂದ್ರ ಕಚೇರಿಗಳಿಗೆ ಅಧಿಕಾರಿ, ನೌಕರರ ಹಾಜರು ಕಡ್ಡಾಯ

**ಬೆಂಗಳೂರು:** ಪ್ರತಿಯೊಂದು ಇಲಾಖೆಯ ಅಧಿಕಾರಿ, ನೌಕರರು ಪ್ರತಿ ಸೋಮವಾರಗಳಂದು ತಮ್ಮ ತಮ್ಮ ಕೇಂದ್ರ ಸ್ಥಾನದ ಕಚೇರಿಗಳಲ್ಲಿ ಹಾಜರಿದ್ದು, ಕಚೇರಿಗಳಿಗೆ ಆಗಮಿಸುವ ಜನರಿಗೆ ಸರ್ಕಾರಿ ಸೇವೆಗಳನ್ನು ಒದಗಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರ ಸೂಚನೆಯಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ವಿಮಲಾಕ್ಷಿ. ಬಿ ಅವರು ಎಲ್ಲಾ ಸರ್ಕಾರಿ ಇಲಾಖೆಗಳಿಗೆ ಆದೇಶ ಹೊರಡಿಸಿದ್ದಾರೆ.

ಕರ್ನಾಟಕವು ಕೃಷಿ ಪ್ರಧಾನವಾದ ರಾಜ್ಯವಾಗಿದ್ದು, ಸಾಮಾನ್ಯವಾಗಿ ಕೃಷಿಕರು ಸೋಮವಾರದ ದಿನದಂದು ತುಸುಮಟ್ಟಿಗೆ ಕೃಷಿ ಚಟುವಟಿಕೆಗಳಿಗೆ ಬಿಡುವು ನೀಡಿ, ಸಂತೆ, ಪೇಟೆ ಕೆಲಸಗಳು ಹಾಗೂ ಕಚೇರಿಗಳಿಗೆ ತಮ್ಮ ಕೆಲಸಗಳಿಗಾಗಿ ಹೋಗುವುದು ಹಿಂದಿನಿಂದ ನಡೆದುಕೊಂಡು ಬಂದ ವಾಡಿಕೆಯಾಗಿದೆ.



ಈ ಹಿಂದೆ, ಪ್ರತಿ ಸೋಮವಾರಗಳಂದು ತಾಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳಾದಿಯಾಗಿ ಎಲ್ಲರೂ ತಮ್ಮ ತಮ್ಮ ಕೇಂದ್ರಸ್ಥಾನದ ಕಚೇರಿಗಳಲ್ಲಿದ್ದು, ಜನರ ಕೆಲಸಗಳನ್ನು ಮಾಡುತ್ತಿದ್ದರು. ಆದರೆ, ಕೃಷಿಯೇತರ ಹಿನ್ನೆಲೆಯಿಂದ ಅಧಿಕಾರಿಗಳು, ನೌಕರರು ಸರ್ಕಾರಿ ಸೇವೆಗೆ ಬರುವ ಪ್ರಮಾಣ ಹೆಚ್ಚಿದ ಮೇಲೆ ಈ ಪದ್ಧತಿಯಲ್ಲಿ ಸ್ವಲ್ಪ ಮಟ್ಟಿಗೆ ಏರು ಪೇರಾಗಿದೆ. ಆದ್ದರಿಂದ, ಪ್ರತಿಯೊಂದು ಇಲಾಖೆಯ ಅಧಿಕಾರಿ, ನೌಕರರು ಪ್ರತಿ ಸೋಮವಾರಗಳಂದು ತಮ್ಮ ತಮ್ಮ ಕೇಂದ್ರಸ್ಥಾನದ ಕಚೇರಿಗಳಲ್ಲಿ ಹಾಜರಿದ್ದು, ಕರ್ತವ್ಯ ನಿರ್ವಹಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಎಂಎಲ್‌ಸಿ ಅಡಗೂರು ಎಚ್.ವಿಶ್ವನಾಥ್ ಮನವಿ ಕೋರಿದ್ದರು. ಈ ಬಗ್ಗೆ ಸಕಾರಾತ್ಮಕವಾಗಿ ಸಿಎಂ ಸಿದ್ದರಾಮಯ್ಯ ಸ್ಪಂದಿಸಿ, ಅಗತ್ಯ ಕ್ರಮವಹಿಸಲು ಸೂಚನೆ ನೀಡಿದ್ದಾರೆ.

**ಸಾರಿಗೆ ನಿಗಮಕ್ಕೂ ಅನ್ವಯ:** ಪ್ರತಿ ಸೋಮವಾರಗಳಂದು ಪ್ರತಿಯೊಂದು ಇಲಾಖೆಯ ಅಧಿಕಾರಿ, ನೌಕರರು ತಮ್ಮ ಕೇಂದ್ರ ಸ್ಥಾನದ ಕಚೇರಿಗಳಲ್ಲಿ ಹಾಜರಿದ್ದು, ಕರ್ತವ್ಯ ನಿರ್ವಹಿಸಬೇಕು ಎಂಬ ರಾಜ್ಯ ಸರ್ಕಾರ ಸೂಚನೆಯು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಕ್ಕೂ ಅನ್ವಯವಾಗಿದೆ. ನಿಗಮ ವ್ಯಾಪ್ತಿಯ ಎಲ್ಲಾ ಕಚೇರಿಗಳಲ್ಲಿ ತುರ್ತು ಕಾರ್ಯಗಳನ್ನು ಹೊರತುಪಡಿಸಿ. ಪ್ರತಿ ಸೋಮವಾರಗಳಂದು ತಮ್ಮ ಕೇಂದ್ರ ಸ್ಥಾನದ ಕಚೇರಿಗಳಲ್ಲಿ ಹಾಜರಿದ್ದು, ಸೇವೆ ಒದಗಿಸಬೇಕು ಎಂದು ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ಸುತ್ತೋಲೆ ಹೊರಡಿಸಿದ್ದಾರೆ.

### ವಾಲ್ಮೀಕಿ ನಿಗಮದ ಹಗರಣ

# ಸಿಎಂ ನೈತಿಕ ಹೊಣೆಹೊತ್ತು ರಾಜೀನಾಮೆ ನೀಡಲಿ

**ಬೆಂಗಳೂರು:** ವಾಲ್ಮೀಕಿ ಅಭಿವೃದ್ಧಿ ನಿಗಮದ ಭಾರೀ ಹಗರಣ ಸಂಬಂಧ ನಿಗಮದ ಅಧ್ಯಕ್ಷ ಮತ್ತು ಶಾಸಕ ಬಸನಗೌಡ ದದ್ದಲ್ ಹಾಗೂ ಸಚಿವ ಶರಣಪ್ರಕಾಶ್ ಪಾಟೀಲರ ರಾಜೀನಾಮೆ ಪಡೆದು, ಪ್ರಕರಣದಲ್ಲಿ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ವಿಧಾನಪರಿಷತ್‌ನ ವಿಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆಗ್ರಹಿಸಿದ್ದಾರೆ.



ಮಲ್ಲೇಶ್ವರದ ಬಿಜೆಪಿ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಒಂದಾದ ನಂತರ ಒಂದು ಸಾಕ್ಷ್ಯಾಧಾರಗಳು ಸಿಗುತ್ತಿವೆ. ಇದು ದಲಿತರ ಹಣ ಲೂಟಿಯ ಬ್ರಹ್ಮಾಂಡ ಭ್ರಷ್ಟಾಚಾರದ ಪ್ರಕರಣವಾಗಿದೆ. ಇನ್ನೂ ಬೇರೆ ಬೇರೆ ಇಲಾಖೆಗಳಲ್ಲೂ ಭ್ರಷ್ಟಾಚಾರ ಹಗರಣ ನಡೆದ ವಾಸನೆ ನಮಗೆ ಸಿಗುತ್ತಿದೆ. ಇವುಗಳ ಸಾಕ್ಷ್ಯಾಧಾರ ಸಂಗ್ರಹದ ಪ್ರಯತ್ನ ನಡೆದಿದೆ ಎಂದು ಅವರು ಎಚ್ಚರಿಸಿದ್ದಾರೆ.

ಅತ್ಯಂತ ಪ್ರಾಮಾಣಿಕ ಅಧಿಕಾರಿ ಚಂದ್ರಶೇಖರನ್ ಅವರು ಪತ್ರ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದರು. ಅವರು ತಮ್ಮ ಪತ್ರದಲ್ಲಿ ಸಚಿವರ ಮೌಖಿಕ ಸೂಚನೆ ಮೇರೆಗೆ ಹಣದ ವರ್ಗಾವಣೆ ಆಗಿದೆ ಎಂದು ಉಲ್ಲೇಖಿಸಿದ್ದರು. ಇದೀಗ ಲೆಕ್ಕಾಧಿಕಾರಿ ಪರಶುರಾಮ್ ಅವರು 24ರಂದು ವೈದ್ಯಕೀಯ ಶಿಕ್ಷಣ ಸಚಿವರ ಕಚೇರಿಯಲ್ಲಿ ಸಭೆ ಕುರಿತು ಮಾಹಿತಿ ನೀಡಿದ್ದಾರೆ. ಈಗಾಗಲೇ ಸಚಿವ ನಾಗೇಂದ್ರ ಅವರು ರಾಜೀನಾಮೆ ಕೊಟ್ಟಿದ್ದಾರೆ. ವಾಲ್ಮೀಕಿ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್ ಯಾಕೆ ರಾಜೀನಾಮೆ ಕೊಟ್ಟಿಲ್ಲ ಅವರನ್ನು ಮುಖ್ಯಮಂತ್ರಿಗಳು ರಕ್ಷಿಸುತ್ತಿರುವುದು ಯಾವ ಕಾರಣಕ್ಕೆ ಎಂದು ಅವರು ಪ್ರಶ್ನಿಸಿದ್ದಾರೆ. ಪುಟ 2

### ಗಾಜಾ ನಿರಾಶ್ರಿತರ ಶಿಬಿರದ ಮೇಲೆ ಇಸ್ರೇಲ್ ದಾಳಿ

# 210 ಜನರ ದುರ್ಮರಣ



**ಟೆಲ್ ಅವಿವ್:** ಗಾಜಾ ನಿರಾಶ್ರಿತರ ಶಿಬಿರದ ಮೇಲೆ ಇಸ್ರೇಲ್ ನಡೆಸಿದ ದಾಳಿಯಲ್ಲಿ ಕನಿಷ್ಠ 210 ಜನ ಸಾವನ್ನಪ್ಪಿದ್ದು, 400ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ ಎಂದು ಹಮಾಸ್‌ನ ಸರ್ಕಾರಿ ಮಾಧ್ಯಮ ಕಚೇರಿ ತಿಳಿಸಿದೆ.

ನುಸಿರಾತ್‌ನಲ್ಲಿ ನಾಲ್ವರು ಇಸ್ರೇಲಿ ಒತ್ತೆಯಾಳುಗಳನ್ನು ರಕ್ಷಿಸಿರುವುದಾಗಿ ಇಸ್ರೇಲ್‌ನ ಸೇನೆ ಘೋಷಿಸಿದ ನಂತರ ದೊಡ್ಡ ಪ್ರಮಾಣದ ದಾಳಿ ನಡೆದಿದೆ. ಪುಟ 2

## ನಿಯಂತ್ರಣ ತಪ್ಪಿ ಕೆರೆಗೆ ಬಿದ್ದ ಕಾರು– ನಾಲ್ವರು ಗಂಭೀರ



**ರಾಮನಗರ:** ನಿಯಂತ್ರಣ ತಪ್ಪಿ ಕಾರೊಂದು ಹೆದ್ದಾರಿ ಪಕ್ಕದ ಕೆರೆಗೆ ಬಿದ್ದ ಪರಿಣಾಮ ನಾಲ್ವರು ಗಂಭೀರ ಗಾಯಗೊಂಡ ಘಟನೆ ಬೆಂಗಳೂರು–ಮೈಸೂರು ದಶಪಥ ಹೆದ್ದಾರಿಯಲ್ಲಿ ನಡೆದಿದೆ. ಬೆಂಗಳೂರಿನಿಂದ ಸ್ಕೋಡಾ ಕಾರು ಮೈಸೂರು ಕಡೆಗೆ ಹೋಗುತ್ತಿತ್ತು. ಚನ್ನಪಟ್ಟಣ ತಾಲೂಕಿನ ಸಂಕಲಗೆರೆ ಗೇಟ್ ಬಳಿ ಹೆದ್ದಾರಿಯಿಂದ ಸರ್ವಿಸ್ ರಸ್ತೆಗೆ ಬರುವ ವೇಳೆ ಘಟನೆ ನಡೆದಿದೆ. ಫಿಲ್ಮೀ ಸ್ಟೈಲ್‌ನಲ್ಲಿ ಕಾರು ಕೆರೆಗೆ ಬಿದ್ದಿದ್ದು, ಓವರ್ ಸ್ಪೀಡ್‌ನಿಂದಾಗಿ ಸರ್ವಿಸ್ ರಸ್ತೆಗೆ ಬರುವ ವೇಳೆ ಕಾರು ಕೆರೆಗೆ ಹಾರಿದೆ. ಘಟನೆಯಲ್ಲಿ ನಾಲ್ವರು ಗಂಭೀರ ಗಾಯಗೊಂಡಿದ್ದಾರೆ. ಗಾಯಾಳುಗಳಿಗೆ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನಾ ಸ್ಥಳಕ್ಕೆ ಚನ್ನಪಟ್ಟಣ ಸಂಚಾರಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಆಕಸ್ಮಿಕ ಬೆಂಕಿಗೆ 5 ಅಂಗಡಿಗಳು ಭಸ್ಮ

**ಹಾವೇರಿ/ಚಿಕ್ಕಮಗಳೂರು:** ಆಕಸ್ಮಿಕ ಬೆಂಕಿ ಹೊತ್ತಿಕೊಂಡು ಐದಕ್ಕೂ ಅಧಿಕ ಅಂಗಡಿಗಳು ಸುಟ್ಟು ಕರಕಲಾದ ಘಟನೆ ಹಾವೇರಿ ಜಿಲ್ಲೆ ಹಿರೇಕೆರೂರು ತಾಲೂಕಿನ ಚಿಕ್ಕೇರೂರು ಗ್ರಾಮದಲ್ಲಿ ನಡೆದಿದೆ.ಇಲೆಕ್ಟ್ರಿಕಲ್ ಅಂಗಡಿ, ಬೇಕರಿ, ಬೊಂಬೆ ಅಂಗಡಿ, ಫೂಟ್‌ವೇರ್ ಮತ್ತು ಹೊಟೇಲ್‌ಗೆ ಬೆಂಕಿ ಬಿದ್ದಿದ್ದು, ಅಂಗಡಿಯಲ್ಲಿನ ವಸ್ತುಗಳು ಸುಟ್ಟು ಭಸ್ಮವಾಗಿವೆ. ಫೂಟ್‌ವೇರ್ ಅಂಗಡಿಯಿಂದ ದಟ್ಟಹೊಗೆ ಆವರಿಸಿದ್ದು, ದಟ್ಟವಾದ ಹೊಗೆಗೆ ಗ್ರಾಮಸ್ಥರು ಬೆಚ್ಚಿ ಬಿದ್ದಿದ್ದಾರೆ. ಸ್ಥಳಕ್ಕೆ ಅಗ್ನಿಶಾಮಕ ದಳದ ಸಿಬ್ಬಂದಿ ಆಗಮಿಸಿ ಬೆಂಕಿ ನಂದಿಸುವ ಕಾರ್ಯದಲ್ಲಿ ತೊಡಗಿದ್ದಾರೆ. ಸುಮಾರು 30 ಲಕ್ಷಕ್ಕೂ ಅಧಿಕ ಮೌಲ್ಯದ ವಸ್ತುಗಳು ಹಾನಿಯಾಗಿವೆ ಎಂದು ಅಂದಾಜಿಸಲಾಗಿದೆ. ಸ್ಥಳಕ್ಕೆ ಹಿರೇಕೆರೂರು ಶಾಸಕ ಯುಬಿ ಬಣಕಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಹಂಸಭಾವಿ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಇನ್ನೊಂದೆಡೆ ಶಾರ್ಟ್ ಸರ್ಕ್ಯೂಟ್‌ನಿಂದ ರಸ್ತೆ ಮಧ್ಯೆಯೇ ಕಾರು ಹೊತ್ತಿ ಉರಿದಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲೂಕಿನ ಸರಸ್ವತಿಪುರ ಗೇಟ್ ಬಳಿ ನಡೆದಿದೆ. ನೋಡುನೋಡುತ್ತಿದ್ದಂತೆಯೇ ಬೆಂಕಿಯ ಕೆನ್ನಾಲಿಗೆಗೆ ಸ್ವಿಫ್ಟ್ ಕಾರು ಬೂದಿಯಾಗಿದೆ. ಚಿಕ್ಕಮಗಳೂರಿನಿಂದ ಹುಬ್ಬಳ್ಳಿಗೆ ತೆರಳುತ್ತಿದ್ದ ಸಂದರ್ಭ ಏಕಾಏಕಿ ಕಾರಿನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆ ಕಾರಿನಲ್ಲಿದ್ದ ಪ್ರಯಾಣಿಕರು ಕೆಳಗಿಳಿದು ಜೀವ ಉಳಿಸಿಕೊಂಡಿದ್ದಾರೆ. ಬಳಿಕ ಕಡೂರು ಅಗ್ನಿಶಾಮಕ ಠಾಣೆಯ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ. ಕಡೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.



### ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಬಹುಕೋಟಿ ಹಗರಣ

# ತನಿಖೆಗೆ ಸಿಬಿಐ ಬಳಿಕ ಇಡಿ ಎಂಟ್ರಿ!

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ 187 ಕೋಟಿ ರೂ. ಹಗರಣ ಪ್ರಕರಣಕ್ಕೆ ಈಗ ಸಿಬಿಐ ಬಳಿಕ ಜಾರಿ ನಿರ್ದೇಶನಾಲಯ ಎಂಟ್ರಿ ಆಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಸಿಬಿಐ ಬಳಿಕ ಜಾರಿ ನಿರ್ದೇಶನಾಲಯ ಎಂಟ್ರಿ ಆಗಿದ್ದು, ಯೂನಿಯನ್ ಬ್ಯಾಂಕ್ ನೀಡಿದ್ದ ದೂರು ಹಾಗೂ ಅಕ್ರಮ ಹಣ ವರ್ಗಾವಣೆ ನಡೆದಿರುವ ಬಗ್ಗೆ ಸಿಬಿಐನಿಂದ ಮಾಹಿತಿ ಪಡೆದುಕೊಂಡಿದೆ. ಜೊತೆಗೆ ಸಿಬಿಐ ದಾಖಲಿಸಿರುವ ಎಫ್‌ಐಆರ್ ಬಗ್ಗೆಯೂ ಮಾಹಿತಿ ಪಡೆದಿದ್ದು, ಮುಂದಿನ ವಾರದಲ್ಲೇ ಇಡಿ ಇನ್ನಷ್ಟು ತನಿಖೆಯೊಂದಿಗೆ ಎಫ್‌ಐಆರ್ ದಾಖಲಿಸುವ ಸಾಧ್ಯತೆಯಿದೆ ಎಂದು ಉನ್ನತ ಮೂಲಗಳು ಮಾಹಿತಿ ನೀಡಿವೆ.

ಈಗಾಗಲೇ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಹಗರಣಕ್ಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಯೂನಿಯನ್ ಬ್ಯಾಂಕ್ ತನ್ನ ಮೂವರು ಸಿಬ್ಬಂದಿಯನ್ನು ಅಮಾನತುಗೊಳಿಸಿದೆ.



ಖಾತೆಗಳಲ್ಲಿನ ವಂಚನೆಯ ವಹಿವಾಟಿನ ಬಗ್ಗೆ ಬ್ಯಾಂಕ್ ಅರಿವು ಹೊಂದಿದೆ. ಅಕ್ರಮಗಳು ಬೆಳಕಿಗೆ ಬಂದಾಗ ಬ್ಯಾಂಕ್ ತಕ್ಷಣವೇ ಪ್ರಶ್ನಾರ್ಹ ವಹಿವಾಟುಗಳನ್ನು ವಂಚನೆ ಎಂದು ಘೋಷಿಸಿದೆ. ಸಂಪೂರ್ಣ ತನಿಖೆ ಮತ್ತು ಅಪರಾಧಿಗಳ ಪತ್ತೆಗಾಗಿ ಮೇ 30 ರಂದು ಕೇಂದ್ರೀಯ ತನಿಖಾ ದಳಕ್ಕೆ ದೂರು ನೀಡಿದ್ದೇವೆ. ಮುಂದಿನ ವಿಚಾರಣೆಗಾಗಿ ಮೂವರು ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ. ಈ ಸಮಸ್ಯೆಯನ್ನು ನ್ಯಾಯಯುತವಾಗಿ ಮತ್ತು ತ್ವರಿತವಾಗಿ ಪರಿಹರಿಸಲು ನಾವು ಅಧಿಕಾರಿಗಳಿಗೆ ಸಂಪೂರ್ಣ ಸಹಕಾರ ನೀಡುತ್ತೇವೆ ಮತ್ತು ಅಂತಹ ಘಟನೆಗಳನ್ನು ತಡೆಯಲು ನಾವು ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದೇವೆ ಎಂದು ಹೇಳಿದೆ.

**ಏನಿದು ಪ್ರಕರಣ :** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರನ್ ಇತ್ತೀಚೆಗೆ ಶಿವಮೊಗ್ಗದಲ್ಲಿರುವ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಆತ್ಮಹತ್ಯೆಗೂ ಮುನ್ನ ಬರೆದಿದ್ದ ಡೆತ್‌ನೋಟ್‌ನಲ್ಲಿ ಮೂವರು ಹೆಸರು ಹಾಗೂ ಬಹುಕೋಟಿ ಹಗರಣ ನಡೆದಿರುವ ಬಗ್ಗೆ ಉಲ್ಲೇಖಿಸಿದ್ದರು. ಈ ಬೆನ್ನಲ್ಲೇ ಬ್ಯಾಂಕ್‌ನಿಂದ 94 ಕೋಟಿ ರೂ. ಅಕ್ರಮವಾಗಿ ವರ್ಗಾವಣೆಯಾಗಿದೆ. ಹಣ ವರ್ಗಾವಣೆಯಾದ ಬಗ್ಗೆ ಯಾವುದೇ ಮೇಲ್, ಮೆಸೇಜ್ ಬಂದಿಲ್ಲ. ಬ್ಯಾಂಕ್ ಸಿಬ್ಬಂದಿಯಿಂದಲೇ ನಕಲಿ ದಾಖಲೆ ಸೃಷ್ಟಿಸಿ ವಂಚನೆ ಎಸಗಿದ್ದಾರೆ ಎಂದು ಆರೋಪಿಸಿ ನಿಗಮದ ಪ್ರಧಾನ ವ್ಯವಸ್ಥಾಪಕ ರಾಜಶೇಖರ್ ಅವರು ದೂರು ನೀಡಿದ್ದರು. ದೂರಿನ ಆಧಾರದ ಮೇಲೆ ಬ್ಯಾಕ್‌ನ 6 ಮಂದಿ ಸಿಬ್ಬಂದಿ ವಿರುದ್ಧ ಹೈಗ್ರೌಂಡ್ಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು.

## ನಮ್ಮ ನಾಯಕರು ಸೂಚಿಸಿದ್ರೆ ರಾಜೀನಾಮೆ ಕೊಡಲು ಸಿದ್ಧ

**ಬೆಂಗಳೂರು:** ನಮ್ಮ ನಾಯಕರು ಸೂಚಿಸಿದ್ರೆ ರಾಜೀನಾಮೆ ಕೊಡಲು ಸಿದ್ಧನಿದ್ದೇನೆ ಎಂದು ವಾಲ್ಮೀಕಿ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್ ಹೇಳಿದ್ದಾರೆ.



ಮಾಧ್ಯಮದ ಜೊತೆ ಮಾತನಾಡಿದ ಅವರು, ಇದರ ಹಿಂದೆ ದೊಡ್ಡ ಜಾಲವೇ ಇದೆ. ಎಲ್ಲವೂ ತನಿಖೆಯಲ್ಲಿ ಬಹಿರಂಗವಾಗಲಿದೆ. ಎಸ್‌ಐಟಿ ತನಿಖೆ ನಡೆಯುತ್ತಿದೆ. ಸಿಬಿಐ ಕೂಡ ತನಿಖೆ ನಡೆಸುತ್ತಿದೆ. ಯಾರೇ ಕರೆದರೂ ಹೋಗುತ್ತೇನೆ ಸಹಕಾರ ಕೊಡುತ್ತೇನೆ ಎಂದು ತಿಳಿಸಿದ್ದಾರೆ.

ಇಡೀ ಪ್ರಕರಣದಲ್ಲಿ ನನ್ನದು ಯಾವ ಪಾತ್ರವೂ ಇಲ್ಲ. ನಾನು ಅಧ್ಯಕ್ಷನಾಗಿ ಅಧಿಕಾರ ಸ್ವೀಕರಿಸಿದ ಮೇಲೆ ಚುನಾವಣಾ ನೀತಿ ಸಂಹಿತೆ ಬಂತು. ಆದ್ದರಿಂದ ನಾನು ಯಾವುದೇ ಸಭೆ ನಡೆಸಿಲ್ಲ. ನೀತಿ ಸಂಹಿತೆ ಮುಗಿದಿದೆ ಈಗ ಎಲ್ಲಾ ಮಾಹಿತಿ ಪಡೆಯುತ್ತೇನೆ ಎಂದರು.

ನನ್ನ ಯಾವ ಪಾತ್ರವೂ ಇಲ್ಲಾ. ವಾಟ್ಸಪ್ ಚಾಟ್ ಅಥವಾ ಯಾವುದೇ ಸಾಕ್ಷ್ಯ ಇದ್ದರೂ ಎಲ್ಲವೂ ತನಿಖೆಯಲ್ಲಿ ಬಹಿರಂಗ ಆಗಲಿದೆ. ಇಡಿ ಪ್ರಕರಣದಲ್ಲಿ ನನ್ನ ಪಾತ್ರ ಇಲ್ಲ ಎಲ್ಲವೂ ತನಿಖೆಯಲ್ಲಿ ಬಹಿರಂಗವಾಗಲಿದೆ ಎಂದು ದದ್ದಲ್ ಮತ್ತೊಮ್ಮೆ ಪುನರುಚ್ಚರಿಸಿದ್ದಾರೆ.

ವಾಲ್ಮೀಕಿ ನಿಗಮದ ಬಹುಕೋಟಿ ಹಗರಣ ಪ್ರಕರಣ ಸಂಬಂಧ ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ ಬೆನ್ನಲ್ಲೇ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್ ವಿರುದ್ಧ ಆರೋಪ ಕೇಳಿಬಂದಿತು. ಅಲ್ಲದೇ ದದ್ದಲ್ ಕೂಡ ರಾಜೀನಾಮೆ ನೀಡುವಂತೆ ಜೆಡಿಎಸ್ ಆಗ್ರಹ ಮಾಡಿತ್ತು.

# ಕುಮಾರ್ ಬಂಗಾರಪ್ಪ ನಿವಾಸಕ್ಕೆ ಶಿವಣ್ಣ ಅಭಿಮಾನಿಗಳಿಂದ ಮುತ್ತಿಗೆ

**ಬೆಂಗಳೂರು:** ಶಾಸಕ ಕುಮಾರ್ ಬಂಗಾರಪ್ಪ ನಿವಾಸಕ್ಕೆ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಅಭಿಮಾನಿಗಳು ಇಂದು ಮುತ್ತಿಗೆ ಹಾಕಿದ್ದಾರೆ.

ಶಿವರಾಜ್ ಕುಮಾರ್ ಹಾಗೂ ರಾಜ್ ಕುಮಾರ್ ಕುಟುಂಬದ ಬಗ್ಗೆ ಲಘುವಾಗಿ ಮಾತಾಡಿದ್ದಾರೆ. ಅದು ನಮಗೆ ನೋವಾಗಿದೆ ಅವರನ್ನ ಹೊರಗೆ ಕರೆಸಿ ಕ್ಷಮೆ ಕೇಳುವಂತೆ ಆಗ್ರಹಿಸಿ ಅಭಿಮಾನಿಗಳು ಆಕ್ರೋಶ ಹೊರಹಾಕಿದ್ದಾರೆ.

ಇತ್ತ ಮನೆ ಗೇಟ್ ಒಳಗೆ ನುಗ್ಗಿ ಕುಮಾರ್ ಬಂಗಾರಪ್ಪ ವಿರುದ್ಧ ಧಿಕ್ಕಾರ ಕೂಗಿದ್ದಾರೆ. ಪರಿಸ್ಥಿತಿ ವಿಕೋಪಕ್ಕೆ ತಿರುಗುತ್ತಿದ್ದಂತೆಯೇ ಸ್ಥಳಕ್ಕೆ ಪೊಲೀಸರು ದೌಡಾಯಿಸಿದ್ದಾರೆ. ಈ ವೇಳೆ ಪೊಲೀಸರು ಹಾಗೂ ಶಿವಣ್ಣ ಅಭಿಮಾನಿಗಳ ನಡುವೆ ಮಾತಿನ ಚಕಮಕಿ ನಡೆದಿದೆ.

ಮನೆ ಬಾಗಿಲಿನಿಂದ ಹೊರ ಹೋಗುವಂತೆ ಪೊಲೀಸರು ನನ ಅಭಿಮಾನಿಗಳಿಗೆ ವಾರ್ನಿಂಗ್ ಮಾಡಿದರು. ಬಳಿಕ ಕುಮಾರ್ ಬಂಗಾರಪ್ಪ ನಿವಾಸಕ್ಕೆ ಕೆಎಸ್ ಆರ್ ಪಿ ತುಕಡಿ ಆಗಮಿಸಿ ಹೆಚ್ಚಿನ ಭದ್ರತೆ ಒದಗಿಸಲಾಗಿದೆ. ಇನ್ನು ಕುಮಾರ ಬಂಗಾರಪ್ಪ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಓಡೋಡಿ ಹೋಗ್ತಿದ್ದ ಪ್ರತಿಭಟನಾಕಾರರನ್ನ ಹಿಡಿದು ಪೊಲೀಸರು ವಶಕ್ಕೆ ಪಡೆದಿದ್ದಾರೆ.



## ಸಾಮೂಹಿಕವಾಗಿ ಗ್ಯಾರಂಟಿ ಯೋಜನೆ ಕೊಡುವುದನ್ನು ನಿಲ್ಲಿಸೋದೆ ಒಳಿತು

**ಮೈಸೂರು:** ಸಾಮೂಹಿಕವಾಗಿ ಗ್ಯಾರಂಟಿ ಯೋಜನೆ ಕೊಡುವುದನ್ನು ನಿಲ್ಲಿಸೋದೆ ಒಳಿತು. ಜನರಿಗೆ ಕಾಂಗ್ರೆಸ್ ಗ್ಯಾರಂಟಿ ಇಷ್ಟ ಆಗಿಲ್ಲ. ಅದನ್ನು ಅವರು ಫಲಿತಾಂಶದ ಮೂಲಕ ತೋರಿಸಿದ್ದಾರೆ ಎಂದು ಮೈಸೂರು–ಕೊಡಗು ಪರಾಜಿತ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಅಸಮಾಧಾನ ಹೊರಹಾಕಿದ್ದಾರೆ.



ಈ ಕುರಿತು ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ನಮ್ಮ ಗ್ಯಾರಂಟಿ ವಿರುದ್ಧ ಮಾತಾನಾಡುತ್ತಿತ್ತು. ಜನ ಅವರನ್ನು ಬೆಂಬಲಿಸಿದ್ದಾರೆ. ಹಾಗಾಗಿ ಜನರಿಗೆ ನಮ್ಮ ಗ್ಯಾರಂಟಿ ಇಷ್ಟ ಆಗಿಲ್ಲ ಅಂತಲೇ ಅಲ್ವಾ ಗ್ಯಾರಂಟಿ ಯೋಜನೆ ಬಗ್ಗೆ ಮುಖ್ಯಮಂತ್ರಿಗಳು ಈಗ ಮರು ಪರಿಶೀಲನೆ ಮಾಡಬೇಕು. ಈ ಬಗ್ಗೆ ಸಿಎಂ ಗಮನಹರಿಸಬೇಕು. 70% ರಷ್ಟು ಮೇಲ್ವರ್ಗದವರು ಈ ಯೋಜನೆ ಫಲಾನುಭವಿಗಳಾಗಿದ್ದಾರೆ. ಆದರೆ ಅದನ್ನು ಜನರು ತಿರಸ್ಕಾರ ಮಾಡಿದ್ದಾರೆ ಎಂದರು.

ಬೆಂಜ್ ಕಾರ್ ಹೊಂದಿರುವವನು, 25,000 ಸಂಬಳ ಪಡೆಯುವ ವ್ಯಕ್ತಿಗೆ ಪುಕ್ಕಟೆ ಕರೆಂಟ್ ಕೊಟ್ಟರೆ ಹೇಗೆ ಈಗಲೂ ಗ್ಯಾರಂಟಿ ಹಣದಿಂದಲೇ ಜೀವನ ನಡೆಸುವ ಜನ ಇದ್ದಾರೆ. ಅಂತಹವರನ್ನು ನೋಡಿ ಗ್ಯಾರಂಟಿ ರೀ ಲುಕ್ ಮಾಡುವ ಅಗತ್ಯ ಇದೆ. ಇದಕ್ಕೆ ಉದಾಹರಣೆ ಎಂದರೆ ಹುಣಸೂರಿನ ಹಲವು ಹಳ್ಳಿಗಳಲ್ಲಿ ಕೇವಲ ಒಂದೇ ಸಮುದಾಯದವರು ಇದ್ದಾರೆ. ಅಲ್ಲಿ ಬಿಜೆಪಿಗೆ 600ಕ್ಕೂ ಹೆಚ್ಚು ಮತ ನೀಡಿದ್ರೆ ನನಗೆ ಕೇವಲ ಮೂರು, ಏಳು ಮತಗಳನ್ನ ನೀಡಿದ್ದಾರೆ. ಒಕ್ಕಲಿಗರು ನನಗೆ ಮತ ಹಾಕಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಸಿದ್ದರಾಮಯ್ಯ ಅವರಂತಹ ಸಿಎಂ ಈ ದೇಶದಲ್ಲಿ ಮತ್ತೆ ಹುಟ್ಟಲು ಸಾಧ್ಯನಾ ಸಿಎಂ ಸಿದ್ದರಾಮಯ್ಯರಿಗೆ ತವರಿನಲ್ಲಿ ಎಷ್ಟು ಬಾರಿ ಮುಖಭಂಗ ಮಾಡ್ತಿರಾ ಇದು ಸ್ಯಾಡಿಸ್ಟ್ ನೇಚರ್ ಅಲ್ವಾ ಸಿದ್ದರಾಮಯ್ಯಗೆ ಯಾಕೆ ಇಷ್ಟು ನೋವು ಕೊಟ್ಟು ತವರಿನಲ್ಲಿ ಮುಖಭಂಗ ಮಾಡ್ತಿರಾ ಎಂದು ಪ್ರಶ್ನಿಸಿದರು. ಇನ್ನು ಜೆಡಿಎಸ್‌ನಲ್ಲಿ ಸ್ಪರ್ಧಿಸಿದರೆ ಮಾತ್ರ ಒಕ್ಕಲಿಗರಾ ಬಿಜೆಪಿಯಲ್ಲಿ ಸ್ಪರ್ಧಿಸಿದರೆ ಮಾತ್ರ ಒಕ್ಕಲಿಗರಾ ನಾವು ಕಾಂಗ್ರೆಸ್‌ನಲ್ಲಿರುವ ಒಕ್ಕಲಿಗರು ಏನೂ ಮಾಡಬೇಕು ಹೇಳಿ ಎಂದು ಕೇಳಿದ್ದಾರೆ.

# ಪಾಕಿಸ್ತಾನದ ಜೊತೆ ಕ್ರಿಕೆಟ್ ಆಡಲೇಬಾರದು!

**ಮಂಗಳೂರು:** ಭಾರತ ಪಾಕಿಸ್ತಾನ ನಡುವೆ ಭಾನುವಾರ ಟಿ20 ವಿಶ್ವಕಪ್‌ನ ಹೈವೋಲ್ಟೇಜ್ ಪಂದ್ಯ ನ್ಯೂಯಾರ್ಕ್‌ನ ನಸ್ಸೌ ಕೌಂಟಿ ಸ್ಟೇಡಿಯಂನಲ್ಲಿ ನಡೆಯಲಿದ್ದು, ಅಭಿಮಾನಿಗಳು ಕಾತರದಿಂದ ಇದ್ದಾರೆ. ಈ ಮಧ್ಯೆ, ಕರ್ನಾಟಕ ವಿಧಾನಸಭೆ ಸ್ಪೀಕರ್ ಯುಟಿ ಖಾದರ್ ಆ ಬಗ್ಗೆ ಪ್ರತಿಕ್ರಿಯಿಸಿದ್ದು, ಪಾಕಿಸ್ತಾನದ ಜೊತೆ ನಾವು ಕ್ರಿಕೆಟ್ ಆಟ ಆಡಲೇಬಾರದು ಎಂದಿದ್ದಾರೆ. ಮಂಗಳೂರಿನಲ್ಲಿ ಹೇಳಿಕೆ ನೀಡಿದ ಅವರು, ಟಿ20 ಮ್ಯಾಚ್ ನಡೆಯುತ್ತಿರುವುದು ಎಲ್ಲರಿಗೂ ಸಂತೋಷದ ವಿಚಾರ. ನಾನು ಸಹ ಕ್ರಿಕೆಟ್ ಆಟಗಾರ ಮತ್ತು ಅಭಿಮಾನಿ. ಅದಕ್ಕಿಂತ ಮಿಗಿಲಾಗಿ ನಾನು ಭಾರತ ದೇಶದ ಪ್ರಜೆ ಎಂದಿದ್ದಾರೆ.

ನಾವು ಪಾಕಿಸ್ತಾನದ ಜೊತೆ ಕ್ರಿಕೆಟ್ ಆಟ ಆಡಲೇಬಾರದು. ಪಾಕಿಸ್ತಾನದವರು ಇಲ್ಲಿ ಬಂದಾಗ ವಿರೋಧಿಸಿದ್ದನ್ನು ನೋಡಿದ್ದೇವೆ. ಭಾರತ ದೇಶದಲ್ಲಿ ಅವರ ಜತೆ ಪಂದ್ಯ ಬ್ಯಾನ್ ಮಾಡಲಾಗಿದೆ. ಹಾಗಾದ ಮೇಲೆ ಹೊರದೇಶದಲ್ಲಿ ಯಾಕೆ ಆಟ ಆಡಿಸಬೇಕು



ಅವರು ಸರಿಯಾಗುವ ತನಕ ಅವರ ಜತೆ ಪಂದ್ಯ ಆಡುವುದೇ ಬೇಡ. ಇದು ನನ್ನ ವೈಯಕ್ತಿಕ ಅಂತರಾಳದ ಅನಿಸಿಕೆ ಎಂದು ಅವರು ಹೇಳಿದರು.

ಒಂದು ವೇಳೆ ಬಾಂಧವ್ಯ ಸರಿಯಾಗಿದ್ದರೆ ಮತ್ತೆ ನಮ್ಮಲ್ಲಿ ಯಾಕೆ ಆಡುವುದಿಲ್ಲ ಮ್ಯಾಚ್ ಆಯೋಜಿಸುವವರು ಈ ರೀತಿಯ ಗೊಂದಲ ಮಾಡಬಾರದು. ಈಗ ಆಟ ಆಡಲೇಬೇಕು ಎಂದು ನಿರ್ಧಾರವಾಗಿದೆ. ಭಾರತ ದೇಶ ಟಿ20 ವಿಶ್ವಕಪ್ ಗೆಲ್ಲಬೇಕು ಎಂದು ಅವರು ಆಶಿಸಿದರು.

# ವೈದ್ಯಕೀಯ ಶಿಕ್ಷಣ ಸಚಿವರ ಕಚೇರಿ ಅಂದಿದ್ದಾರೆ, ನನ್ನ ಹೆಸರು ಹೇಳಿಲ್ಲ

**ಬೆಂಗಳೂರು:** ವಾಲ್ಮೀಕಿ ನಿಗಮದ ಬಹುಕೋಟಿ ಹಗರಣ ಪ್ರಕರಣದಲ್ಲಿ ವೈದ್ಯಕೀಯ ಸಚಿವ ಕಚೇರಿ ಎಂದು ಹೇಳಿದ್ದಾರೆಯೇ ಹೊರತು ನನ್ನ ಹೆಸರು ಹೇಳಿಲ್ಲ ಎಂದು ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್ ಸ್ಪಷ್ಟನೆ ನೀಡಿದ್ದಾರೆ.

ಹಗರಣದಲ್ಲಿ ತಮ್ಮ ಹೆಸರು ಥಳಕು ಹಾಕಿಕೊಂಡಿರುವುದರ ಕುರಿತು ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಅವರು, ಮೇ 26 ರಂದು ನಾನು ಕಚೇರಿಗೆ ಹೋಗಿಲ್ಲ. ಚುನಾವಣಾ ನೀತಿ ಸಂಹಿತೆ ಹಿನ್ನೆಲೆಯಲ್ಲಿ ನಾನು ಕಚೇರಿಗೆ ಹೋಗಿರಲಿಲ್ಲ. ಕಚೇರಿಯಲ್ಲಿ ಸಭೆ ನಡೆದಿದೆ ಅಂದ್ರೆ, ತನಿಖೆಯಾಗಲಿ ಎಂದು ತಿಳಿಸಿದರು.

ವೈದ್ಯಕೀಯ ಶಿಕ್ಷಣ ಸಚಿವರು ಅಂತ ಹೇಳಿಲ್ಲ, ಕಚೇರಿ ಎಂದು ಹೇಳಿದ್ದಾರೆ. ಸಚಿವರ ಕಚೇರಿ ಅಂದ್ರೆ, ಶಾಸಕರು ಬರುತ್ತಾರೆ, ಹೋಗ್ತಾರೆ. ಆದರೆ ಆವತ್ತು ನಾನು ಕಚೇರಿಗೆ



ಹೋಗಿಲ್ಲ. ಸತ್ಯ ಏನು ಅಂತ ಸಿಸಿ ಕ್ಯಾಮೆರಾ ನೋಡಿದ್ರೆ ಗೊತ್ತಾಗುತ್ತೆ. ನನಗೆ ಸಂಬಂಧವೇ ಇಲ್ಲ ಅಂದಮೇಲೆ ನನ್ನ ರಾಜೀನಾಮೆ ಕೇಳಿದ್ರೆ ಹೇಗೆ ಎಂದು ಅವರು ಪ್ರಶ್ನಿಸಿದರು.

ಈ ಬಗ್ಗೆ ಕಚೇರಿ ಸಿಬ್ಬಂದಿಯನ್ನು ಕೇಳಿದಾಗ ಯಾವ ಸಭೆಯೂ ನಡೆದಿಲ್ಲ ಅಂದ್ರು. ವಿಚಾರಣೆಗೆ ಬನ್ನಿ ಅಂದ್ರೆ ಅಟೆಂಡ್ ಮಾಡ್ತೀನಿ. ನಾನು ಪ್ರಮಾಣಿಕವಾಗಿ ಕೆಲಸ ಮಾಡೋನು. ಈ ರೀತಿ ನಾನು ಮಾಡುವವನಲ್ಲ. ನನ್ನ ಕಚೇರಿಯಲ್ಲಿ ಮೀಟಿಂಗ್ ಆಗಿದ್ದರೆ ಕ್ರಮ ತಗೊಳ್ಳಿ. ಆದರೆ ಇದರಲ್ಲಿ ನನ್ನ ಪಾತ್ರ ಇಲ್ಲವೇ ಇಲ್ಲ ಎಂದು ಶರಣಪ್ರಕಾಶ್ ಪಾಟೀಲ್ ಸ್ಪಷ್ಟನೆ ಕೊಟ್ಟರು.

ನನ್ನ ಹೆಸರು ಯಾಕೆ ಬಂದಿದೆ ಗೊತ್ತಿಲ್ಲ. ಮಾಧ್ಯಮಗಳಲ್ಲಿ ನೋಡಿದಾಗಲೇ ನನಗೆ ಗೊತ್ತಾಗಿದ್ದು. ಯಾರು ಯಾವ ತನಿಖೆ ಬೇಕಾದ್ರೂ ಮಾಡಿಕೊಳ್ಳಲಿ ಎಂದರು.

ಇತ್ತ ಸಚಿವರ ಹೆಸರು ಕೇಳಿ ಬಂದಿರುವ ಬಗ್ಗೆ ಗೃಹ ಸಚಿವ ಜಿ. ಪರಮೇಶ್ವರ್ ಪ್ರತಿಕ್ರಿಯಿಸಿ, ತನಿಖೆ ನಡೆಯುವಾಗ ಕೆಲವರ ಹೆಸರುಗಳು ಬರುತ್ತವೆ. ತನಿಖೆ ವೇಳೆ ಮಾತಾಡೋದು ಸರಿಯಲ್ಲ ಎಂದರು. ಇತ್ತ ಎಂಬಿ ಪಾಟೀಲ್ ಪ್ರತಿಕ್ರಿಯಿಸಿ, ಶರಣ ಪ್ರಕಾಶ್ ಪಾಟೀಲ್ ಅಪ್ಪಟ ಪ್ರಾಮಾಣಿಕ ವ್ಯಕ್ತಿ ಎಂದು ಬಣ್ಣಿಸಿದರು.

## ಮಂತ್ರಿ ಭಾಗ್ಯ

ಇದರ ಜೊತೆಗೆ ಈ ಬಾರಿ ಕರ್ನಾಟಕದಿಂದ ಬಿಜೆಪಿ 17 ಮತ್ತು ಮಿತ್ರಪಕ್ಷ ಜೆಡಿಎಸ್‌ನ ಇಬ್ಬರು ಲೋಕಸಭೆಗೆ ಆಯ್ಕೆಯಾಗಿದ್ದಾರೆ. ಈ ಪೈಕಿ ಯಾರಿಗೆ ಯಾವ ಖಾತೆ ಸಿಗಬಹುದು ಎಂಬ ಕುತೂಹಲ ಇದೆ. ಶುಕ್ರವಾರ ನಡೆದ ಎನ್‌ಡಿಎ ಸಂಸದೀಯ ಪಕ್ಷದ ಸಭೆಯಲ್ಲಿ ನರೇಂದ್ರ ಮೋದಿ ಅವರನ್ನು ಎನ್‌ಡಿಎ ಕೂಟದ ನಾಯಕರನ್ನಾಗಿ ಆಯ್ಕೆ ಮಾಡಲಾಗಿತ್ತು. ಬಳಿಕ ಎನ್‌ಡಿಎ ನಿಯೋಗ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ ಸರ್ಕಾರ ರಚನೆ ಹಕ್ಕು ಮಂಡಿಸಿತ್ತು. ಇದನ್ನು ಮನ್ನಿಸಿದ ಮುರ್ಮು ಅವರು, ಮೋದಿ ಅವರನ್ನು ಸರ್ಕಾರ ರಚನೆಗೆ ಆಹ್ವಾನಿಸಿದ್ದರು.

ಈ ವರ್ಷ ಮಹಾರಾಷ್ಟ್ರ, ಹರ್ಯಾಣ, ಜಾರ್ಖಂಡ್ ರಾಜ್ಯಗಳಲ್ಲಿ ವಿಧಾನಸಭಾ ಚುನಾವಣೆ ಇದೆ. ಈ ಮೂರೂ ರಾಜ್ಯಗಳಲ್ಲಿ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಭಾರೀ ಹಿನ್ನಡೆ ಸಾಧಿಸಿದೆ. ಹೀಗಾಗಿ ಸಂಪುಟದಲ್ಲಿ ಈ ರಾಜ್ಯಗಳಿಗೆ ಆದ್ಯತೆ ಸಿಗುವ ನಿರೀಕ್ಷೆ ಇದೆ. ಜೊತೆಗೆ ಮುಂದಿನ ವರ್ಷ ದೆಹಲಿ ಮತ್ತು ಬಿಹಾರ ವಿಧಾನಸಭಾ ಚುನಾವಣೆ ಇದ್ದು ಅದನ್ನೂ ಬಿಜೆಪಿ ಗಮನದಲ್ಲಿಟ್ಟುಕೊಂಡು ಸಚಿವ ಸ್ಥಾನ ಹಂಚಲಿದೆ ಎನ್ನಲಾಗಿದೆ. ಮೂಲಗಳ ಪ್ರಕಾರ ಗೃಹ, ಹಣಕಾಸು, ವಿದೇಶಾಂಗ, ಸಂಸದೀಯ ರಕ್ಷಣೆ, ರಸ್ತೆ ಸಾರಿಗೆ, ಶಿಕ್ಷಣ ಖಾತೆಗಳನ್ನು ಬಿಜೆಪಿ ತನ್ನ ಬಳಿಯೇ ಇಟ್ಟುಕೊಳ್ಳುವ ಸಾಧ್ಯತೆ ದಟ್ಟವಾಗಿದೆ. ಉಳಿದಂತೆ ಕೃಷಿ, ಗ್ರಾಮೀಣಾಭಿವೃದ್ಧಿ, ಐಟಿ, ಆರೋಗ್ಯ ಖಾತೆಗಳನ್ನು ಮಿತ್ರರಿಗೆ ಬಿಟ್ಟುಕೊಡುವ ಸಾಧ್ಯತೆ ಇದೆ.

**ಯಾರಿಗೆ ಸ್ಥಾನ :**

ಹಾಲಿ ಕೇಂದ್ರ ಸಚಿವ ಸಂಪುಟದ ಭಾಗವಾಗಿರುವ ಅಮಿತ್ ಶಾ, ರಾಜ್‌ನಾಥ್ ಸಿಂಗ್, ಪಿಯೂಷ್ ಗೋಯಲ್, ನಿತಿನ್ ಗಡ್ಕರಿ, ಅನುಪ್ರಿಯಾ ಪಟೇಲ್, ಜ್ಯೋತಿರಾಧಿತ್ಯ ಸಿಂಧಿಯಾ, ಕಿಶನ್ ರೆಡ್ಡಿ, ಧರ್ಮೇಂದ್ರ ಪ್ರಧಾನ್, ಗಜೇಂದ್ರ ಸಿಂಗ್ ಶೆಖಾವತ್, ಸುರೇಶ್ ಗೋಪಿ, ಪ್ರಹ್ಲಾದ್ ಜೋಶಿ, ಸರ್ಬಾನಂದ್ ಸೋನೋವಾಲ್, ಕಿರಣ್ ರಿಜಿಜು ಮೊದಲಾದವರು ಹುದ್ದೆಯಲ್ಲಿ ಮುಂದುವರೆಯುವ ಸಾಧ್ಯತೆ ನಿಚ್ಚಳವಾಗಿದೆ.

## 4 ತಜ್ಞರ ತಂಡ ರಚನೆ

ಈ ಪೈಕಿ ಬಹುತೇಕರು, ಮೇಘಾಲಯ, ಹರ್ಯಾಣದ ಬಹದುರ್ಗಾ, ಛತ್ತೀಸ್‌ಗಢ ದಂತೇವಾಡಾ, ಬಲ್ಹೋಹ್, ಗುಜರಾತ್‌ನ ಸೂರತ್ ಮತ್ತು ಚಂಡೀಗಢದ ಪರೀಕ್ಷಾ ಕೇಂದ್ರಗಳಿಗೆ (ಒಟ್ಟು 6 ಕೇಂದ್ರಗಳು) ಸೇರಿದವರಾಗಿದ್ದಾರೆ. ಜೊತೆಗೆ ಅನುಕ್ರಮ ಸಂಖ್ಯೆಯಲ್ಲಿ 7 ಜನರು ಮೊದಲ ರ್‍ಯಾಂಕ್ ಪಡೆದಿದ್ದಾರೆ. ಅಲ್ಲದೆ, ಜೂ.4ರಂದು ಯಾವುದೇ ಮುನ್ಸೂಚನೆ ನೀಡದೇ ಲೋಕಸಭಾ ಚುನಾವಣೆ ಫಲಿತಾಂಶದ ದಿನ ಸಂಜೆ ಏಕಾಏಕಿ ನೀಟ್ ಫಲಿತಾಂಶ ಪ್ರಕಟಿಸಲಾಗಿತ್ತು. ಇವೆಲ್ಲವೂ

### ಮೊದಲನೇ ಪುಟದಿಂದ...

ಸಾಕಷ್ಟು ಅನುಮಾನಗಳಿಗೆ ಕಾರಣವಾಗಿವೆ.

ಈ ಹಿನ್ನೆಲೆಯಲ್ಲಿ ದೇಶವ್ಯಾಪಿ ವಿದ್ಯಾರ್ಥಿಗಳು ಮತ್ತು ಪೋಷಕರು, ಪ್ರತಿಪಕ್ಷಗಳು, ವಿವಿಧ ರಾಜ್ಯ ಸರ್ಕಾರಗಳು ಪರೀಕ್ಷೆಯಲ್ಲಿ ಅಕ್ರಮದ ಆರೋಪ ಮಾಡಿದ್ದರು,. ಕಾಂಗ್ರೆಸ್ ಹಾಗೂ ಆಪ್ ಸುಪ್ರೀಂ ಕೋರ್ಟ್ ನಿಗಾದಲ್ಲಿ ತನಿಖೆಗೆ ಒತ್ತಾಯಿಸಿದ್ದವು. ಅದರ ಬೆನ್ನಲ್ಲೇ ಕೇಂದ್ರ ಸರ್ಕಾರ ತಜ್ಞರ ತಂಡ ರಚನೆ ಮಾಡಿದೆ. ಅಕ್ರಮದ ಸಂದೇಹ ಕೇಳಿಬಂದಿರುವ ಆರೂ ಕೇಂದ್ರಗಳು ತನಿಖೆಗೆ ಒಳಪಡಲಿವೆ ಎಂದು ಎನ್‌ಟಿಎ ಮಹಾನಿರ್ದೇಶಕ ಸುಬೋಧ ಕಮಾರ್ ಸಿಂಗ್ ಹೇಳಿದ್ದಾರೆ.

## ಎಸ್‌ಐಟಿ ನೋಟಿಸ್

ಸಾಧ್ಯತೆಯಿದ್ದು, ಮುಂದಿನ ವಾರ ಎಫ್‌ಐಆರ್ ದಾಖಲು ಮಾಡಲು ತಯಾರಿ ನಡೆಸಿದ್ದಾರೆ ಎಂದು ಉನ್ನತ ಮೂಲಗಳು ಮಾಹಿತಿ ನೀಡಿದೆ. ಈಗಾಗಲೇ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಹಗರಣಕ್ಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಯೂನಿಯನ್ ಬ್ಯಾಂಕ್ ತನ್ನ ಮೂವರು ಸಿಬ್ಬಂದಿಯನ್ನು ಅಮಾನತುಗೊಳಿಸಿದೆ.

## 210 ಜನರ ದುರ್ಮರಣ

ರಕ್ಷಿಸಲ್ಪಟ್ಟ ಒತ್ತೆಯಾಳುಗಳನ್ನು ನೋವಾ ಅರ್ಗಾಮಣಿ (26) ಅಲ್ಮೊಗ್ ಮೀರ್ ಜಾನ್ (22) ಆಂಡ್ರೆ ಕೊಜ್ಲೋವ್ (27) ಮತ್ತು ಶ್ಲೋಮಿ ಝಿವ್ (41) ಇಸ್ರೇಲ್ ಸೇನೆ ಹೇಳಿಕೊಂಡಿದೆ.

ಇಸ್ರೇಲ್ ದಾಳಿಗೆ ಪ್ರತಿಕ್ರಿಯಿಸಿರುವ ಹಮಾಸ್ ನಾಯಕ ಇಸ್ಮಾಯಿಲ್ ಹನಿಯೆಹ್, ನಾವು ಹೋರಾಟವನ್ನು ಮುಂದುವರೆಸುತ್ತೇವೆ. ನಮ್ಮ ಜನ ಶರಣಾಗುವುದಿಲ್ಲ ಮತ್ತು ಶತ್ರುಗಳಿಂದ ನಮ್ಮ ಹಕ್ಕುಗಳನ್ನು ರಕ್ಷಿಸಲು ಪ್ರತಿರೋಧ ಮುಂದುವರಿಯುತ್ತದೆ ಎಂದು ಅವರು ಹೇಳಿಕೊಂಡಿದ್ದಾರೆ.

ನಿರಂತರ ಯುದ್ಧದಿಂದಾಗಿ ಸಾವು ನೋವಿನ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಸಹಾಯಕ್ಕಾಗಿ ಅಂತರರಾಷ್ಟ್ರೀಯ ಸಹಾಯ ಸಂಸ್ಥೆಗಳಿಗೆ ಹಮಾಸ್ ಮನವಿ ಮಾಡಿದೆ.

## ರಾಜೀನಾಮೆ ನೀಡಲಿ

ಕರ್ನಾಟಕದಲ್ಲಿ ಭ್ರಷ್ಟರ ರಕ್ಷಣೆಯ ಖಾತೆಯನ್ನು ಮುಖ್ಯಮಂತ್ರಿಗಳು ಹೊಸದಾಗಿ ಸೇರಿಸಿಕೊಂಡಿದ್ದಾರಾ ಸಿದ್ದರಾಮಯ್ಯನವರು ಭ್ರಷ್ಟರ ರಕ್ಷಣಾ ಖಾತೆಯ ಮುಖ್ಯಮಂತ್ರಿ ಆಗಿದ್ದಾರೆ. ಅವರು ವಾಲ್ಮೀಕಿ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್ ಅವರ ರಾಜೀನಾಮೆಯನ್ನು ಕೂಡಲೇ ಪಡೆಯಬೇಕು. ವೈದ್ಯಕೀಯ ಶಿಕ್ಷಣ ಸಚಿವರ ಕಚೇರಿಯಲ್ಲಿ ನಡೆಸಿದ ಸಭೆಯ ಫೂಟೇಜ್‌ನ್ನು ರಕ್ಷಿಸಬೇಕು. ಪರಶುರಾಮ್ ಅವರು ಈ ಫೂಟೇಜ್, ಸಾಕ್ಷ್ಯಾಧಾರವನ್ನು ರಕ್ಷಿಸಲು ಅಫಿಡವಿಟ್ ಸಲ್ಲಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

## ಆಯ್ಕೆ

ಇದಕ್ಕೂ ಮುನ್ನ ಕಾಂಗ್ರೆಸ್ ಕಾರ್ಯಕಾರಿ ಸಮಿತಿಯು ರಾಹುಲ್ ಗಾಂಧಿ ಅವರನ್ನು ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕನ ಸ್ಥಾನ ವಹಿಸಿಕೊಳ್ಳುವಂತೆ ಒಮ್ಮತದಿಂದ ಒತ್ತಾಯಿಸಿತು. ಅವರು ಶೀಘ್ರದಲ್ಲೇ ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳುತ್ತೇನೆ ಎಂದು ಪಕ್ಷದ ವರಿಷ್ಠರಿಗೆ ತಿಳಿಸಿದ್ದಾರೆ.

## ಸ್ವೀಕರಿಸುತ್ತಾರೆ

**ಕುಮಾರಣ್ಣ ಮಂತ್ರಿ ಆಗುತ್ತಿರುವುದು ಖುಷಿ ಕೊಡುತ್ತಿದೆ: ಕಾಶಪ್ಪನವರ್**

ಕೇಂದ್ರ ಸರ್ಕಾರದಲ್ಲಿ ಕುಮಾರಣ್ಣ ಮಂತ್ರಿ ಆಗುತ್ತಿರುವುದು ಬಹಳ ಖುಷಿ ಕೊಡುತ್ತಿದೆ. ಕರ್ನಾಟಕ ಜನತೆ ತುಂಬಾ ಖುಷಿ ಪಡುತ್ತಾರೆ. ಅಭಿವೃದ್ಧಿ ದೃಷ್ಟಿಯಿಂದ ಕುಮಾರಸ್ವಾಮಿ ಆಯ್ಕೆಯಾಗಿದ್ದಾರೆ. ಕೇಂದ್ರ ಸರ್ಕಾರದಲ್ಲಿ ಜೆಡಿಎಸ್ ಭಾಗಿಯಾಗುತ್ತಿರುವುದು ಐತಿಹಾಸಿಕ. ಕಾಂಗ್ರೆಸ್ ನವರು ದೋಖಾ ಮಾಡಿ ಸರ್ಕಾರ ಮಾಡಿದ್ದಾರೆ. ಸರ್ಕಾರ ವಿಸರ್ಜನೆ ಮಾಡಿ ಬರುತ್ತಾರಾ ಅವರು. ಕಾಂಗ್ರೆಸ್ ಜನರಿಗೆ ಸುಳ್ಳು ಹೇಳಿ, ಗಿಮಕ್ ಮಾಡಿ ಸರ್ಕಾರ ಮಾಡಿದ್ದಾರೆ ಎಂದು ಮಾಜಿ ಸಚಿವ ಬಂಡಪ್ಪ ಕಾಶಪ್ಪನವರ್ ಹೇಳಿದರು.

ಸಂಸದ ಹೆಚ್ ಡಿ ಕುಮಾರಸ್ವಾಮಿ ಅವರು ಮೂರನೇ ಬಾರಿಗೆ ಸಂಸತ್ತು ಪ್ರವೇಶಿಸಿದ್ದಾರೆ. ಹೆಚ್ .ಡಿ ಕುಮಾರಸ್ವಾಮಿ ಅವರು ಇದಕ್ಕೂ ಮುನ್ನ ಕನಕಪುರ ಲೋಕಸಭಾ ಕ್ಷೇತ್ರದಿಂದ ಮೊದಲ ಬಾರಿ ಸಂಸದರಾಗಿದ್ದರು. ನಂತರ ಬೆಂಗಳೂರು ಗ್ರಾಮಾಂತರ ಕ್ಷೇತ್ರದಿಂದ ಎರಡನೇ ಬಾರಿ ಲೋಕಸಭೆ ಪ್ರವೇಶ ಮಾಡಿದ್ದರು. ಇದೀಗ ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಭಾರೀ ಅಂತರದಿಂದ ಗೆದ್ದು ಸಂಸತ್ ಪ್ರವೇಶಿಸಿದ್ದಾರೆ. ಹೆಚ್ ಡಿ ಕುಮಾರಸ್ವಾಮಿ ಅವರು ಮೊದಲ ಬಾರಿಗೆ ಕೇಂದ್ರದಲ್ಲಿ ಸಚಿವರಾಗುತ್ತಿದ್ದಾರೆ.

ಹೆಚ್ ಡಿ ಕುಮಾರಸ್ವಾಮಿ ಅವರು ಈಗಾಗಲೆ ದೆಹಲಿಯಲ್ಲಿದ್ದು, ಇಂದು ಸಂಜೆ ನಡೆಯುವ ಪದಗ್ರಹಣ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಹೆಚ್ ಡಿ ಕುಮಾರಸ್ವಾಮಿ ಕೇಂದ್ರ ಸಚಿವರಾಗಿ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆ ಇರುವುದರಿಂದಲೇ ಕುಮಾರಸ್ವಾಮಿ ಪತ್ನಿ ಅನಿತಾ, ಪುತ್ರ ನಿಖಿಲ್, ಸೊಸೆ ರೇವತಿ ದೆಹಲಿಗೆ ತೆರಳಿದ್ದಾರೆ.

ಇನ್ನು, ಕೇಂದ್ರ ಸರ್ಕಾರದಲ್ಲಿ ರಾಜ್ಯದ 3 ರಿಂದ 4 ಜನರಿಗೆ ಅವಕಾಶ ಸಿಗುವ ಸಾಧ್ಯತೆ ಇದೆ. ಪ್ರಹ್ಲಾದ್ ಜೋಶಿ, ಬಸವರಾಜ ಬೊಮ್ಮಾಯಿ, ಜಗದೀಶ್ ಶೆಟ್ಟರ್ , ಗೋವಿಂದ ಕಾರಜೋಳ ಅಥವಾ ರಮೇಶ್ ಜಿಗಜಿಣಗಿ ಅವರು ಸಂಪುಟದಲ್ಲಿ ಸ್ಥಾನ ಪಡೆಯುವ ಸಾಧ್ಯತೆ ಇದೆ.

### ಬಸ್‌ನಲ್ಲಿ ಯುವತಿ ಜೊತೆಗೆ ಅಸಭ್ಯವಾಗಿ ವರ್ತಿಸಿದ

# ಯುವಕನಿಗೆ ಧರ್ಮದೇಟು

**ಮಂಗಳೂರು:** ಬಸ್ಸಿನಲ್ಲಿ ಅಸಭ್ಯವಾಗಿ ವರ್ತಿಸಿದ ಯುವಕನಿಗೆ ಯುವತಿಯ ಸಂಬಂಧಿಕರು ಧರ್ಮದೇಟು ನೀಡಿರುವ ಘಟನೆ ಮಂಗಳೂರಿನ ಬಲ್ಲಾಳ್ ಬಾಗ್ ಎಂಬಲ್ಲಿ ನಡೆದಿದೆ. ಪಾಂಡೇಶ್ವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಯುವತಿ ಮಂಗಳೂರು ನಗರದ ನಾಗೂರಿಯಲ್ಲಿರುವ ಎಸ್‌ಕೆ ಗ್ರೂಪ್ ಆಫ್ ಕಂಪನಿಯಲ್ಲಿ ಪ್ರೊಡಕ್ಟ್‌ಗಳನ್ನು ಸೇಲ್ ಮಾಡುವ ಕೆಲಸ ಮಾಡುತ್ತಿದ್ದಾರೆ. ಯುವತಿ ಶುಕ್ರವಾರ (ಜೂ.07) ರಂದು ಬೆಳಗ್ಗೆ 8 ಗಂಟೆ ಸುಮಾರಿಗೆ ನಾಗೂರಿಯಲ್ಲಿರುವ ಕಚೇರಿಗೆ ಹೋಗಿ ಪ್ರೊಡಕ್ಟ್‌ಗಳನ್ನು ತೆಗೆದುಕೊಂಡಿದ್ದಾಳೆ. ಬಳಿಕ ಪ್ರೊಡಕ್ಟ್‌ಗಳನ್ನು ಮಾರಾಟ ಮಾಡಲು ನಾಗೂರಿಯಿಂದ ಬಸ್‌ನಲ್ಲಿ



ಹೊರಟು 9 ಗಂಟೆ ಸುಮಾರಿಗೆ ಸ್ಟೇಟ್ ಬ್ಯಾಂಕ್‌ಗೆ ಬಂದು ಇಳಿದಿದ್ದಾರೆ.

ನಂತರ ಸ್ಟೇಟ್ ಬ್ಯಾಂಕ್‌ನಿಂದ ಬಜಪೆ ಕಡೆಗೆ ಹೋಗಲು ಮರೋಳಿ ಎಂಬ ಹೆಸರಿನ ಬಸ್ಸನಲ್ಲಿ 9:10ಕ್ಕೆ ಹತ್ತಿ ನಿರ್ವಾಹಕ ಸೈಡ್‌ನ ನಾಲ್ಕನೇ ಸೀಟಿನಲ್ಲಿ ಕುಳಿತುಕೊಂಡಿದ್ದಾಳೆ. ಯುವತಿಯನ್ನು ಹಿಂಬಾಲಿಸಿಕೊಂಡು ಬಂದಿದ್ದ ಯುವಕ, ಯುವತಿ ಕೂತಿದ್ದ ಕುಳಿತುಕೊಂಡಿದ್ದ ಹಿಂಬದಿಯ ಸೀಟಿನಲ್ಲಿ ಕೂರುತ್ತಾನೆ. ಬಳಿಕ ಯುವತಿಯ ಸೊಂಟಕ್ಕೆ ಕೈ ಹಾಕಿ ಅಸಭ್ಯವಾಗಿ ವರ್ತಿಸಿದ್ದಾನೆ.

ಬಳಿಕ ಯುವತಿ ಈ ವಿಚಾರವನ್ನು ತನ್ನ ಸಂಬಂಧಿಕರಿಗೆ ತಿಳಿಸಿದ್ದಾಳೆ. ವಿಚಾರ ತಿಳಿದು ಯುವತಿ ಸಂಬಂಧಿಕರು ಬಸ್ಸನ್ನು ಬಲ್ಲಾಳ್ ಬಾಗ್ ಎಂಬಲ್ಲಿ ತಡೆದಿದ್ದಾರೆ. ಬಳಿಕ ಆತನನ್ನು ಬಸ್‌ನಿಂದ ಕೆಳಗಿಳಿಸಿ ವಿಚಾರಿಸಿ, ಧರ್ಮದೇಟು ನೀಡಿ ಪೊಲೀಸರಿಗೆ ಒಪ್ಪಿಸಿದ್ದಾರೆ. ಯುವಕನಿಗೆ ಥಳಿಸಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

## ಮದುವೆಯಾಗುವುದಾಗಿ ನಂಬಿಸಿ ಗರ್ಭಿಣಿ ಮಾಡಿ ಪರಾರಿಯಾದ ಯುವಕ, ಠಾಣೆ ಮೆಟ್ಟಿಲೇರಿದ ಸಂತ್ರಸ್ತೆ

**ಮೈಸೂರು:** ವಿಚ್ಛೇದಿತ ಮಹಿಳೆಯನ್ನು ಮದುವೆಯಾಗುತ್ತೇನೆಂದು ನಂಬಿಸಿ ವಂಚನೆ ಮಾಡಿರುವ ಆರೋಪ ಮೈಸೂರಿನ ಬೋಗಾದಿಯ ಬ್ಯಾಂಕರ್ಸ್ ಕಾಲೋನಿಯಲ್ಲಿ ಕೇಳಿ ಬಂದಿದೆ. 25 ವರ್ಷದ ಯುವಕ 34 ವರ್ಷದ ವಿಚ್ಛೇದಿತ ಮಹಿಳೆಯನ್ನು ಮದುವೆಯಾಗುವುದಾಗಿ ನಂಬಿಸಿ ಆಕೆಯನ್ನು ಲೈಂಗಿಕವಾಗಿ ಬಳಸಿಕೊಂಡು



ವಂಚಿಸಿದ್ದಾನೆ. ಮಹಿಳೆ ಗರ್ಭಿಣಿಯಾಗಿದ್ದು ಯುವಕ ನಾಪತ್ತೆಯಾಗಿದ್ದಾನೆ. ಘಟನೆ ಸಂಬಂಧ ಸರಸ್ವತಿಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರು ನಗರದ ಖಾಸಗಿ ಶಾಲೆಯಲ್ಲಿ ಶಿಕ್ಷಕಿಯಾಗಿರುವ ಸಂತ್ರಸ್ತೆ 2018ರಲ್ಲಿ ಪತಿಯಿಂದ ವಿಚ್ಛೇದನ ಪಡೆದು ಸ್ವತಂತ್ರವಾಗಿ ಬದುಕು ಕಟ್ಟಿಕೊಂಡಿದ್ದಳು. ಸಿಂಗಿಂಗ್ ಇವೆಂಟ್ ಗೆ ಹಾಡು ಹೇಳಲು ಹೋಗ್ತಿದ್ದಾಗ ಕೊಳ್ಳೆಗಾಲದ ತೇರಂಬಳ್ಳಿ ಗ್ರಾಮದ ಹರೀಶ್ ಎಂಬಾತನ ಪರಿಚಯವಾಗುತ್ತೆ. ಈ ಪರಿಚಯ ಪರಸ್ಪರಲ್ಲಿ ಉತ್ತಮ ಸ್ನೇಹಕ್ಕೆ ತಿರುಗತ್ತೆ. ಹರೀಶ್ ಮೈಸೂರಿನ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ. ಸಂತ್ರಸ್ತೆ ಹಾಗೂ ಹರೀಶ್ ಇಬ್ಬರೂ ಹವ್ಯಾಸಿ ಹಾಡುಗಾರರಾಗಿದ್ದ ಕಾರಣ ಆಗಾಗ ಭೇಟಿಯಾಗುತ್ತಿದ್ದರು.

ಟೀಚರಮ್ಮನ ಮನೆಗೆ ಹರೀಶ್ ಆಗಾಗ ಬಂದು ಹೋಗುತ್ತಿದ್ದ. ಒಮ್ಮೆ ನನಗೆ ಮದ್ಯ ಕುಡಿಸಿ ಬಲವಂತವಾಗಿ ಅತ್ಯಾಚಾರ ಮಾಡಿದ್ದಾನೆ ಎಂದು ಮಹಿಳೆ ಆರೋಪಿಸಿದ್ದಾರೆ.



## ಜಿಯೋ ಏರ್ ಫೈಬರ್ನ ಓಪನ್ ಸಿಗ್ನಲ್ ವರದಿ ಬಿಡುಗಡೆ

ಜಗತ್ತಿನ ಖ್ಯಾತ ಮೊಬೈಲ್ ನೆಟ್ವರ್ಕ್ ಅನಲಿಟಿಕ್ಸ್ ಕಂಪನಿ 'ಓಪನ್ಸಿಗ್ನಲ್' ವರದಿಯೊಂದನ್ನು ನೀಡಿದ್ದು, ಜಿಯೋದ ಸ್ವತಂತ್ರ 5ಜಿ ನೆಟ್ವರ್ಕಿಂದಾಗಿ ಜಿಯೋ ಏರ್ ಫೈಬರ್ ತನ್ನ ಗ್ರಾಹಕರಿಗೆ ಅತ್ಯುತ್ತಮ ವೇಗದಲ್ಲಿ ಡೇಟಾವನ್ನು ಒದಗಿಸಲು ಸಾಧ್ಯವಾಗುತ್ತದೆ ಎಂದು ಹೇಳಿದೆ. ಜಿಯೋದ ಸ್ಥಿರ ವೈರ್ಲೆಸ್ ಸೇವೆಯ ಗ್ರಾಹಕರು, ಅಂದರೆ ಜಿಯೋ ಏರ್ ಫೈಬರ್ ಗ್ರಾಹಕರು ತಿಂಗಳಿಗೆ ಸರಾಸರಿ 400 ಜಿಬಿ ಡೇಟಾವನ್ನು ಬಳಸುತ್ತಾರೆ ಎಂದು ಓಪನ್ ಸಿಗ್ನಲ್ ಅಭಿಪ್ರಾಯ ಪಟ್ಟಿದೆ. ಅಂದ ಹಾಗೆ ಈ ಬಳಕೆ ಪ್ರಮಾಣ ಮೊಬೈಲ್ ಗ್ರಾಹಕರಿಗಿಂತ ಹೆಚ್ಚು. ಇದರ ಹೊರತಾಗಿಯೂ ಜಿಯೋ ಏರ್ ಫೈಬರ್ನ ವೇಗ ಮತ್ತು ಗುಣಮಟ್ಟದ ಸ್ಕೋರ್ 5ಜಿ ಮೊಬೈಲ್ ನೆಟ್ವರ್ಕ್ನಂತೆಯೇ ಉಳಿದಿದೆ. ಜಿಯೋದ 5ಜಿ ನೆಟ್ವರ್ಕ್ನ ವೇಗವು ದೇಶದಲ್ಲಿಯೇ ಅತ್ಯಧಿಕವಾಗಿದೆ ಎಂದು ತಿಳಿಸಲಾಗಿದೆ. ಭಾರತದ 'ಸ್ಥಿರ ವೈರ್ಲೆಸ್ ಸೇವೆಗಳಲ್ಲಿ' ರಿಲಯನ್ಸ್ ಜಿಯೋ ಮಾತ್ರ ಸದ್ಯಕ್ಕೆ ಸ್ವತಂತ್ರ 5ಜಿ ನೆಟ್ವರ್ಕ್ ಅನ್ನು ಬಳಸುತ್ತಿದೆ. ಓಪನ್ ಸಿಗ್ನಲ್ ಪ್ರಕಾರ, ಸ್ವತಂತ್ರ 5ಜಿ ಜೊತೆಗೆ ನೆಟ್ವರ್ಕ್ ಸ್ಲೈಸಿಂಗ್ ತಂತ್ರಜ್ಞಾನವು ಜಿಯೋ ಏರ್ ಫೈಬರ್ ಡೇಟಾ ಬಳಕೆಯನ್ನು ನಿರ್ವಹಿಸಲು ಸಹಾಯ ಮಾಡುತ್ತದೆ. ಈ ತಂತ್ರಜ್ಞಾನದ ಪ್ರಯೋಜನಗಳನ್ನು ಪರಿಗಣಿಸಿ, ಏರ್ಟೆಲ್ 5ಜಿ ನೆಟ್ವರ್ಕ್ನಲ್ಲಿ ಸ್ಥಿರ ವೈರ್ಲೆಸ್ ಸೇವೆಯನ್ನು ತರಲು ಸಿದ್ಧತೆ ನಡೆಸುತ್ತಿದೆ ಎಂದು ವರದಿಯಲ್ಲಿ ಹೇಳಲಾಗಿದೆ. ಬ್ರಾಡ್ಬ್ಯಾಂಡ್ ಕವರೇಜ್ ಕಡಿಮೆ ಇರುವ ಪ್ರದೇಶಗಳಲ್ಲಿ ನೆಟ್ವರ್ಕ್ ಕವರೇಜ್ ತರಲು ರಿಲಯನ್ಸ್ ಜಿಯೋ ಕಳೆದ ವರ್ಷವೇ ಜಿಯೋ ಏರ್ ಫೈಬರ್ ಅನ್ನು ಪ್ರಾರಂಭಿಸಿತ್ತು. ಜಿಯೋ ಏರ್ ಫೈಬರ್ಗೆ ಹೆಚ್ಚಿನ ಬೇಡಿಕೆಯು ಟಯರ್ -2 ನಗರಗಳಿಂದ ಬರುತ್ತಿದೆ. ಗ್ರಾಹಕರನ್ನು ಆಕರ್ಷಿಸುವುದಕ್ಕಾಗಿ ಜಿಯೋ ರೂ. 599ರಿಂದ ಪ್ರಾರಂಭವಾಗುವ- ಕೈಗೆಟುಕುವ ಅನೇಕ ಯೋಜನೆಗಳನ್ನು ಬಿಡುಗಡೆ ಮಾಡಿದೆ. ಈ ಸೇವೆಯೊಂದಿಗೆ 10 ಕೋಟಿ ಸ್ಥಳಗಳನ್ನು ಸಂಪರ್ಕಿಸುವುದು ಕಂಪನಿಯ ಗುರಿಯಾಗಿದೆ. ಕಂಪನಿಯು ಸ್ಟ್ರೀಮಿಂಗ್ ಯೋಜನೆಗಳನ್ನು ಪರಿಚಯಿಸಿದ್ದು, ಇದರಲ್ಲಿ ಸ್ಥಿರ ಬ್ರಾಡ್ಬ್ಯಾಂಡ್ ಪ್ಯಾಕೇಜ್ಗಳೊಂದಿಗೆ 15 ಸ್ಟ್ರೀಮಿಂಗ್ ಅಪ್ಲಿಕೇಷನ್ಗಳು ಸೇರಿವೆ.

## ಕುಂಬಳಕಾಯಿ ಸೂಪ್

### ಪಾಕ ಶಾಲೆ



### ಮಾಡುವ ವಿಧಾನ

ಆಲೂಗಡ್ಡೆ ಸಿಪ್ಪೆ ತೆಗೆದು ಸಣ್ಣಗೆ ಹೆಚ್ಚಿಕೊಳ್ಳಿ. ಒಂದು ಪ್ಯಾನ್ ಗೆ ಬೆಣ್ಣೆ ಹಾಕಿ ಬಿಸಿ ಮಾಡಿ. ನಂತರ ಈರುಳ್ಳಿ ಹಾಕಿ ಫ್ರೈ ಮಾಡಿ.ಅದಕ್ಕೆ ಕತ್ತರಿಸಿ ಆಲೂಗಡ್ಡೆ ಹಾಗೂ ಕುಂಬಳಕಾಯಿ ಹೋಳುಗಳನ್ನು ಹಾಕಿ.

ಒಂದು ಲೋಟ ನೀರು ಹಾಗೂ ಉಪ್ಪನ್ನು ಹಾಕಿ ಚೆನ್ನಾಗಿ ಬೇಯಿಸಿ. ಹೋಳುಗಳು ಬೆಂದ ನಂತರ ಅದನ್ನು ತಣ್ಣಗಾಗಲು ಬಿಡಿ. ನಂತರ ಅದನ್ನು ಮಿಕ್ಸಿಗೆ ಹಾಕಿ ರುಬ್ಬಿಕೊಳ್ಳಿ.

ರುಬ್ಬಿದ ಮಿಶ್ರಣವನ್ನು ಮತ್ತೆ ಬಿಸಿ ಮಾಡಿ. ಬಿಸಿ ಮಾಡುವಾಗ ಕಾಳುಮೆಣಸಿನ ಪುಡಿ ಹಾಕಿ. ನಂತರ ಗಾರ್ಲಿಕ್ ಬ್ರೆಡ್ ಜೊತೆ ಸರ್ವ್ ಮಾಡಿ.

### ಬೇಕಾಗಿರುವ ಪದಾರ್ಥ

ಕುಂಬಳಕಾಯಿ - ಮೂರು ಬಟ್ಟಲು (ಕತ್ತರಿಸಿದ್ದು), ಈರುಳ್ಳಿ- 1 (ಸಣ್ಣಗೆ ಹೆಚ್ಚಿದ್ದು), ಆಲೂಗಡ್ಡೆ- ಎರಡು, ಬೆಣ್ಣೆ- ಒಂದು ಚಮಚ, ಕಾಳುಮೆಣಸಿನ ಪುಡಿ - 1 ಚಮಚ, ಉಪ್ಪು- ರುಚಿಗೆ ತಕ್ಕಷ್ಟು.

## 14 ಕೋಟಿ ಬೆಲೆಬಾಳುವ ಬಂಗಲೆ ಖರೀದಿಸಿದ ತೃಪ್ತಿ ದಿಮ್ರಿ





ಅನಿಮಲ್ ಚಿತ್ರದ ಮೂಲಕ ಖ್ಯಾತಿ ಪಡೆದ ತೃಪ್ತಿ ದಿಮ್ರಿ ಹೆಚ್ಚಿನ ಕ್ರೇಜ್ ಗಳಿಸಿದರು. ಸಿನಿಮಾದಿಂದ ಹೆಚ್ಚಿನ ಖ್ಯಾತಿ ಗಳಿಸಿದ ನಟಿ ಇದೀಗ ಹೊಸ ಬಂಗಲೆಯನ್ನು ಖರೀಸಿದ್ದಾರೆ. ಅನಿಮಲ್ ಚಿತ್ರದ ಮೂಲಕ ತೃಪ್ತಿ ದಿಮ್ರಿ ಸೂಪರ್ ಕ್ರೇಜ್ ಪಡೆದರು. ಈ ಸಿನಿಮಾದಿಂದ ತೃಪ್ತರಾದ ಡಿಮ್ರಿ ಯುವಜನತೆಗೆ ಕ್ರಶ್ ಆದರು. ಅನಿಮಲ್ ಚಿತ್ರದ ಯಶಸ್ಸಿನೊಂದಿಗೆ ಟ್ರಿಪ್ತಿ ಡಿಮ್ರಿಗೆ ಕ್ರೇಜಿ ಆಫರ್ಗಳು ಬರುತ್ತಿವೆ. 2017 ರಲ್ಲಿ ಶ್ರೀದೇವಿ ಅಭಿನಯದ ಮಾಮ್ ಚಿತ್ರದಲ್ಲಿ ತೃಪ್ತಿ ದಿಮ್ರಿ ಸಣ್ಣ ಪಾತ್ರದಲ್ಲಿ ಕಾಣಿಸಿಕೊಂಡರು. ಅಂದಿನಿಂದ ತೃಪ್ತಿ ಸಿನಿಮಾದ ಪಯಣ ಶುರುವಾಯಿತು. ಒಂದು ಸಿನಿಮಾದಿಂದ ಸೂಪರ್ ಕ್ರೇಜ್ ಆದ ತೃಪ್ತಿ ಇತ್ತೀಚೆಗೆ ಮತ್ತೊಂದು ಸಂಚಲನ ಮೂಡಿಸಿದೆ. ಮುಂಬೈನ ಬಾಂದ್ರಾದಲ್ಲಿ ತೃಪ್ತಿ ಡಿಮ್ ಐಷಾರಾಮಿ ಬಂಗಲೆಯನ್ನು ಖರೀದಿಸಿದ್ದಾರೆಂದು ಸುದ್ದಿ ಕೇಳಿಬರುತ್ತಿದೆ. ತೃಪ್ತಿ ದಿಮ್ರಿ ಅನಿಮಲ್ ಚಿತ್ರದ ಮೂಲಕ ಹೆಚ್ಚಿನ ಖ್ಯಾತಿಯನ್ನು ಪಡೆದರು. ಆದರೆ ಆಕೆ ಕೋಟ್ಯಂತರ ರೂಪಾಯಿ ಮೌಲ್ಯದ ಬೃಹತ್ ಬಂಗಲೆಯನ್ನು ಹೊಂದಿರುವುದು ಅಚ್ಚರಿ ಮೂಡಿಸಿದೆ. ಅದೂ ಕೂಡ ಶಾರುಖ್, ರಣಬೀರ್ ಕಪೂರ್, ಸಲ್ಮಾನ್ ಖಾನ್ ಮತ್ತು ರೇಖಾ ಅವರಂತಹ ಸೆಲೆಬ್ರಿಟಿಗಳು ವಾಸಿಸುವ ಪ್ರದೇಶದಲ್ಲಿ ತೃಪ್ತಿ ದಿಮ್ರಿ ಹೊಸ ಮನೆಯನ್ನು ಖರೀದಿಸಿದ್ದಾರೆ. ಅನಿಮಲ್ ಬ್ಯೂಟಿ ಈ ಮನೆಯನ್ನು 14 ಕೋಟಿ ರೂಪಾಯಿ ಕೊಟ್ಟು ಖರೀದಿಸಿದ್ದಾರಂತೆ. ತೃಪ್ತಿ ದಿಮ್ರಿ ಈಗಾಗಲೇ ಸ್ಟ್ಯಾಂಪ್ ಡ್ಯೂಟಿಗಾಗಿ 70 ಲಕ್ಷ ಮತ್ತು ನೋಂದಣಿಗಾಗಿ 30 ಸಾವಿರ ಪಾವತಿಸಿದ್ದಾರೆ ಎಂದು ಬಾಲಿವುಡ್ ಮೂಲಗಳು ಹೇಳುತ್ತವೆ. ಸದ್ಯ ತೃಪ್ತಿ ದಿಮ್ರಿ ಭೂಲ್ ಭೂಲಯ 3 ಚಿತ್ರದಲ್ಲಿ ನಟಿಸುತ್ತಿದ್ದಾರೆ. ಅನಿಮಲ್ ಚಿತ್ರದ ನಂತರ ಆಕೆಗೆ ಅವಕಾಶಗಳು ಹೆಚ್ಚುತ್ತಿವೆ.

## ಮೆದುಳಿನ ಆರೋಗ್ಯಕ್ಕೆ ಒಳ್ಳೆಯದು ವಾಲ್‌ನಟ್

### ಹೆಲ್ತ್ ಟಿಪ್ಸ್



ವಾಲ್‌ನಟ್ ಬೀಜಗಳು ನಮ್ಮ ಮೆದುಳಿನ ಆರೋಗ್ಯದ ಮೇಲೆ ಸಕಾರಾತ್ಮಕ ಪ್ರಭಾವ ಬೀರುತ್ತವೆ. ಏಕೆಂದರೆ ಇವುಗಳಲ್ಲಿ ಒಮೆಗಾ 3 ಫ್ಯಾಟಿ ಆಮ್ಲಗಳ ಪ್ರಮಾಣ ಹೇರಳವಾಗಿ ಕಂಡುಬಂದಿದ್ದು, ಮೆದುಳಿನ ಕಾರ್ಯ ಚಟುವಟಿಕೆಯನ್ನು ಅಭಿವೃದ್ಧಿಪಡಿಸುತ್ತದೆ.

ವಾಲ್ನಟ್ ಬೀಜಗಳು ತಮ್ಮಲ್ಲಿ ಆರೋಗ್ಯಕರವಾದ ಕೊಬ್ಬು ಹಾಗೂ ಆಂಟಿ ಆಕ್ಸಿಡೆಂಟ್ ಅಂಶಗಳನ್ನು ಒಳಗೊಂಡಿದ್ದು, ಇದು ನಮ್ಮ ದೇಹದ ಕೆಟ್ಟ ಕೊಲೆಸ್ಟ್ರಾಲ್ ಪ್ರಮಾಣವನ್ನು ಕಡಿಮೆ ಮಾಡಬಲ್ಲ ಸಾಮರ್ಥ್ಯವನ್ನು ಹೊಂದಿದೆ.

ನಮ್ಮ ರಕ್ತದ ಒತ್ತಡವನ್ನು ಆರೋಗ್ಯಕರವಾಗಿ ನಿರ್ವಹಿಸುವುದರ ಜೊತೆಗೆ ನಮ್ಮ ಹೃದಯ ರಕ್ತನಾಳದ ಕಾಯಿಲೆಯನ್ನು ದೂರ ಮಾಡಿ ಹೃದಯಕ್ಕೆ ಯಾವುದೇ ತೊಂದರೆ ಉಂಟಾಗದಂತೆ ನೋಡಿಕೊಳ್ಳುತ್ತದೆ.

ನೆನೆಸಿದ ವಾಲ್ನಟ್ ಬೀಜಗಳು ತಮ್ಮಲ್ಲಿ ಫೈಟಿಕ್ ಆಮ್ಲ ಕಡಿಮೆ ಮಾಡುವ ಗುಣವನ್ನು ಹೊಂದಿವೆ. ಹೀಗಾಗಿ ನಾವು ಸೇವಿಸಿದ ಆಹಾರ ನಮ್ಮ ದೇಹದಲ್ಲಿ ಚೆನ್ನಾಗಿ ಜೀರ್ಣವಾಗುತ್ತದೆ ಜೊತೆಗೆ ಜೀರ್ಣಾಂಗ ವ್ಯವಸ್ಥೆಗೆ ಸಂಬಂಧಪಟ್ಟಂತೆ ಮಲಬದ್ಧತೆ, ಅಜೀರ್ಣತೆ ಹಾಗೂ ಹೊಟ್ಟೆ ಉಬ್ಬರ ಸಮಸ್ಯೆ ಇರುವುದಿಲ್ಲ. ಕರುಳಿನ ಆರೋಗ್ಯವನ್ನು ಸಹ ಇದು ಉತ್ತಮಪಡಿಸುತ್ತದೆ.

ನಮ್ಮ ದೇಹದ ತೂಕವನ್ನು ನಿರ್ವಹಣೆ ಮಾಡುವಲ್ಲಿ ವಾಲ್ನಟ್ ಬೀಜಗಳು ಸಹಾಯಕ ಎಂದು ಹೇಳಬಹುದು. ಏಕೆಂದರೆ ಇವುಗಳು ತಮ್ಮಲ್ಲಿ ಹೆಚ್ಚಿನ ಪ್ರಮಾಣದ ನಾರಿನ ಹಾಗೂ ಪ್ರೋಟಿನ್ ಅಂಶವನ್ನು ಒಳಗೊಂಡಿದ್ದು, ನಮ್ಮ ಹೊಟ್ಟೆ ತುಂಬಿದ ಅನುಭವ ಉಂಟು ಮಾಡುತ್ತದೆ ಜೊತೆಗೆ ಕ್ಯಾಲೋರಿಗಳನ್ನು ಕಡಿಮೆ ಮಾಡುತ್ತವೆ. ಇದರಿಂದ ನಮ್ಮ ದೇಹದ ತೂಕ ಹೆಚ್ಚಾಗಲು ಬಿಡುವುದಿಲ್ಲ.

ನಮ್ಮ ಸೌಂದರ್ಯವನ್ನು ಹೆಚ್ಚಿಸುವಲ್ಲಿ ಕೂಡ ವಾಲ್ನಟ್ ಬೀಜಗಳು ಪ್ರಮುಖ ಪಾತ್ರ ವಹಿಸುತ್ತವೆ. ಏಕೆಂದರೆ ಇವುಗಳಲ್ಲಿ ವಿಟಮಿನ್ ಬಿ5 ಮತ್ತು ವಿಟಮಿನ್ ಇ ಪ್ರಮಾಣ ಜೋರಾಗಿದ್ದು, ಆರೋಗ್ಯಕರವಾದ ತ್ವಚೆಗೆ ಇವುಗಳು ಅಗತ್ಯ. ಈ ಪೌಷ್ಟಿಕ ಸತ್ವಗಳು ನಮ್ಮ ದೇಹದ ಉರಿಯುತವನ್ನು ಕಡಿಮೆ ಮಾಡುವುದರ ಜೊತೆಗೆ ಚರ್ಮದ ಒಣಗುವಿಕೆ ತೊಂದರೆಯನ್ನು ದೂರ ಮಾಡುತ್ತದೆ. ವಯಸ್ಸಾಗುವಿಕೆ ಪ್ರಕ್ರಿಯೆಯಿಂದ ನಮ್ಮನ್ನು ಕಾಪಾಡುತ್ತದೆ ಮತ್ತು ಕಾಂತಿಯುತವಾದ ಚರ್ಮ ನಮ್ಮದಾ ಗುತ್ತದೆ.

ವಾಲ್ನಟ್ ಬೀಜಗಳಲ್ಲಿ ವಿಟಮಿನ್ ಬಿ7 ಬಯೋಟಿನ್ ರೂಪದಲ್ಲಿ ಲಭ್ಯವಿದ್ದು, ನಮ್ಮ ತಲೆ ಕೂದಲಿನ ಕಿರು ಚೀಲಗಳನ್ನು ಅಭಿವೃದ್ಧಿ ಪಡಿಸುವಲ್ಲಿ ನೆರವಾಗುತ್ತದೆ. ನೆನೆ ಹಾಕಿದ ವಾಲ್ನಟ್ ಬೀಜಗಳು ನಮ್ಮ ನಿದ್ರೆಯ ಗುಣಮಟ್ಟ ವನ್ನು ಹೆಚ್ಚುವಂತೆ ಮಾಡುತ್ತವೆ ಮತ್ತು ನಿದ್ರಾಹೀನತೆ ಸಮಸ್ಯೆಯನ್ನು ದೂರ ಮಾಡುತ್ತವೆ.

ವಾಲ್ನಟ್ ಬೀಜಗಳಲ್ಲಿ ಮೆಲಟೋನಿನ್ ಎಂಬ ಹಾರ್ಮೋನ್ ಇರಲಿದ್ದು, ರಾತ್ರಿ ಹೊತ್ತು ನೆಮ್ಮದಿಯಾಗಿ ನಿದ್ರೆ ಮಾಡುವಂತ ಮಾಡುತ್ತದೆ. ವಾಲ್ನಟ್ ಬೀಜಗಳನ್ನು ನೆನೆ ಹಾಕಿ ಸೇವಿಸುವುದ ರಿಂದ ನಮ್ಮ ಸಂಪೂರ್ಣ ಆರೋಗ್ಯ ಉತ್ತಮಗೊಳ್ಳುತ್ತದೆ.

ವಾಲ್ನಟ್ ಬೀಜಗಳಲ್ಲಿ ಮೆಗ್ನೀಷಿಯಮ್, ಕ್ಯಾಲ್ಸಿಯಂ ಮತ್ತು ಫಾಸ್ಫರಸ್ ಪ್ರಮಾಣ ಹೇರಳವಾಗಿದ್ದು, ಆರೋಗ್ಯಕರವಾದ ಮೂಳೆಗಳು ನಮ್ಮ ದಾಗುವ ಹಾಗೆ ಮಾಡುತ್ತದೆ. ಮೂಳೆಗಳಿಗೆ ಸಂಬಂಧಪಟ್ಟಂತೆ ಯಾವುದೇ ಸಮಸ್ಯೆಗಳು ಇದ್ದರೂ ಸಹ ದೂರವಾಗುತ್ತದೆ.

## ಗ್ರೀಸ್ ನಲ್ಲಿ ಹಾಲಿಡೇ ಹೋಮ್ ಕೊಳ್ಳಲು ಭಾರತೀಯರಿಗೆ ಉತ್ತೇಜನ





ಗ್ರೀಸ್ ನಲ್ಲಿ ಕನಸಿನ ಹಾಲಿಡೇ ಹೋಮ್ ಹೊಂದುವ ಹಾಗೂ ಪರ್ಮನೆಂಟ್ ರೆಸಿಡೆನ್ಸಿಯ ಗೋಲ್ಡನ್ ವಿಸಾ ಹೊಂದುವ ಕನಸು ಆಗಸ್ಟ್ 31, 2024ರಿಂದ ಹೆಚ್ಚು ದುಬಾರಿಯಾಗಲಿದೆ. ಸೆಪ್ಟೆಂಬರ್ ತಿಂಗಳಿಂದ ಗ್ರೀಕ್ ಸರ್ಕಾರವು ಜಾಗತಿಕ ನಾಗರಿಕರಿಗೆ ಗ್ರೀಸ್ ನಲ್ಲಿ ರಿಯಲ್ ಎಸ್ಟೇಟ್ ಮಾಲೀಕತ್ವ ಹೊಂದಲು ಅಗತ್ಯವಾದ ಕನಿಷ್ಠ ಹೂಡಿಕೆಯನ್ನು ದ್ವಿಗುಣಗೊಳಿಸಲಿದೆ.

ಈ ಪ್ರಾರಂಭಿಕ ಬೆಲೆಯ ಹೂಡಿಕೆಯು ಪ್ರಸ್ತುತ ಕನಿಷ್ಠ 250,000 ಯೂರೋ ಇದ್ದು ಸೆಪ್ಟೆಂಬರ್ ತಿಂಗಳಿಗೆ 400,000 ಯೂರೋಗೆ ಹೆಚ್ಚಳವಾಗಲಿದೆ. ಭಾರತೀಯರು ಸದಾ ಗ್ರೀಸ್ ನಲ್ಲಿ ತಮ್ಮ ಹಾಲಿಡೇ ಹೋಮ್ ಹೊಂದುವ ಕನಸು ಹೊಂದಿದ್ದು ತಕ್ಷಣವೇ ಕ್ರಮ ಕೈಗೊಳ್ಳುವ ಮೂಲಕ ಈ ಬೆಲೆ ಹೆಚ್ಚಳವನ್ನು ತಪ್ಪಿಸಿಕೊಳ್ಳಬಹುದು ಮತ್ತು ಲೆಪ್ಟೋಸ್ ಎಸ್ಟೇಟ್ಸ್ ಮೂಲಕ ಆಗಸ್ಟ್ 31ರ ಒಳಗಡೆ ಪರೊಸ್, ಕ್ರೆಟ್ ಮತ್ತು ಸಂಟೊರಿನಿಯಂತಹ ತಾಣಗಳಲ್ಲಿ ಸ್ಥಿರಾಸ್ತಿ ಖರೀದಿಸಬಹುದು.

ಅತ್ಯಂತ ಪೈಪೋಟಿಯ ಗ್ರೀಸ್ ಗೋಲ್ಡ್ ವಿಸಾ (ಪರ್ಮನೆಂಟ್ ರೆಸಿಡೆನ್ಸಿ) ಪ್ರಸ್ತುತ ಯೂರೋಪ್ ಮತ್ತು ವಿಶ್ವದಾದ್ಯಂತ ಅತ್ಯಂತ ಕೈಗೆಟುಕುವ ರೆಸಿಡೆನ್ಸಿ ಕಾರ್ಯಕ್ರಮಗಳಲ್ಲಿ ಒಂದಾಗಿದ್ದು ಜಾಗತಿಕ ಹೆಚ್ಚಿನ ಸಂಪತ್ತು ಹೊಂದಿರುವ ವ್ಯಕ್ತಿಗಳು ತಮ್ಮ ಕುಟುಂಬಗಳೊಂದಿಗೆ ಯೂರೋಪ್ ನಲ್ಲಿ ಶಾಶ್ವತ ಮನೆಯನ್ನು ಪಡೆಯಲು 'ಯೂರೋಪ್ ನಾದ್ಯಂತ ವಿಸಾ ಮುಕ್ತ ಪ್ರಯಾಣ' ನಡೆಸಲು ಅವಕಾಶ ಕಲ್ಪಿಸುತ್ತದೆ. ಉಚಿತ ಆರೋಗ್ಯ ಮತ್ತು ಶಿಕ್ಷಣ ಅಲ್ಲದೆ ದೇಶದಲ್ಲಿ ಉದ್ಯಮ ಸ್ಥಾಪಿಸುವ ಸ್ವಾತಂತ್ರ್ಯವು ಪಿ.ಆರ್. ನೀಡುವ ಇತರೆ ಅನುಕೂಲಗಳಾಗಿವೆ.

ಪ್ರಮುಖ ರಿಯಲ್ ಎಸ್ಟೇಟ್ ಮತ್ತು ಪ್ರಾಪರ್ಟಿ ಡೆವಲಪ್ ಮೆಂಟ್ ಕಂಪನಿ ಲೆಪ್ಟೋಸ್ ಎಸ್ಟೇಟ್ಸ್ ವಸತಿ, ವಾಣಿಜ್ಯ ಮತ್ತು ಹಾಲಿಡೇ ರೆಸಿಡೆನ್ಸಿಗಳಲ್ಲಿ ಪರಿಣಿತಿ ಹೊಂದಿದ್ದು ಅದರಲ್ಲಿ ಪ್ರಮುಖ ಅಪಾರ್ಟ್ ಮೆಂಟ್ ಗಳು ಮತ್ತು ಐಷಾರಾಮಿ ವಿಲ್ಲಾಗಳು ಗ್ರೀಸ್ ಮತ್ತು ಸಿಪ್ರಸ್ ನಲ್ಲಿ ಹೊಂದಿದ್ದು ಭಾರತದ ಹೆಚ್ಚಿನ ಸಂಪತ್ತು ಹೊಂದಿರುವ ವ್ಯಕ್ತಿಗಳನ್ನು ನಿಯಮಗಳು ಬದಲಾಗುವ ಮುನ್ನ ಹೂಡಿಕೆ ಮಾಡಲು ಆಹ್ವಾನಿಸುತ್ತಿದೆ.

2013ರಲ್ಲಿ ಪ್ರಾರಂಭವಾದ ಗ್ರೀಸ್ ಗೋಲ್ಡನ್ ವಿಸಾ ಕಾರ್ಯಕ್ರಮಕ್ಕೆ ಜನಪ್ರಿಯತೆ ಮತ್ತು ಬೇಡಿಕೆ ಹೆಚ್ಚಾಗುತ್ತಿದ್ದು ಇದು ಗ್ರೀಕ್ ಸರ್ಕಾರವು ರಿಯಲ್ ಎಸ್ಟೇಟ್ ಹೂಡಿಕೆ ಮತ್ತು ಪರ್ಮನೆಂಟ್ ರೆಸಿಡೆನ್ಸಿ ನಿಯಮಗಳನ್ನು ಮರು ರೂಪಿಸುವಂತೆ ಮಾಡಿದೆ. ಹೊಸ ನಿಯಮದ ಪ್ರಕಾರ ಜನಪ್ರಿಯ ತಾಣಗಳಾದ ಅಟ್ಟಿಕಾ, ಥೆಸ್ಸಲೊನಿಕಿ, ಮೈಕೊನೊಸ್, ಸಂಟೋರಿನಿ ಮತ್ತು ಐಲಾಂಡ್ಸ್ ಗಳಲ್ಲಿ ಕನಿಷ್ಠ ಹೂಡಿಕೆಯು 500,000 ಯೂರೋದಿಂದ 800,000 ಯೂರೋಗೆ ವೃದ್ಧಿಸುವ ನಿರೀಕ್ಷೆ ಇದೆ. ''ಅಂತಿಮ ಗಡುವು ಹತ್ತಿರದಲ್ಲಿರುವುದರಿಂದ ಬೆಲೆಗಳು ಹೆಚ್ಚಾಗುವ ನಿರೀಕ್ಷೆ ಇದ್ದು ನಂತರ ಭಾರತೀಯ ಹೂಡಿಕೆದಾರರಿಗೆ ಗ್ರೀಕ್ ನಲ್ಲಿ ಮನೆ ಹೊಂದುವುದು ಕಷ್ಟವಾಗುತ್ತದೆ. ನಾವು ಹೆಚ್ಚು ಸಂಪತ್ತಿನ ಮತ್ತು ಹೂಡಿಕೆದಾರರಿಗೆ ಈ ವಿಶಿಷ್ಟ ಜೀವಿತಕಾಲದ ಅವಕಾಶವನ್ನು ಬಳಸಿಕೊಳ್ಳುವ ಮೂಲಕ ಗ್ರೀಸ್ ನಲ್ಲಿ ಪರ್ಮನೆಂಟ್ ರೆಸಿಡೆನ್ಸಿ ಹೊಂದಲು ಕೋರುತ್ತೇವೆ. ಅವರಿಗೆ 250,000 ಯೂರೋ ಕೈಗೆಟುಕುವ ಕನಿಷ್ಠ ವೆಚ್ಚದ ಹೂಡಿಕೆಯ ಮೇಲೆ ಉತ್ತಮ ಗಳಿಕೆ ಪಡೆಯುವ ಅವಕಾಶವಿದೆ. ಹೊಸ ನಿಯಮಗಳು ಜಾರಿಗೆ ಬಂದ ನಂತರ ವೆಚ್ಚ ದುಪ್ಪಟ್ಟಾಗುತ್ತದೆ. ನಮ್ಮಲ್ಲಿ ಸುಂದರವಾಗಿ ಮತ್ತು ಸುಸ್ಥಿರವಾಗಿ ವಿನ್ಯಾಸಗೊಳಿಸಿದ ಅಪಾರ್ಟ್ಮೆಂಟ್ ಗಳು ಮತ್ತು ವಿಲ್ಲಾಗಳಿದ್ದು ಅವು ಜಾಗತಿಕ ನಾಗರಿಕರಿಗೆ ಮಹತ್ತರ ವಾಸಸ್ಥಳಗಳಾಗುತ್ತವೆ'' ಎಂದು ಲೆಪ್ಟೋಸ್ ಎಸ್ಟೇಟ್ಸ್ ಗ್ರೂಪ್ ಮಾರ್ಕೆಟಿಂಗ್ ಡೈರೆಕ್ಟರ್ ಸಂಜಯ್ ಸಚ್ ದೇವ್ ಹೇಳಿದರು. ಆಗಸ್ಟ್ 31, 2024ರ ವೇಳೆಗೆ ಶೇ.10ರಷ್ಟು ಠೇವಣಿ ಪಾವತಿಸಿದರೂ ಹೂಡಿಕೆದಾರರು ಪ್ರಸ್ತುತ ಇರುವ 250,000 ಯೂರೋ ಹೂಡಿಕೆಯ ಅವಕಾಶವನ್ನು ಪಡೆಯಬಹುದು.

## ಕೂದಲಿನ ಆರೈಕೆಗೆ ಮೀನಿನ ಎಣ್ಣೆ

### ಬ್ಯೂಟಿ ಟಿಪ್ಸ್



ಕೂದಲಿನ ಆರೈಕೆಗಾಗಿ ಹಲವಾರು ಎಣ್ಣೆಯನ್ನು ಬಳಸುತ್ತಾರೆ. ಆದರೆ ಮೀನಿನ ಎಣ್ಣೆಯನ್ನು ಕೂದಲಿಗೆ ಯಾರು ಬಳಸುವುದಿಲ್ಲ. ಮೀನಿನ ಎಣ್ಣೆಯನ್ನು ಹೆಚ್ಚಾಗಿ ಔಷಧ ತಯಾರಿಕೆಯಲ್ಲಿ ಬಳಸುತ್ತಾರೆ. ಆದರೆ ಇದನ್ನು ಕೂದಲಿಗೆ ಹಚ್ಚುವುದರಿಂದ ಏನಾಗುತ್ತದೆ ಎಂಬುದನ್ನು ತಿಳಿಯಿರಿ.

ಮೀನಿನ ಎಣ್ಣೆಯಲ್ಲಿ ಒಮೆಗಾ 3 ಕೊಬ್ಬಿನಾಮ್ಲ ಸಮೃದ್ಧವಾಗಿದೆ. ಇದನ್ನು ಕೂದಲಿಗೆ ಹಚ್ಚಿ ಮಸಾಜ್ ಮಾಡುವುದರಿಂದ ಒಣಕೂದಲಿನ ಸಮಸ್ಯೆ, ಕೂದಲು ಕವಲೊಡೆಯುವಿಕೆಯಂತಹ ಸಮಸ್ಯೆಗಳನ್ನು ನಿವಾರಿಸಬಹುದು.

ಮೀನಿನ ಎಣ್ಣೆಯಲ್ಲಿರುವ ಒಮೆಗಾ 3 ಕೊಬ್ಬಿನಾಮ್ಲ ಕೂದಲಿನ ಕಿರುಚೀಲಗಳನ್ನು ಆರೋಗ್ಯವಾಗಿಡುತ್ತದೆ. ಇದು ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸುತ್ತದೆ. ನೆತ್ತಿಯನ್ನು ಪೋಷಿಸುತ್ತದೆ. ನೆತ್ತಿಯಲ್ಲಿ ರಕ್ತ ಸಂಚಾರವನ್ನು ಹೆಚ್ಚಿಸುತ್ತದೆ. ಇದರಿಂದ ಕೂದಲು ಬಲವಾಗುತ್ತದೆ.

ಮೀನಿನ ಎಣ್ಣೆಯನ್ನು ಕೂದಲಿಗೆ ನಿಯಮಿತವಾಗಿ ಬಳಸುವುದರಿಂದ ನೆತ್ತಿಯಲ್ಲಿರುವ ತುರಿಕೆ ನಿವಾರಣೆಯಾಗುತ್ತದೆ. ಹಾಗೂ ತಲೆಹೊಟ್ಟಿನ ಸಮಸ್ಯೆಯನ್ನು ಕಡಿಮೆ ಮಾಡುತ್ತದೆ. ಅಲ್ಲದೇ ಇದು ಕೂದಲಿನ ಬುಡಕ್ಕೆ ಆಮ್ಲಜನಕವನ್ನು ಪೂರೈಸುತ್ತದೆ. ಇದರಿಂದ ಒಣಕೂದಲಿನ ಸಮಸ್ಯೆ ಕಾಡುವುದಿಲ್ಲ.

ಹಾಗಾಗಿ ನಿಯಮಿತವಾಗಿ ಮೀನಿನ ಎಣ್ಣೆಯನ್ನು ಕೂದಲಿಗೆ ಹಚ್ಚಿಕೊಳ್ಳುವುದರ ಮೂಲಕ ಕೂದಲಿನ ಆರೋಗ್ಯವನ್ನು ಕಾಪಾಡಿಕೊಳ್ಳಿ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಬಂಧುಗಳ ಆಗಮನದಿಂದ ಸಂತಸ, ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ,

**ವೃಷಭ:** ರಕ್ಷಣಾ ಕ್ಷೇತ್ರದಲ್ಲಿರುವವರಿಗೆ ಗೌರವ, ನಿಮ್ಮ ಶ್ರಮದಿಂದ ಹೆಚ್ಚಿನ ಯಶಸ್ಸು, ಆರೋಗ್ಯದಲ್ಲಿ ಏರಿಳಿತ ಇರುತ್ತದೆ.

**ಮಿಥುನ:** ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ, ವಿದ್ಯಾರ್ಥಿಗಳಿಗೆ ಉತ್ತಮ ಅವಕಾಶ,

**ಕಟಕ:** ವಾಹನ ಖರೀದಿಸುವ ಸಾಧ್ಯತೆ, ಸಂಗೀತದ ಕಡೆಗೆ ಆಸಕ್ತಿ ಹೆಚ್ಚಾಗುತ್ತದೆ, ಕೃಷಿಯಲ್ಲಿ ನಷ್ಟವಾಗುತ್ತದೆ.

**ಸಿಂಹ:** ಅವಿವಾಹಿತರಿಗೆ ವಿವಾಹ ಯೋಗವಿದೆ, ಕೋರ್ಟ್ ವ್ಯಾಜ್ಯಗಳಲ್ಲಿ ಯಶಸ್ಸು ಕಾಣುವಿರಿ,

**ಕನ್ಯಾ:** ವಿದೇಶಿ ಪ್ರವಾಸಕ್ಕೆ ಸಿದ್ಧತೆ, ಸಂಗಾತಿ, ಮಕ್ಕಳ ಜೊತೆಗೆ ಉತ್ತಮ ಬಾಂಧವ್ಯ, ಅನ್ಯ ಜನರ ಸಲಹೆಗೆ ಕಿವಿಗೊಡಬೇಡಿ.

**ತುಲಾ:** ಪ್ರೀತಿಪಾತ್ರರಿಂದ ಉಡುಗೊರೆ, ಸಿನಿಮಾದವರಿಗೆ ಹೆಚ್ಚು ಅವಕಾಶಗಳಿವೆ, ದುರಾಗುವುದು.

**ವೃಶ್ಚಿಕ:** ವ್ಯವಹಾರಸ್ಥರಿಗೆ ಉತ್ತಮ ಸಮಯ, ನಿಮ್ಮ ಯಶಸ್ಸಿನಿಂದ ಪೋಷಕರಿಗೆ ಸಂತೋಷ, ವೈಯಕ್ತಿಕ ಜೀವನದಲ್ಲಿ ಭಿನ್ನಾಭಿಪ್ರಾಯ

**ಧನುಸ್ಸು:** ರಾಜಕಾರಣಿಗಳಿಗೆ ಪ್ರಗತಿ ಸಿಗಲಿದೆ, ಆಭರಣ ಖರೀದಿಸುವ ಸಾಧ್ಯತೆಯಿದೆ, ಆಸ್ತಿ ಸಂಬಂಧಿತ ಕಾರ್ಯಗಳಲ್ಲಿ ಮುನ್ನಡೆ

**ಮಕರ:** ಕುಟುಂಬದ ಸದಸ್ಯರಲ್ಲಿ ಒಗ್ಗಟ್ಟು ಹೆಚ್ಚಾಗುತ್ತದೆ, ಜಮೀನು ಖರೀದಿ ಯೋಗವಿದೆ,

**ಕುಂಭ:** ಕೆಲಸದ ಸ್ಥಳದಲ್ಲಿ ಯಶಸ್ಸು, ಮಂಗಳ ಕಾರ್ಯಕ್ರಮ ನಡೆಯುವುದು, ಯಾರಿಗೂ ಸಾಲ ನೀಡಬೇಡಿ.

**ಮೀನ:** ಆರೋಗ್ಯದಲ್ಲಿ ಉದಾಸೀನತೆ ತೋರದಿರಿ, ಕ್ರೀಡಾ ಕ್ಷೇತ್ರದವರಿಗೆ ಗೌರವ ಹೆಚ್ಚುತ್ತದೆ, ಮಕ್ಕಳ ವರ್ತನೆಯಿಂದ ಬೇಸರ.

## ಡೊನಾಲ್ಡ್ ಡಕ್ ಡೇ

ಡೊನಾಲ್ಡ್ ಡಕ್ ಡೇ ಅನ್ನು ಇಂದು ಆಚರಿಸಲಾಗುವುದು. ಜೂನ್ 9, 1934 ರಂದು ಡಿಸ್ನಿಯ ಅಚ್ಚುಮೆಚ್ಚಿನ ಪಾತ್ರದ ಡೊನಾಲ್ಡ್ ಡಕ್ಗೆ ಜಗತ್ತನ್ನು ಪರಿಚಯಿಸಲಾಯಿತು. ಹೆಚ್ಚು ಕಡಿಮೆ ಕಾಮಿಕ್-ಬುಕ್ ಪಾತ್ರವಾಗಿ ಪ್ರಾರಂಭಿಸಿ, ಅವರು ಇದುವರೆಗೆ ಹೆಚ್ಚು ಪ್ರಕಟವಾದ ಸೂಪರ್ಹೀರೋ ಅಲ್ಲ. ಫಿನ್ಲ್ಯಾಂಡ್ನಲ್ಲಿ ಡೊನಾಲ್ಡ್ ಡಕ್ ರಾಷ್ಟ್ರೀಯ ನಾಯಕನಾಗಿರುವ ಅವನ ಜನಪ್ರಿಯತೆ ಎಷ್ಟು! ಈ ಪಾತ್ರವು ಫಿನ್ಲ್ಯಾಂಡ್ನಲ್ಲಿ ಪಾಪ್ ಸಂಸ್ಕೃತಿಯ ಐಕಾನ್ ಆಗಿದೆ, ಜಪಾನ್ನಲ್ಲಿರುವ ಹಲೋ ಕಿಟ್ಟಿಯಂತೆ. ಯಾವುದೇ ಪ್ಯಾಂಟ್ ಇಲ್ಲದೆ ತನ್ನ ಸಹಿ ನೀಲಿ ನಾವಿಕ ಸೂಟ್ ಧರಿಸಿ, ಡೊನಾಲ್ಡ್ ಡಕ್ ಯಾವುದೇ ಇತರ ಡಿಸ್ನಿ ಪಾತ್ರಗಳಿಗಿಂತ ಹೆಚ್ಚು ಕಿರುಚಿತ್ರಗಳು ಮತ್ತು ಚಲನಚಿತ್ರಗಳಲ್ಲಿ ಕಾಣಿಸಿಕೊಂಡಿದ್ದಾನೆ. ಅವರ ಪಾತ್ರದ ವೈವಿಧ್ಯಮಯ ಸ್ವಭಾವವೇ ಅವರನ್ನು ಸೇನಾ ಅಧಿಕಾರಿ ಮತ್ತು ಶಿಕ್ಷಕ, ಚಿಕ್ಕಪ್ಪನಿಂದ ಮೂರು ಬಾತುಕೋಳಿಗಳವರೆಗೆ ಹಲವಾರು ಪಾತ್ರಗಳಲ್ಲಿ ಕಾಣಿಸಿಕೊಳ್ಳಲು ಅವಕಾಶ ಮಾಡಿಕೊಟ್ಟಿದೆ.ಗುಡಿ-ಗುಡಿ ಜಾಲಿ ಮಿಕ್ಕಿ ಮೌಸ್ ಅನ್ನು ಸಮತೋಲನಗೊಳಿಸಲು ಡೊನಾಲ್ಡ್ ಡಕ್ ಒಂದು ಹರಿತವಾದ ಪಾತ್ರವನ್ನು ಪರಿಚಯಿಸಲು ವಾಲ್ಟ್ ಡಿಸ್ನಿ ಕಲ್ಪನೆಯನ್ನು ನೀಡಿದರು. ಡೊನಾಲ್ಡ್ ಪಾತ್ರದ ರಚನೆಯ ಪ್ರಾಯೋಗಿಕ ಹಂತದಲ್ಲಿ, ಡಿಸ್ನಿ ಆಸ್ಟ್ರೇಲಿಯಾದ ಕ್ರಿಕೆಟಿಗ ಡೊನಾಲ್ಡ್ ಬ್ರಾಡ್ಮನ್ ಬಗ್ಗೆ ಓದಿದರು, ಅವರು ಡಕ್ಗಾಗಿ ವಜಾಗೊಂಡ ನಂತರ ಮುಖ್ಯಾಂಶಗಳನ್ನು ಮಾಡಿದರು. ಡೊನಾಲ್ಡ್ ಡಕ್ನ ಮತ್ತೊಂದು ವಿಶಿಷ್ಟ ಲಕ್ಷಣವೆಂದರೆ ಅವನ ಧ್ವನಿ. ಡೊನಾಲ್ಡ್ನ ಮೂಲ ಧ್ವನಿ ನಟನಾದ ಕ್ಲಾರೆನ್ಸ್ ನ್ಯಾಶ್, ಧ್ವನಿಪೆಟ್ಟಿಗೆಯ ಬದಲಿಗೆ ಧ್ವನಿಯನ್ನು ರಚಿಸಲು ಒಳಗಿನ ಕೆನ್ನೆಯನ್ನು ಬಳಸಿಕೊಳ್ಳುವ ಒಂದು ರೀತಿಯ ಗಾಯನದ ರೂಪವಾದ 'ಬುಕಲ್ ಸ್ಪೀಚ್' ಮೂಲಕ ಸಾಧಿಸಿದ ವಿಶಿಷ್ಟ ಧ್ವನಿಯನ್ನು ರಚಿಸಿದರು. ತನ್ನ ಮುದ್ದಿನ ಮೇಕೆಯನ್ನು ಅನುಕರಿಸಲು ಪ್ರಯತ್ನಿಸುತ್ತಿರುವಾಗ ನ್ಯಾಶ್ ಇದನ್ನು ಮೊದಲು ಕಂಡುಹಿಡಿದನು. 1940 ರ ದಶಕದಲ್ಲಿ, ಡೊನಾಲ್ಡ್ ಡಕ್ 128 ಸ್ವತಂತ್ರ ಕಿರು ಅನಿಮೇಷನ್ಗಳೊಂದಿಗೆ ಮಿಕ್ಕಿ ಮೌಸ್ ಅನ್ನು ಹಿಂದಿಕ್ಕಿದರು. ಇದು ನಿಜವಾಗಿಯೂ ಡೊನಾಲ್ಡ್ನ ದಶಕವಾಗಿತ್ತು, ಏಕೆಂದರೆ ಅವರು ಇತರ ಡಿಸ್ನಿ ವ್ಯಕ್ತಿಗಳಿಗಿಂತ ವೇಗವಾಗಿ ಜನಪ್ರಿಯತೆಯನ್ನು ಗಳಿಸಿದರು. ವಿಶ್ವ ಸಮರ ಋಋ ರ ಸಮಯದಲ್ಲಿ, ಅದರ ಹೆಚ್ಚಿನ ನಿರ್ಮಾಣವನ್ನು ನಿಲ್ಲಿಸಬೇಕಾಗಿದ್ದರೂ, ಡಿಸ್ನಿ ಹಲವಾರು ಅಮೇರಿಕನ್ ಪ್ರಚಾರ ಚಲನಚಿತ್ರಗಳಲ್ಲಿ ಡೊನಾಲ್ಡ್ ಡಕ್ ಅನ್ನು ಬಳಸಿಕೊಂಡು ತನ್ನ ನಿಲುವನ್ನು ಪ್ರತಿನಿಧಿಸಿತು. ಈ ಅನಿಮೇಷನ್ಗಳಲ್ಲಿ ಒಂದಾದ ಡಿಸ್ನಿಯು 'ಅತ್ಯುತ್ತಮ ಕಿರುಚಿತ್ರ'ಕ್ಕಾಗಿ ಅಕಾಡೆಮಿ ಪ್ರಶಸ್ತಿಯನ್ನು ಗಳಿಸಿತು. ಚಲನಚಿತ್ರಗಳಲ್ಲಿನ ಅವರ ಯಶಸ್ಸಿನ ಹೊರತಾಗಿ, ಡೊನಾಲ್ಡ್ ಅವರು 40 ರ ದಶಕದಲ್ಲಿ ತಮ್ಮದೇ ಆದ ಕಾಮಿಕ್ ಅನ್ನು ಪಡೆದರು, ಇದು ಸ್ವತಂತ್ರ ಡೊನಾಲ್ಡ್ ಡಕ್ ಕಾಮಿಕ್ಸ್ನ ಸಂಪೂರ್ಣ ಸರಣಿಯಾಗಿ ಕವಲೊಡೆಯಿತು, ಇದನ್ನು ಇಂದಿನವರೆಗೂ ವಯಸ್ಕರು ಮತ್ತು ಮಕ್ಕಳು ಪ್ರಸಾರ ಮಾಡುತ್ತಾರೆ ಮತ್ತು ಆನಂದಿಸುತ್ತಾರೆ. ಕಾಮಿಕ್ಸ್ನಲ್ಲಿರುವ ಡೊನಾಲ್ಡ್ - ಡಕ್ಬರ್ಗ್ ಪಟ್ಟಣದಲ್ಲಿ ವಾಸಿಸುವ ಮತ್ತು ಸೋದರಳಿಯರಾದ ಹ್ಯೂ, ಡೀವಿ ಮತ್ತು ಲೂಯಿ ಅವರಿಗೆ ಪ್ರೀತಿಯ ಚಿಕ್ಕಪ್ಪ - ಅವರು ಹೆಚ್ಚು ಸೌಮ್ಯ ಸ್ವಭಾವದವರು ಮತ್ತು ಮೂಲ ಡೊನಾಲ್ಡ್ಗಿಂತ ಉತ್ತಮ-ಸ್ಪಷ್ಟವಾದ ಮಾತು ಮತ್ತು ಭಾವನೆಗಳನ್ನು ಹೊಂದಿದ್ದಾರೆ.ವಾಲ್ಟ್ ಡಿಸ್ನಿಯ ಮರಣದ ನಂತರ, 1983 ರವರೆಗೆ ಡೊನಾಲ್ಡ್ ಡಕ್ ಮತ್ತೆ ತೆರೆಯ ಮೇಲೆ ಕಾಣಿಸಿಕೊಳ್ಳಲಿಲ್ಲ. ಅವರು ಇಂದಿಗೂ ದಂತಕಥೆಯಾಗಿ ಮುಂದುವರೆದಿದ್ದಾರೆ ಮತ್ತು ಕಾರ್ಟೂನ್ ಚಲನಚಿತ್ರಗಳು, ದೂರದರ್ಶನ ಕಾರ್ಯಕ್ರಮಗಳು ಮತ್ತು ಕಾಮಿಕ್ಸ್ಗಳಲ್ಲಿ ಕಾಣಿಸಿಕೊಂಡಿದ್ದಾರೆ.

ಸಂಜೆ ಮುಗಿಲು
ಭಾನುವಾರ
9.6.2024
7

## ಟೇಕ್ ಆಫ್ ಆಗುತ್ತಲೇ ವಿಮಾನದಲ್ಲಿ ಕಾಣಿಸಿಕೊಂಡ ಬೆಂಕಿ

ಟೊರೊಂಟೊದಿಂದ ಪ್ಯಾರಿಸ್ಗೆ ಹಾರುತ್ತಿದ್ದ ಏರ್ ಕೆನಡಾ ಬೋಯಿಂಗ್ ಜೆಟ್, ಟೇಕಾಫ್ ಆದ ಸ್ವಲ್ಪ ಸಮಯದ ನಂತರ ಇಂಜಿನ್ನಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ತಡರಾತ್ರಿ ತುರ್ತು ಭೂಸ್ಪರ್ಶ ಮಾಡಿದೆ ಎಂದು ವರದಿಯಾಗಿದೆ. ಟೊರೊಂಟೊ ಪಿಯರ್ಸನ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಫ್ಲೈಟ್ ೦ಅ872 ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ, ಈ ಘಟನೆ ಸಂಭವಿಸಿದೆ ಎಂದು ವರದಿಯಾಗಿದೆ. ಪ್ಯಾರಿಸ್ನ ಚಾರ್ಲ್ಸ್ ಡಿ ಗೌಲ್ ವಿಮಾನ ನಿಲ್ದಾಣಕ್ಕೆ ಟೇಕ್ ಆಫ್ ಆಗುತ್ತಿದ್ದಂತೆ ಏರ್ ಕೆನಡಾ ಎಂಜಿನ್ ಸಮಸ್ಯೆ ಕಾಣಿಸಿಕೊಂಡಿದೆ. ಇಂಜಿನ್ನಲ್ಲಿ ಬೆಂಕಿ ಹೊತ್ತಿಕೊಂಡಿರುವುದನ್ನು ಗಮನಿಸಿದ ಪೈಲಟ್ ಅರ್ಧ ಗಂಟೆಯಲ್ಲಿ ವಿಮಾನವನ್ನು ಲ್ಯಾಂಡ್ ಮಾಡಿದ್ದಾರೆ, ವಿಮಾನದಲ್ಲಿ ಸುಮಾರು 389 ಪ್ರಯಾಣಿಕರು ಪ್ರಯಾಣಿಸುತ್ತಿದ್ದು, ಎಲ್ಲರೂ ಸುರಕ್ಷಿತವಾಗಿದ್ದಾರೆ ಎಂದು ತಿಳಿದು ಬಂದಿದೆ. ಎಂಜಿನ್ ಬೆಂಕಿಯ ನಿಖರವಾದ ಕಾರಣವನ್ನು ತಿಳಿಯಲು ತನಿಖೆಗಳು ಇನ್ನೂ ನಡೆಯುತ್ತಿದ್ದು, ತಪಾಸಣೆ ಮುಗಿದ ನಂತರ ಈ ಅವಘಡ ಹೇಗೆ ಸಂಭವಿಸಿತು ಎಂದು ತಿಳಿಸುತ್ತೇವೆ ಎಂದು ಏರ್ ಕೆನಡಾ ಸಂಸ್ಥೆ ತಿಳಿಸಿದೆ.



## ವಿಶ್ವಸಂಸ್ಥೆಯ 'ಅವಮಾನದ ಪಟ್ಟಿ'ಗೆ ಇಸ್ರೇಲ್, ಹಮಾಸ್



**ವಿಶ್ವಸಂಸ್ಥೆ :** ಸಶಸ್ತ್ರ ಸಂಘರ್ಷದ ಸಂದರ್ಭ ಮಕ್ಕಳ ಹಕ್ಕುಗಳ ಉಲ್ಲಂಘನೆಯನ್ನು ದಾಖಲಿಸಿದ ಬಳಿಕ ಇಸ್ರೇಲ್ ಹಾಗೂ ಹಮಾಸ್ ಅನ್ನು ವಿಶ್ವಸಂಸ್ಥೆ 'ಅವಮಾನದ ಪಟ್ಟಿಗೆ' ಸೇರಿಸಿದೆ ಎಂದು ಮೂಲಗಳನ್ನು ಉಲ್ಲೇಖಿಸಿ 'ಟೈಮ್ಸ್ ಆಫ್ ಇಸ್ರೇಲ್' ವರದಿ ಮಾಡಿದೆ.

ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಅಂಟೋನಿಯೊ ಗುಟೆರಸ್ ಅವರ ಕಚೇರಿ ಸಲ್ಲಿಸಿರುವ ವಾರ್ಷಿಕ ವರದಿಯಲ್ಲಿ ಈ ಪಟ್ಟಿಯನ್ನು ಲಗತ್ತಿಸಲಾಗಿದೆ. ಇಸ್ರೇಲ್ ಮತ್ತು ಹಮಾಸ್ ಈ ಪಟ್ಟಿಯಲ್ಲಿ ಪ್ರಥಮ ಬಾರಿಗೆ ಕಾಣಿಸಿಕೊಂಡಿದ್ದು ಪಟ್ಟಿಯಲ್ಲಿರುವ ರಶ್ಯ, ಐಸಿಸ್, ಅಲ್ಖೈದಾ, ಬೋಕೊ ಹರಾಮ್, ಅಫ್ಘಾನಿಸ್ತಾನ, ಇರಾಕ್, ಮ್ಯಾನ್ಮಾರ್, ಸೊಮಾಲಿಯಾ, ಯೆಮನ್ ಮತ್ತು ಸಿರಿಯಾದ ಜತೆ ಗುರುತಿಸಿಕೊಂಡಿದೆ.

ಇಸ್ರೇಲ್ ಈ ಪಟ್ಟಿಯಲ್ಲಿ ಸ್ಥಾನ ಪಡೆದಿರುವ ಪ್ರಥಮ ಪ್ರಜಾಪ್ರಭುತ್ವ ರಾಷ್ಟ್ರವಾಗಿದೆ ಎಂದು ವರದಿ ಹೇಳಿದೆ. ಈ ಕುರಿತ ಔಪಚಾರಿಕ ಅಧಿಸೂಚನೆಯನ್ನು ಶುಕ್ರವಾರ ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿಯವರ ಕಚೇರಿಯು ವಿಶ್ವಸಂಸ್ಥೆಗೆ ಇಸ್ರೇಲ್ನ ಕಾಯಂ ಪ್ರತಿನಿಧಿ ಗಿಲಾಡ್ ಎರ್ಡನ್ಗೆ ಹಸ್ತಾಂತರಿಸಿದೆ. ಈ ಹಿಂದಿನ ವರದಿಗಳು ಇಸ್ರೇಲ್- ಫೆಲೆಸ್ತೀನ್ನ ಸಂಘರ್ಷದ ಅಧ್ಯಾಯಗಳನ್ನು ಒಳಗೊಂಡಿದ್ದು ಇಸ್ರೇಲ್ನಿಂದ ಮಕ್ಕಳ ಹಕ್ಕುಗಳ ಘೋರ ಉಲ್ಲಂಘನೆಯಾಗಿದೆ ಎಂದು ಉಲ್ಲೇಖಿಸಿತ್ತು. ಆದರೆ ಇದುವರೆಗೆ ವರದಿಯ ಜತೆಗೆ ಲಗತ್ತಿಸುವ ವರದಿ ವರ್ಷದಲ್ಲಿ ಮಕ್ಕಳ ಸುರಕ್ಷತೆಯನ್ನು ಸುಧಾರಿಸುವ ಕ್ರಮಗಳನ್ನು ಕೈಗೊಳ್ಳದ ಪಕ್ಷಗಳ ಪಟ್ಟಿಯಲ್ಲಿ ಇಸ್ರೇಲ್ ಕಾಣಿಸಿಕೊಂಡಿರಲಿಲ್ಲ. 'ಅವಮಾನದ ಪಟ್ಟಿ' ಎಂದು ಕರೆಸಿಕೊಳ್ಳುವ ವಿಶ್ವಸಂಸ್ಥೆಯ ದಾಖಲೆಯಲ್ಲಿ ಇಸ್ರೇಲ್ ಅನ್ನು ಸೇರ್ಪಡೆಗೊಳಿಸಿರುವ ವಿಶ್ವಸಂಸ್ಥೆಯ ನಿರ್ಧಾರ ಅವಾಸ್ತವಿಕ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಟೀಕಿಸಿದ್ದಾರೆ. ಹಮಾಸ್ ಕೊಲೆಗಡುಕರ ಬೆಂಬಲಿಗರ ಜತೆ ಸೇರುವ ಮೂಲಕ ವಿಶ್ವಸಂಸ್ಥೆಯು ಇವತ್ತು ಸ್ವತಃ ಇತಿಹಾಸದ ಕಪ್ಪುಪಟ್ಟಿಗೆ ಸೇರಿದೆ. ಐಡಿಎಫ್(ಇಸ್ರೇಲ್ ಭದ್ರತಾ ಪಡೆ) ವಿಶ್ವದಲ್ಲಿ ಅತ್ಯಂತ ನೈತಿಕ ಸೇನೆಯಾಗಿದ್ದು ವಿಶ್ವಸಂಸ್ಥೆಯ ಯಾವುದೇ ಭ್ರಮೆಯ ನಿರ್ಧಾರ ಈ ವಾಸ್ತವವನ್ನು ಬದಲಾಯಿಸದು' ಎಂದು ನೆತನ್ಯಾಹು ಹೇಳಿದ್ದಾರೆ.

## ಡೆನ್ಮಾರ್ಕ್ ಪ್ರಧಾನಿ ಮೇಲೆ ದಾಳಿ:ಮೋದಿ ಕಳವಳ

**ನವದೆಹಲಿ :** ಸಾರ್ವಜನಿಕವಾಗಿ ಡೆನ್ಮಾರ್ಕ್ ಪ್ರಧಾನಿ ಮ್ಯಾಟೆ ಫ್ರೆಡಿರಿಕ್ಸೆನ್ ಅವರ ಮೇಲೆ ವ್ಯಕ್ತಿಯೋರ್ವನು ದಾಳಿ ಮಾಡಿದ ಘಟನೆ ಕೋಪೇನ್ಹೇಗನ್ನಲ್ಲಿ ನಡೆದಿದೆ. ಏಕಾಏಕಿ ದಾಳಿ ನಡೆದ ಸಂದರ್ಭದಲ್ಲಿ ಮ್ಯಾಟೆ ಅವರು ಕೆಲಕಾಲ ಆಘಾತಕ್ಕೊಳಗಾಗಿದ್ದಾರೆ. ಘಟನೆಯಲ್ಲಿ ಅವರಿಗೆ ಯಾವುದೇ ಗಂಭೀರಗಾಯಗಳಾಗಿಲ್ಲ ಎಂದು ವರದಿಯಾಗಿದೆ. ಸದ್ಯ ದಾಳಿ ನಡೆಸಿದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಇನ್ನು ಹಲ್ಲೆ ನಡೆಸಿದ ಆರೋಪಿಯು ಏತಕ್ಕೆ ದಾಳಿ ಮಾಡಿದ ಆತನ ಹಿನ್ನೆಲೆ ಏನು ಎಂಬಿತ್ಯಾದಿ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಇನ್ನು ಘಟನೆ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಕಳವಳ ವ್ಯಕ್ತಪಡಿಸಿದ್ದು, ದಾಳಿಯನ್ನು ಖಂಡಿಸಿದ್ದಾರೆ. ಇನ್ನು ನನ್ನ ಸ್ನೇಹಿತರಾದ ಮ್ಯಾಟೆ ಅವರ ಉತ್ತಮ ಆರೋಗ್ಯಕ್ಕಾಗಿ ಹಾರೈಸುವುದಾಗಿ ಟ್ವೀಟ್ ಮಾಡಿದ್ದಾರೆ.



# ರಾಹುಲ್‌ಗಾಂಧಿಗೆ ಪ್ರತಿಪಕ್ಷ ನಾಯಕನ ಪಟ್ಟ ಸಾಧ್ಯತೆ

**ದೆಹಲಿ:** ಲೋಕಸಭೆ ಚುನಾವಣೆ ಫಲಿತಾಂಶ ಮುಗಿದು ಎನ್ಡಿಎ ಬಹುಮತದೊಂದಿಗೆ ಮೂರನೇ ಬಾರಿಗೆ ಅಧಿಕಾರ ಹಿಡಿಯಲು ಮುಂದಾಗಿದ್ದರೆ, ಸತತ ಮೂರನೇ ಬಾರಿಗೂ ಅಧಿಕಾರಕ್ಕೆ ಬರಲು ವಿಫಲವಾದ ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿ ಕೂಟ ಈ ಬಾರಿ ಪ್ರತಿ ಪಕ್ಷ ನಾಯಕರ ಸ್ಥಾನ ಪಡೆಯಲಿದೆ. ಹಿಂದಿನ ಎರಡು ಬಾರಿಯೂ ಸದಸ್ಯರ ಕೊರತೆ ಕಾರಣದಿಂದ ಕಾಂಗ್ರೆಸ್ ಪ್ರತಿಪಕ್ಷ ನಾಯಕನ ಸ್ಥಾನವನ್ನು ಅಲಂಕರಿಸಿರಲಿಲ್ಲ. ಈ ಬಾರಿ ಕಾಂಗ್ರೆಸ್ ಸ್ಥಿತಿ ಸುಧಾರಿಸಿದೆ. ಪಕ್ಷೇತರ ಸದಸ್ಯರೊಬ್ಬರ ಬೆಂಬಲದೊಂದಿಗೆ ಕಾಂಗ್ರೆಸ್ ನೂರು ಸದಸ್ಯ ಸ್ಥಾನ ಹೊಂದಿದೆ. ಇದರಿಂದ ಕಾಂಗ್ರೆಸ್ಗೆ ಪ್ರತಿಪಕ್ಷ ನಾಯಕನ ಸ್ಥಾನ ಸಿಗಲಿದೆ. ಸತತವಾಗಿ ಹೋರಾಟ ನಡೆಸಿ ಪಕ್ಷಕ್ಕೆ ಕೊಂಚ ಚೈತನ್ಯ ತುಂಬಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಲೋಕಸಭೆಯಲ್ಲಿ ಪ್ರತಿಪಕ್ಷ ನಾಯಕರಾಗಲಿದ್ದಾರೆ. ಈ ಕುರಿತು ಶನಿವಾರ ದೆಹಲಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆ( ಅಂಟಿರಡಿಜ ಅಘಾಅ ಒಜಜಣಟಿರ)ಯಲ್ಲಿ ಈ ವಿಚಾರವಾಗಿ ಚರ್ಚೆಯಾಗಿ ಕೆಲವರು ರಾಹುಲ್ ಗಾಂಧಿ ಹೆಸರನ್ನು ಪ್ರಸ್ತಾಪಿಸಿದರು. ರಾಹುಲ್ ಗಾಂಧಿ ಈ ಕುರಿತು ಶೀಘ್ರ ನಿರ್ಧಾರ ಕೈಗೊಳ್ಳೋಣ ಎನ್ನುವ ಪ್ರತಿಕ್ರಿಯೆ ನೀಡಿದರು. ಇದಲ್ಲದೇ ಅವರು ಎರಡು ಲೋಕಸಭಾ ಕ್ಷೇತ್ರಗಳಿಂದ ಆಯ್ಕೆಯಾಗಿದ್ದು ಒಂದು ಸ್ಥಾನಕ್ಕೆ ರಾಜೀನಾಮೆ ನೀಡಬೇಕಿದೆ. ಈ ಬಗ್ಗೆಯೂ ಒಂದೆರಡು ದಿನಗಳಲ್ಲಿ ನಿರ್ಧಾರ ಪ್ರಕಟಿಸುವುದಾಗಿ ಹೇಳಿದರು. ಆದರೆ ಸಭೆಯಲ್ಲಿ ರಾಹುಲ್ ಗಾಂಧಿ ಅವರು ನಿರಂತರವಾಗಿ ದೇಶಾದ್ಯಂತ ಪ್ರವಾಸ ಮಾಡಿ ಪಕ್ಷಕ್ಕೆ ಹೆಚ್ಚು ಸ್ಥಾನ ತಂದುಕೊಟ್ಟಿದ್ದರ ಬಗ್ಗೆ, ಕಾರ್ಯಕರ್ತರು,ಮುಖಂಡರು ಚೆನ್ನಾಗಿ ಕೆಲಸ ಮಾಡಿದ ಕುರಿತು ಚರ್ಚೆಗಳು ನಡೆದವು ಎಂದು ಮೂಲಗಳು ತಿಳಿಸಿವೆ.



**ನರೇಂದ್ರ ಮೋದಿ ಸತತ ಮೂರನೇ ಬಾರಿಗೆ ಪ್ರಧಾನಿಯಾಗಿ ಇಂದು ರಾತ್ರಿ, ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಸಂಜೆ 7-15ಕ್ಕೆ ರಾಷ್ಟ್ರಪತಿ ಭವನದಲ್ಲಿ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮ ನಡೆಯಲಿದ್ದು, ಬಾಂಗ್ಲಾ ದೇಶದ ಪ್ರಧಾನಿ ಶೇಕ್ ಹಸೀನಾ ಸೇರಿದಂತೆ ಹಲವು ದೇಶಗಳ ಗಣ್ಯರು ಈಗಾಗಲೇ ರಾಷ್ಟ್ರ ರಾಜಧಾನಿಗೆ ಆಗಮಿಸಿದ್ದಾರೆ.**

# ಇಂದು ಮೋದಿ ಪ್ರಮಾಣ ವಚನ

## ಮಹಾತ್ಮ ಗಾಂಧಿ, ವಾಜಪೇಯಿ ಸಮಾಧಿಗೆ ಗೌರವ ಸಲ್ಲಿಕೆ

**ನವದೆಹಲಿ:** ನರೇಂದ್ರ ಮೋದಿ ಸತತ ಮೂರನೇ ಬಾರಿಗೆ ಪ್ರಧಾನಿಯಾಗಿ ಇಂದು ರಾತ್ರಿ, ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಸಂಜೆ 7-15ಕ್ಕೆ ರಾಷ್ಟ್ರಪತಿ ಭವನದಲ್ಲಿ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮ ನಡೆಯಲಿದ್ದು, ಬಾಂಗ್ಲಾ ದೇಶದ ಪ್ರಧಾನಿ ಶೇಕ್ ಹಸೀನಾ ಸೇರಿದಂತೆ ಹಲವು ದೇಶಗಳ ಗಣ್ಯರು ಈಗಾಗಲೇ ರಾಷ್ಟ್ರ ರಾಜಧಾನಿಗೆ ಆಗಮಿಸಿದ್ದಾರೆ.

ಪ್ರಮಾಣ ವಚನ ಸ್ವೀಕಾರ ಹಿನ್ನೆಲೆಯಲ್ಲಿ ಮೋದಿ ಅವರು ಇಂದು ಬೆಳಗ್ಗೆ ಮಹಾತ್ಮ ಗಾಂಧಿ ಮತ್ತು ವಾಜಪೇಯಿ ಸಮಾಧಿ ಬಳಿಗೆ ತೆರಳಿ ಗೌರವ ವಂದನೆ ಸಲ್ಲಿಸಿದರು.

ಮೊದಲಿಗೆ ರಾಜಘಾಟ್ ಗೆ ತೆರಳಿ, ಮಹಾತ್ಮ ಗಾಂಧಿ ಅವರ ಸಮಾಧಿಗೆ ಪುಷ್ಪ ನಮನ ಸಲ್ಲಿಸಿ ಗೌರವ ವಂದನೆ ಸಲ್ಲಿಸಿದ ಮೋದಿ, ತದನಂತರ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಸಮಾಧಿಗೆ ತೆರಳಿ ಗೌರವ ವಂದನೆ ಸಲ್ಲಿಸಿದರು.

ರಾಷ್ಟ್ರೀಯ ಯುದ್ಧ ಸ್ಮಾರಕಕ್ಕೆ ಭೇಟಿ ನೀಡಿದ ಮೋದಿ, ಹುತಾತ್ಮ ಯೋಧರಿಗೆ ಗೌರವ ಸಲ್ಲಿಸಿದರು. ಮೂರು ಸೇನಾಪಡೆಗಳು ಮುಖ್ಯಸ್ಥರು ಮೋದಿ ಅವರಿಗೆ ಸಾಥ್ ನೀಡಿದರು.



## ಮೋದಿ ಪಟ್ಟಾಭಿಷೇಕಕ್ಕೆ ಕ್ಷಣಗಣನೆ, ಎಲ್ಲೆಡೆ ರಾರಾಜಿಸುತ್ತಿರುವ ಪೋಸ್ಟರ್‌ಗಳು

**ನವದೆಹಲಿ:** ದೇಶದ ಪ್ರಧಾನಿಯಾಗಿ ಮೋದಿ ಅವರ ಪಟ್ಟಾಭಿಷೇಕಕ್ಕೆ ಸಕಲ ತಯಾರಿ ನಡೆಯುತ್ತಿದ್ದು, ರಾಷ್ಟ್ರ ರಾಜಧಾನಿಯಾದ್ಯಂತ ಮೋದಿ ಭಾವಚಿತ್ರವುಳ್ಳ ಪೋಸ್ಟರ್ ಗಳು, ಬ್ಯಾನರ್ ಗಳು ರಾರಾಜಿಸುತ್ತಿವೆ. ಜವಹರ್ ಲಾಲ್ ನೆಹರೂ ನಂತರ ದೇಶದಲ್ಲಿ ಮೂರನೇ ಬಾರಿಗೆ ನರೇಂದ್ರ ಮೋದಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಪ್ರಮಾಣ ವಚನ ಹಿನ್ನೆಲೆಯಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. 1, 100 ಸಂಚಾರಿ ಪೊಲೀಸರನ್ನು ನಿಯೋಜಿಸಲಾಗಿದ್ದು, ಕೆಲವೊಂದು ಮಾರ್ಗದಲ್ಲಿ ಸಾರ್ವಜನಿಕರಿಗೆ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ.



ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮಕ್ಕೆ ಶ್ರೀಲಂಕಾ ಪ್ರಧಾನಿ ರಾನಿಲ್ ವಿಕ್ರಮ್ ಸಿಂಘೆ, ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಝು, ಬಾಂಗ್ಲಾದೇಶ ಪ್ರಧಾನಿ ಶೇಕ್ ಹಸೀನಾ, ಮಾರಿಷಸ್ ಪ್ರಧಾನಿ ಪ್ರವೀದ್ ಕುಮಾರ್ ಜಗುನಾಥ್, ನೇಪಾಳ ಪ್ರಧಾನಿ ಪುಷ್ಪ ಕಮಾಲ್ ದಹಾಲ್ ಪ್ರಚಂಡ, ಭೂತಾನ್ ಪ್ರಧಾನಿ ಭಾಗವಹಿಸುತ್ತಿರುವುದಾಗಿ ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

ದೇಶ, ವಿದೇಶದ ಗಣ್ಯರಲ್ಲದೇ, ಸಂಸತ್ ನಿರ್ಮಾಣ ಮಾಡಿದ 250 ಕ್ಕೂ ಹೆಚ್ಚು ಕಾರ್ಮಿಕರು, ಮೋದಿ ಅವರ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಮಹತ್ವದ ಕಾರ್ಯಕ್ರಮದಲ್ಲಿ ನೆರೆಹೊರೆಯವರಿಗೆ ಮೊದಲ ಆದ್ಯತೆ ಮತ್ತು ಸಾಗರ್ ದೂರದೃಷ್ಟಿಗೆ ಪ್ರಾಮುಖ್ಯತೆ ನೀಡಲಾಗಿದ್ದು, ವಿದೇಶಿ ಗಣ್ಯರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಷ್ಟ್ರಪತಿ ಭವನದಲ್ಲಿ ಔತಟ ಕೂಟ ಆಯೋಜಿಸಿರುವುದಾಗಿ ವಿದೇಶಾಂಗ ಇಲಾಖೆ ಮಾಹಿತಿ ನೀಡಿದೆ.

ಇತ್ತೀಚಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ 240 ಸ್ಥಾನಗಳಲ್ಲಿ ಗೆಲುವು ಸಾಧಿಸಿದ್ದರೆ, ಇಂಡಿಯಾ ಬಣ 292 ಸ್ಥಾನಗಳಲ್ಲಿ ಗೆಲುವು ಸಾಧಿಸಿತ್ತು.

## ನರೇಂದ್ರ ಮೋದಿಗೆ ಎಲಾನ್ ಮಸ್ಕ್ ಅಭಿನಂದನೆ!

ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿಯವರಿಗೆ ದೇಶ-ವಿದೇಶಗಳ ಗಣ್ಯರು ಅಭಿನಂದನೆ ಸಲ್ಲಿಸುತ್ತಿದ್ದಾರೆ. ಜೊತೆಗೆ ನಾಳೆ ನಡೆಯಲಿರುವ ಪ್ರಮಾಣ ವಚನ ಕಾರ್ಯಕ್ರಮದಲ್ಲೂ ಭಾಗಿಯಾಗಲಿದ್ದಾರೆ. ಈ ಮಧ್ಯೆ ಟೆಸ್ಲಾ ಮತ್ತು ಎಕ್ಸ್ ಮಾಲೀಕ ಎಲಾನ್ ಮಸ್ಕ್ ಕೂಡ ನರೇಂದ್ರ ಮೋದಿಯ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಮಸ್ಕ್, ವಿಶ್ವದ ಅತಿದೊಡ್ಡ ಪ್ರಜಾಸತ್ತಾತ್ಮಕ ಚುನಾವಣೆಯಲ್ಲಿ ಗೆಲುವು ಸಾಧಿಸಿದ ನರೇಂದ್ರ ಮೋದಿಯವರಿಗೆ ಅಭಿನಂದನೆಗಳು. ಮುಂದಿನ ದಿನಗಳಲ್ಲಿ ಭಾರತದಲ್ಲಿ ನನ್ನ ಕಂಪನಿಗಳು ಅತ್ಯಾಕರ್ಷಕ ಕೆಲಸ ಮಾಡಲಿರುವ ಆಶಾಭಾವನೆ ನನ್ನಲ್ಲಿದೆ ಎಂದು ಹೇಳಿದ್ದಾರೆ. ಈ ವರ್ಷದ ಏಪ್ರಿಲ್ 21 ಹಾಗೂ 22ರಂದು ಮಸ್ಕ್ ಭಾರತಕ್ಕೆ ಭೇಟಿ ನೀಡಲು ಸಿದ್ಧರಾಗಿದ್ದರು. ಆದರೆ ಅವರು ಕೊನೆಯ ಕ್ಷಣದಲ್ಲಿ ಭಾರತ ಪ್ರವಾಸವನ್ನು ರದ್ದುಗೊಳಿಸಿದರು. ಈ ಬಗ್ಗೆ ಅವರು ಪ್ರತಿಕ್ರಿಯಿಸಿದ್ದು, ದುರದೃಷ್ಟವಶಾತ್, ಟೆಸ್ಲಾ ಕಟ್ಟುಪಾಡುಗಳಿಂದಾಗಿ ಭಾರತ ಭೇಟಿ ವಿಳಂಬವಾಗುತ್ತದೆ. ಆದರೆ ಈ ವರ್ಷಾಂತ್ಯದಲ್ಲಿ ಭೇಟಿ ನೀಡಲು ನಾನು ಎದುರು ನೋಡುತ್ತಿದ್ದೇನೆ ಎಂದು ಎಂದಿದ್ದರು.



## ಡೇಟಿಂಗ್ ಆ್ಯಪ್ ಬಿಡುಗಡೆ ಮಾಡಿದ ಜಪಾನ್

**ಜಪಾನ್ :** ಸಿಂಗಲ್ಸ್ಗಳಿಗಾಗಿ ಡೇಟಿಂಗ್ ಆ್ಯಪ್ ಅನ್ನು ಜಪಾನ್ ಸರ್ಕಾರ ಇದೀಗ ಬಿಡುಗಡೆ ಮಾಡಿದೆ. ಇತ್ತೀಚಿನ ಸಮೀಕ್ಷೆಯೊಂದರ ಪ್ರಕಾರ, 2060ರ ಹೊತ್ತಿಗೆ, ಜಪಾನ್ನ ಪ್ರಸ್ತುತ 125 ಮಿಲಿಯನ್ ಜನಸಂಖ್ಯೆಯು ಕೇವಲ 86.7 ಮಿಲಿಯನ್ಗೆ ಕುಗ್ಗಲಿದೆ ಎಂದು ಅಂದಾಜಿಸಲಾಗಿದೆ. 50 ವರ್ಷ ವಯಸ್ಸಿನ ಸುಮಾರು 32 ಪ್ರತಿಶತದಷ್ಟು ಪುರುಷರು ಮತ್ತು 24 ಪ್ರತಿಶತ ಮಹಿಳೆಯರು ಅವಿವಾಹಿತರಾಗಿದ್ದಾರೆ ಎಂದು ವರದಿಯಾಗಿದೆ. ಈ ಹಿನ್ನೆಲೆಯನ್ನು ಇದೀಗ ಡೇಟಿಂಗ್ ಆಯಪ್ ಲಾಂಚ್ ಮಾಡಿದ್ದು, ಈ ಮೂಲಕ ಯುವಜನತೆಯನ್ನು ಮದುವೆಯತ್ತ ಪ್ರೇರೇಪಿಸುತ್ತಿದೆ. ಇಳಿಸುತ್ತಿರುವ ಜನನ ಪ್ರಮಾಣವನ್ನು ಏರಿಕೆಯತ್ತ ಕೊಂಡೊಯ್ಯಲು ಟೋಕಿಯೋ ಫುಟಾರಿ ಸ್ಟೋರಿ ಹೆಸರಿನ ಡೇಟಿಂಗ್ ಅಪ್ಲಿಕೇಶನ್ ಜಾರಿಗೆ ತಂದಿದೆ ಎಂದು ಮುಖ್ಯ ಕ್ಯಾಬಿನೆಟ್ ಕಾರ್ಯದರ್ಶಿ ಯೋಶಿಮಾಸಾ ಹಯಾಶಿ ಅವರು ಮಾಧ್ಯಮಗಳಿಗೆ ಹೇಳಿದ್ದಾರೆ. ಇದಲ್ಲದೆ ಮದುವೆಯಾಗಲು ಮತ್ತು ಮಗು ಹೊಂದಲು ಬಯಸುವವರಿಗೆ ಸರ್ಕಾರದಿಂದ ಹಣಕಾಸಿನ ನೆರವು ನೀಡಲಾಗುತ್ತದೆ ಎಂದರು.



## ಉಕ್ರೇನ್ ವಿರುದ್ಧದ ಯುದ್ಧದಲ್ಲಿ ಪರಮಾಣು ಶಸ್ತ್ರಾಸ್ತ್ರಗಳ ಬಳಕೆ : ಪುಟಿನ್

**ಸೇಂಟ್ ಪೀಟರ್ಸ್ಬರ್ಗ್ (ರಷ್ಯಾ):** ರಷ್ಯಾ-ಉಕ್ರೇನ್ ಯುದ್ಧದಲ್ಲಿ ಪರಮಾಣು ಶಸ್ತ್ರಾಸ್ತ್ರಗಳ ಬಳಕೆಯ ಬಗ್ಗೆ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಶುಕ್ರವಾರ ದೊಡ್ಡ ಹೇಳಿಕೆ ನೀಡಿದ್ದಾರೆ.



ಎರಡನೇ ಮಹಾಯುದ್ಧದ ನಂತರ ಯುರೋಪಿನ ಭೀಕರ ಸಂಘರ್ಷವು ಪರಮಾಣು ಯುದ್ಧಕ್ಕೆ ಉಲ್ಬಣಗೊಳ್ಳುವುದಿಲ್ಲ ಎಂಬ ಕ್ರೆಮ್ಲಿನ್ ನಿಂದ ಇದು ಬಲವಾದ ಸಂಕೇತವಾಗಿದೆ.

ಪುಟಿನ್ ಅವರ ಈ ಘೋಷಣೆಯೊಂದಿಗೆ, ಪಾಶ್ಚಿಮಾತ್ಯ ದೇಶಗಳು ಸೇರಿದಂತೆ ಇಡೀ ಜಗತ್ತು ನೆಮ್ಮದಿಯ ನಿಟ್ಟುಸಿರು ಬಿಟ್ಟಿದೆ.

ಫೆಬ್ರವರಿ 2022 ರಲ್ಲಿ ಉಕ್ರೇನ್ಗೆ ಸೈನ್ಯವನ್ನು ಕಳುಹಿಸಲು ಪುಟಿನ್ ಆದೇಶಿಸಿದಾಗ, ರಷ್ಯಾ ತನ್ನ ರಕ್ಷಣೆಗಾಗಿ ಅಗತ್ಯವಿದ್ದರೆ ಪರಮಾಣು ಶಸ್ತ್ರಾಸ್ತ್ರಗಳನ್ನು ಬಳಸುತ್ತದೆ ಎಂದು ಅವರು ಹಲವಾರು ಸಂದರ್ಭಗಳಲ್ಲಿ ಹೇಳಿದ್ದರು. ಆದಾಗ್ಯೂ, ಪುಟಿನ್ ಪರಮಾಣು ದಾಳಿಯ ಕಲ್ಪನೆಯನ್ನು ಪಶ್ಚಿಮದ ಟೀಕೆಗಳಿಗೆ ಕಾರಣವೆಂದು ಹೇಳಿದರು. ಆದರೆ ಉಕ್ರೇನ್ ನೊಂದಿಗಿನ ಯುದ್ಧವನ್ನು ಗೆಲ್ಲಲು ಪರಮಾಣು ದಾಳಿಯ ಅಗತ್ಯವಿಲ್ಲ ಎಂದು ಅವರು ಈಗ ಸ್ಪಷ್ಟಪಡಿಸಿದ್ದಾರೆ.

ಸೇಂಟ್ ಪೀಟರ್ಸ್ಬರ್ಗ್ ಇಂಟರ್ನ್ಯಾಷನಲ್ ಎಕನಾಮಿಕ್ ಫೋರಂನ ಪೂರ್ಣ ಅಧಿವೇಶನದಲ್ಲಿ, ರಷ್ಯಾದ ಪ್ರಭಾವಿ ವಿಶ್ಲೇಷಕ ಮಿತಗಾಮಿ ಸೆರ್ಗೆಯ್ ಕರಗನೊವ್ ಪ್ರಶ್ನೆಯನ್ನು ಕೇಳಿದರು: ರಷ್ಯಾ ಉಕ್ರೇನ್ ಮೇಲೆ ಪರಮಾಣು ಬಂದೂಕುಗಳನ್ನು ಇಡಬೇಕೇ? ಅಂತಹ ಆಯುಧವನ್ನು ಬಳಸುವ ಅಗತ್ಯವಿಲ್ಲ ಎಂದು ಪುಟಿನ್ ಹೇಳಿದರು.

## ಹೌದಿಗಳ 8 ಡ್ರೋನ್ ಹೊಡೆದುರುಳಿಸಿದ ಅಮೆರಿಕ

**ವಾಷಿಂಗ್ಟನ್ :** ಕೆಂಪುಸಮುದ್ರದಲ್ಲಿಸಾಗುತ್ತಿದ್ದಹಡಗನ್ನು ಗುರಿಯಾಗಿಸಿ ಯೆಮನ್ನ ಹೌದಿಗಳು ಪ್ರಯೋಗಿಸಿದ 8 ಡ್ರೋನ್ಗಳನ್ನು ಹೊಡೆದುರುಳಿಸಿರುವುದಾಗಿ ಅಮೆರಿಕದ ರಕ್ಷಣಾ ಪಡೆ ಶುಕ್ರವಾರ ಹೇಳಿದೆ.

ಯೆಮನ್ನಲ್ಲಿ ಹೌದಿಗಳ ನಿಯಂತ್ರಣದಲ್ಲಿರುವ ಪ್ರದೇಶದಿಂದ ಡ್ರೋನ್ಗಳನ್ನು ಹಾಗೂ ಬ್ಯಾಲಿಸ್ಟಿಕ್ ಕ್ಷಿಪಣಿಯನ್ನು ಪ್ರಯೋಗಿಸಲಾಗಿದೆ.

ಇದನ್ನು ಕೆಂಪು ಸಮುದ್ರದಲ್ಲಿ ಭದ್ರತೆಗೆ ನಿಯೋಜಿಸಲಾಗಿರುವ ಅಮೆರಿಕದ ಸಮರನೌಕೆ ಯಶಸ್ವಿಯಾಗಿ ಹೊಡೆದುರುಳಿಸಿದೆ. ಯಾವುದೇ ಸಾವು-ನೋವು ಅಥವಾ ನಾಶ-ನಷ್ಟದ ವರದಿಯಾಗಿಲ್ಲ ಎಂದು ಅಮೆರಿಕ ಮಿಲಿಟರಿಯ ಸೆಂಟ್ರಲ್ ಕಮಾಂಡ್ ಹೇಳಿದೆ.

ಈ ಮಧ್ಯೆ, ಗುರುವಾರ ರಾತ್ರಿ ಯೆಮನ್ನ ಬಂದರು ನಗರ ಮೋಖಾದ ಬಳಿ ಕೆಂಪು ಸಮುದ್ರದಲ್ಲಿ ಸಾಗುತ್ತಿದ್ದ ಸರಕು ನೌಕೆಯ ಬಳಿ ಭಾರೀ ಸ್ಫೋಟ ಸಂಭವಿಸಿರುವುದಾಗಿ ವರದಿಯಾಗಿದೆ. ಯುರೋಪ್ನಿಂದ ಯುಎಇ ಕಡೆಗೆ ಸಾಗುತ್ತಿದ್ದ ಸರಕು ನೌಕೆಯನ್ನು ಗುರಿಯಾಗಿಸಿ ದಾಳಿ ನಡೆದಿರುವ ಸಾಧ್ಯತೆಯಿದೆ ಎಂದು ಬ್ರಿಟನ್ನ ಮೂಲಗಳು ಮಾಹಿತಿ ನೀಡಿವೆ.

## ಕೇಜ್ರಿವಾಲ್ ಪ್ರಕರಣ ಉಲ್ಲೇಖಿಸಿದ ಪಾಕ್ ಮಾಜಿ ಪಿಎಂ ಇಮ್ರಾನ್ ಖಾನ್

**ಇಸ್ಲಾಮಾಬಾದ್:** ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರು ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರಿಗೆ ಭಾರತದ ಸುಪ್ರೀಂ ಕೋರ್ಟ್ ಜಾಮೀನು ನೀಡಿದ್ದ ವಿಚಾರವನ್ನು ಪಾಕ್ ಸುಪ್ರೀಂ ಕೋರ್ಟ್ನಲ್ಲಿ ಪ್ರಸ್ತಾಪಿಸಿದ್ದಾರೆ.

ಸುಪ್ರೀಂ ಕೋರ್ಟ್ನಲ್ಲಿ ತಮ್ಮ ವಿರುದ್ಧದ ಪ್ರಕರಣಗಳ ವಿಚಾರಣೆಯ ವೇಳೆ ಅವರು ಕೇಜ್ರಿವಾಲ್ ಪ್ರಕರಣವನ್ನು ನಿದರ್ಶನವನ್ನಾಗಿ ನೀಡಿದರು.

ಪಾಕ್ನ ಜೈಲಿನಲ್ಲಿ ತಮ್ಮ ಮೇಲೆ ದಬ್ಬಾಳಿಕೆ ನಡೆಸಲಾಗಿದೆ ಎಂದು ದೂರಿದರು. 'ಸಾರ್ವತ್ರಿಕ ಚುನಾವಣೆಯಲ್ಲಿ ಅವರ ಪಕ್ಷದ ಪರ ಪ್ರಚಾರ ಮಾಡುವುದಕ್ಕಾಗಿ ಅರವಿಂದ ಕೇಜ್ರಿವಾಲ್ ಅವರಿಗೆ ಅಲ್ಲಿನ ಸುಪ್ರೀಂ ಕೋರ್ಟ್ ಜಾಮೀನು ನೀಡಿತು. ಆದರೆ, ಚುನಾವಣೆಯಿಂದ ದೂರ ಇಡುವುದಕ್ಕಾಗಿಯೇ ನನ್ನನ್ನು ಕೇವಲ ಐದು ದಿನದಲ್ಲಿಯೇ ಶಿಕ್ಷೆಗೊಳಪಡಿಸಲಾಗಿತ್ತು' ಎಂದು ಹೇಳಿದರು.



### ಜೈಲು ಕೊಠಡಿ ಫೋಟೋ ರಿಲೀಸ್

**ಜೈಲಿನಲ್ಲಿರುವ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ಜೀವನ ಪರಿಸ್ಥಿತಿಗಳ ವಿವರಗಳನ್ನು ಪಾಕಿಸ್ತಾನ ಸರ್ಕಾರ ಗುರುವಾರ ಸುಪ್ರೀಂ ಕೋರ್ಟ್ಗೆ ಸಲ್ಲಿಸಿದೆ.ಸರ್ಕಾರ ಇಮ್ರಾನ್ ಖಾನ್ ಅವರ ಜೈಲು ಕೊಠಡಿಯ ಫೋಟೋ ರಿಲೀಸ್ ಮಾಡಿದೆ. ಅವರ ಕೊಠಡಿಯಲ್ಲಿ ನೆಲ್ಸನ್ ಮಂಡೇಲಾ ಅವರ ಆತ್ಮಚರಿತ್ರೆ ಲಾಂಗ್ ವಾಕ್ ಟು ಫ್ರೀಡಮ್ ಸೇರಿದಂತೆ ಹಲವು ಪುಸ್ತಕಗಳು ಇವೆ. ಜೈಲಿನಲ್ಲಿ ಅವರು ಬಯಸಿದ್ದನ್ನು ಓದುವ ಖಾನ್ ಅವರ ಸ್ವಾತಂತ್ರ್ಯವನ್ನು ಎತ್ತಿ ತೋರಿಸಲು ಉದ್ದೇಶಿಸಲಾಗಿದೆ.**

## ಮೋದಿ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಇಂಡಿಯಾ ಒಕ್ಕೂಟಕ್ಕಿಲ್ಲ ಆಹ್ವಾನ

**ನವದೆಹಲಿ:** ಭಾನುವಾರ ನಡೆಯಲಿರುವ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಮಾಣ ವಚನ ಸಮಾರಂಭದಲ್ಲಿ ಪ್ರತಿಪಕ್ಷಗಳ ಮೈತ್ರಿಕೂಟ ಇಂಡಿಯಾ ಬಣಕ್ಕೆ ಆಹ್ವಾನ ನೀಡಿಲ್ಲ. ಹೀಗಾಗಿ ಸಮಾರಂಭದಲ್ಲಿ ನಾವು ಭಾಗವಹಿಸುವುದಿಲ್ಲ ಎಂದು ಹಿರಿಯ ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಅವರು ತಿಳಿಸಿದ್ದಾರೆ.

ಜೂನ್ 9 ರಂದು ನಡೆಯುವ ಕಾರ್ಯಕ್ರಮಕ್ಕೆ ಹಾಜರಾಗಲು ಇಂಡಿಯಾ ಬ್ಲಾಕ್‌ಗೆ ಇನ್ನೂ ಆಹ್ವಾನ ಬಂದಿಲ್ಲ ಎಂದು ಹಿರಿಯ ಕಾಂಗ್ರೆಸ್ ನಾಯಕ ಹೇಳಿದ್ದಾರೆ. ನಮಗೆ ಯಾವುದೇ ಆಹ್ವಾನ ಬಂದಿಲ್ಲ. ಹಾಗಾಗಿ, ಇಂಡಿಯಾ ಬ್ಲಾಕ್ ಈವೆಂಟ್‌ಗೆ ಹಾಜರಾಗುವುದಿಲ್ಲ ಎಂದು ಅವರು ಜೈರಾಮ್ ರಮೇಶ್ ಅವರು ತಿಳಿಸಿದ್ದಾರೆ. ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಅಂತರಾಷ್ಟ್ರೀಯ ನಾಯಕರಿಗೆ ಮಾತ್ರ ಆಹ್ವಾನ ನೀಡಲಾಗಿದೆ. ನಮ್ಮ ನಾಯಕರಿಗೆ ಇನ್ನೂ ಆಹ್ವಾನ ಬಂದಿಲ್ಲ. ನಮ್ಮ ಇಂಡಿಯಾ ಮೈತ್ರಿಕೂಟದ ನಾಯಕರಿಗೆ ಆಹ್ವಾನ ಬಂದಾಗ, ನಾವು ಅದರ ಬಗ್ಗೆ ಯೋಚಿಸುತ್ತೇವೆ ಎಂದು ಜೈರಾಮ್ ರಮೇಶ್ ಅವರು ಹೇಳಿದ್ದಾರೆ. ಸೋನಿಯಾ ಗಾಂಧಿ ಅವರು ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆಯಾಗಿ ಮರು ಆಯ್ಕೆಯಾದ ನಂತರ ಸರ್ಕಾರ ರಚಿಸುವ ಎನ್‌ಡಿಎ ಹಕ್ಕನ್ನು ಪ್ರಶ್ನಿಸಿದ್ದರು. ಪಕ್ಷ ಮತ್ತು ಅದರ ಮಿತ್ರಪಕ್ಷಗಳೆರಡನ್ನೂ ಹೊರಗಿಟ್ಟು ಕೇವಲ ತಮ್ಮ ಹೆಸರಿನಲ್ಲಿ ಜನಾದೇಶವನ್ನು ಬಯಸಿದ್ದ ಮೋದಿ ರಾಜಕೀಯ ಮತ್ತು ನೈತಿಕ ಸೋಲನ್ನು ಅನುಭವಿಸಿದ್ದಾರೆ. ವಾಸ್ತವದಲ್ಲಿ ಅವರು ಜನಾದೇಶವನ್ನು ಕಳೆದುಕೊಂಡಿದ್ದಾರೆ ಮತ್ತು ಆ ಮೂಲಕ ನಾಯಕತ್ವದ ಹಕ್ಕನ್ನೂ ಕಳೆದುಕೊಂಡಿದ್ದಾರೆ. ಆದರೂ ಮತ್ತೆ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಲು ಉದ್ದೇಶಿಸಿದ್ದಾರೆ'' ಎಂದು ಅವರು ಹೇಳಿದರು.



## ಬಾಹ್ಯಾಕಾಶ ನಿಲ್ದಾಣ ಪ್ರವೇಶಿಸಿದ ಸುನೀತಾ ವಿಲಿಯಮ್ಸ್

**ಹ್ಯೂಸ್ಟನ್:** ಖಾಸಗಿ ಬಾಹ್ಯಾಕಾಶ ನೌಕೆ ಬೋಯಿಂಗ್ ಸ್ಟಾರ್ಲೈನರ್ನಲ್ಲಿ ಗಗನಕ್ಕೇರಿದ ಭಾರತೀಯ ಮೂಲದ ಗಗನಯಾತ್ರಿ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್, ಯಶಸ್ವಿಯಾಗಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ಪ್ರವೇಶಿಸಿದ್ದಾರೆ. ಹಲವು ಅಡೆತಡೆ ದಾಟಿ, ಖಾಸಗಿ ನೌಕೆಯಲ್ಲಿ ಐಎಸ್ಎಸ್ ಪ್ರವೇಶಿಸಿದ ಮೊದಲ ಜೋಡಿ ಇದು.

ಈ ಹಿಂದೆ 2 ಬಾರಿ ಯಶಸ್ವಿಯಾಗಿ ಐಎಸ್ಎಸ್ ಪ್ರವೇಶಿಸಿದ್ದ ಸುನೀತಾ, ಈಗ ಮತ್ತೆ ಆ ಸಾಧನೆ ಪುನರಾವರ್ತಿಸಿದ ಸಂತೋಷದಲ್ಲಿ ನೃತ್ಯ ಮಾಡಿದ್ದಾರೆ. ನಿಲ್ದಾಣದಲ್ಲಿದ್ದ ಇತರ 7 ಯಾತ್ರಿಗಳನ್ನು ತಬ್ಬಿಕೊಂಡು ಸಂತೋಷ ವ್ಯಕ್ತಪಡಿಸಿದ್ದಾರೆ. ನೃತ್ಯ ಮಾಡುತ್ತಾ ಪ್ರವೇಶಿಸಿದ ವೀಡಿಯೋ ಜಾಲತಾಣಗಳಲ್ಲಿ ವೈರಲ್ ಆಗಿದೆ.



## ಇಂದಿರಾಗಾಂಧಿ ಹತ್ಯೆಯ ಟ್ಯಾಬ್ಲೊ ಪ್ರದರ್ಶಿಸಿದ ಖಾಲಿಸ್ತಾನ್ ಗುಂಪು

**ಒಟ್ಟಾವ :** ಗುರುವಾರ ಕೆನಡಾದ ವ್ಯಾಂಕೋವರ್ನಲ್ಲಿ ಭಾರತದ ಕಾನ್ಸುಲೇಟ್ ಕಚೇರಿಯ ಹೊರಗಡೆ ಖಾಲಿಸ್ತಾನ್ ಪ್ರತ್ಯೇಕತಾವಾದಿಗಳ ಗುಂಪು ಭಾರತದ ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ ಹತ್ಯೆಯನ್ನು ಬಿಂಬಿಸುವ ಟ್ಯಾಬ್ಲೊ ಪ್ರದರ್ಶಿಸಿರುವುದಾಗಿ ವರದಿಯಾಗಿದೆ. ಪಂಜಾಬ್ನಲ್ಲಿರುವ ಸ್ವರ್ಣಮಂದಿರದಲ್ಲಿ ಅವಿತಿದ್ದ ಖಾಲಿಸ್ತಾನ್ ಪ್ರತ್ಯೇಕತಾವಾದಿಗಳ ವಿರುದ್ಧ ನಡೆದಿದ್ದ ಆಪರೇಷನ್ ಬ್ಲೂಸ್ಟಾರ್ ಕಾರ್ಯಾಚರಣೆಯ 40ನೇ ವಾರ್ಷಿಕ ದಿನದಂದು ವ್ಯಾಂಕೋವರ್ನಲ್ಲಿ ಖಾಲಿಸ್ತಾನ್ ಪ್ರತ್ಯೇಕತಾವಾದಿಗಳ ಗುಂಪು 'ಸಿಖ್ಸ್ ಫಾರ್ ಜಸ್ಟಿಸ್(ಎಸ್ಎಫ್ಜೆ) ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಇಂದಿರಾಗಾಂಧಿಯವರನ್ನು ಅವರ ಭದ್ರತಾ ಪಡೆಯ ಸಿಬ್ಬಂದಿ ಹತ್ಯೆ ಮಾಡುವುದನ್ನು ತೋರಿಸುವ ಟ್ಯಾಬ್ಲೊ ಪ್ರದರ್ಶಿಸಲಾಗಿದೆ. ಇದೇ ರೀತಿಯ ಪ್ರತಿಭಟನೆಯನ್ನು ಟೊರಂಟೊದಲ್ಲಿನ ಭಾರತೀಯ ದೂತಾವಾಸದ ಎದುರೂ ನಡೆಸಲಾಗಿದ್ದು ಭಾರತದ ಧ್ವಜಕ್ಕೆ ಬೆಂಕಿ ಹಚ್ಚಲಾಗಿದೆ ಮತ್ತು ಖಾಲಿಸ್ತಾನ್ ಮುಖಂಡ ಹರ್ದೀಪ್ ಸಿಂಗ್ ನಿಜ್ಜಾರ್ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿ ಎಸ್ಎಫ್ಜೆ ಮುಖಂಡ ಗುರುಪತ್ವಂತ್ ಸಿಂಗ್ ಭಾರತದ ಪ್ರಧಾನಿ ನರೇಂದ್ರ ಮೋದಿಯನ್ನು ಉದ್ದೇಶಿಸಿ ಎಚ್ಚರಿಕೆಯನ್ನು ನೀಡಿದ್ದಾನೆ ಎಂದು ವರದಿಯಾಗಿದೆ.

## ಇಂಜಿನಿಯರಿಂಗ್ ವಿದ್ಯಾರ್ಥಿಗಳು ನದಿಯಲ್ಲಿ ಮುಳುಗಿ ಸಾವು

**ಸುಂದರ್‌ಗಢ್:** ಒಡಿಶಾದ ಸುಂದರ್‌ಗಢ್ ಜಿಲ್ಲೆಯ ಬ್ರಹ್ಮಣಿ ನದಿಯಲ್ಲಿ ಶನಿವಾರ ಸ್ನಾನ ಮಾಡುತ್ತಿದ್ದ ವೇಳೆ ಇಬ್ಬರು ಎಂಜಿನಿಯರಿಂಗ್ ವಿದ್ಯಾರ್ಥಿಗಳು ಮುಳುಗಿ ಸಾವನ್ನಪ್ಪಿದ್ದಾರೆ ಮತ್ತು ನಾಲ್ವರು ವಿದ್ಯಾರ್ಥಿಗಳನ್ನು ಸ್ಥಳೀಯರು ರಕ್ಷಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಇಬ್ಬರು ಮಹಿಳೆಯರು ಸೇರಿದಂತೆ ಆರು ವಿದ್ಯಾರ್ಥಿಗಳು ಬೇಸಿಗೆ ಇಂಟರ್ನ್‌ಶಿಪ್ ಗಾಗಿ ರೂರ್ಕೆಲಾದ ಎನ್‌ಐಟಿಗೆ ಬಂದಿದ್ದರು ಮತ್ತು ನದಿಯಲ್ಲಿ ಸ್ನಾನ ಮಾಡಲು ವೇದವ್ಯಾಸ್ ಘಾಟ್‌ಗೆ ತೆರಳಿದ್ದರು ಎಂದು ಹಿರಿಯ ಅಧಿಕಾರಿಯೊಬ್ಬರು ಹೇಳಿದ್ದಾರೆ. ಮೃತರನ್ನು ಸಂಬಲ್‌ಪುರ ಮಾಹಿತಿ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದ ರಜತ್ ಸಾಹು ಹಾಗೂ ಸಮೀರನ್ ಸುಕುಮಾರ್ ನಾಯಕ್ ಎಂದು ಗುರುತಿಸಲಾಗಿದೆ. ಸಾಹು ಬಾಲಸೋರ್‌ನಿಂದ ಬಂದಿದ್ದರೆ, ನಾಯಕ್ ಪಾಟಿಯಾದ ರಘುನಾಥಪುರದಿಂದ ಬಂದಿದ್ದರು ಮತ್ತು ರಜತ್ ಸಾಹು ಮೇ ತಿಂಗಳಿನಿಂದ ಇಲ್ಲಿಯೇ ಇದ್ದರು ಮತ್ತು ಜುಲೈ ವರೆಗೆ ಎಲೆಕ್ಟ್ರಾನಿಕ್ಸ್ ಮತ್ತು ಟೆಲಿಕಮ್ಯುನಿಕೇಶನ್‌ನಲ್ಲಿ ಇಂಟರ್ನ್‌ಶಿಪ್ ಮಾಡಬೇಕಿತ್ತು. ಸಮೀರನ್ ಅವರು ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್‌ನಲ್ಲಿ ಒಂದು ತಿಂಗಳ ಇಂಟರ್ನ್‌ಶಿಪ್ ಗಾಗಿ ಬಂದಿದ್ದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಉತ್ತರಕಾಂಡ'ದ ವೀರವ್ವನಾಗಿ ನಟಿ ಭಾವನಾ ಮೆನನ್



ಬಹು ನಿರೀಕ್ಷಿತ ಚಿತ್ರ, 'ಉತ್ತರಕಾಂಡ' ಇದೀಗ ಮತ್ತೊಮ್ಮೆ ಸುದ್ದಿ ಮಾಡಿದೆ. ಬಹುಭಾಷಾ ತಾರೆ ಭಾವನಾ ಮೆನನ್ ಉತ್ತರಕಾಂಡ ಚಿತ್ರದಲ್ಲಿ ವೀರವ್ವ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಭಾವನಾ ಅವರ ಹುಟ್ಟುಹಬ್ಬದ ಅಂಗವಾಗಿ ಚಿತ್ರತಂಡ ಇಂದು ಘೋಷಿಸಿ ಪೋಸ್ಟರ್ ಬಿಡುಗಡೆ ಮಾಡಿದೆ. ಭಾವನಾ ಅವರನ್ನು ಕರುನಾಡ ಚಕ್ರವರ್ತಿ ಡಾ. ಶಿವರಾಜ್ ಕುಮಾರ್ ಅವರೊಡನೆ ತೆರೆಯ ಮೇಲೆ ಕಾಣಲು ಅಭಿಮಾನಿಗಳು ಉತ್ಸುಕರಾಗಿದ್ದಾರೆ.

ರೋಹಿತ್ ಪದಕಿ ನಿರ್ದೇಶನದ ಉತ್ತರಕಾಂಡ ಒಂದು ಆಕ್ಷನ್ ಡ್ರಾಮಾ ಚಿತ್ರವಾಗಿದ್ದು, ಚಿತ್ರದಲ್ಲಿ ಕರುನಾಡ ಚಕ್ರವರ್ತಿ ಡಾ. ಶಿವರಾಜ್ ಕುಮಾರ್, ನಟರಾಕ್ಷಸ ಡಾಲಿ ಧನಂಜಯ, ಐಶ್ವರ್ಯ ರಾಜೇಶ್, ದಿಗಂತ್ ಮಂಚಾಲೆ, ರಂಗಾಯಣ ರಘು, ಚೈತ್ರ ಆಚಾರ್, ವಿಜಯ್ ಬಾಬು ಮುಂತಾದವರು ನಟಿಸಿದ್ದಾರೆ.

ಚಿತ್ರಕ್ಕೆ ಅಮಿತ್ ತ್ರಿವೇದಿ ಸಂಗೀತ ಸಂಯೋಜನೆ ಮಾಡಲಿದ್ದು, ಅದ್ವೈತ ಗುರುಮೂರ್ತಿ ಮುಖ್ಯ ಛಾಯಾಗ್ರಾಹಕರಾಗಿರುತ್ತಾರೆ. ವಿಶ್ವಾಸ್ ಕಶ್ಯಪ್ ಪ್ರೊಡಕ್ಷನ್ ವಿನ್ಯಾಸ ಮಾಡಿದ್ದು, ಅನಿಲ್ ಅನಿರುದ್ಧ್ ಮುಖ್ಯ ಸಂಕಲನಕಾರರಾಗಿರುತ್ತಾರೆ. ಕಾರ್ತಿಕ್ ಗೌಡ ಮತ್ತು ಯೋಗಿ ಜಿ ರಾಜ್ ಕೆ.ಆರ್.ಜಿ. ಸ್ಟೂಡಿಯೋಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಿರುತ್ತಾರೆ.



# ರಾಜ-ರಾಣಿ ಶೋ ಸೆಲೆಬ್ರಿಟಿ ದಂಪತಿಗಳ ಕಚಗುಳಿ

ಕಲರ್ಸ್ ಕನ್ನಡದ ಜನಪ್ರಿಯ ಶೋಗಳಲ್ಲೊಂದಾದ 'ರಾಜ-ರಾಣಿ'ಯ ಮೂರನೇ ಸೀಸನ್ ಇದೀಗ ವೀಕ್ಷಕರನ್ನು ರಂಜಿಸಲು ತಯಾರಾಗಿದೆ. 'ರಾಜ ರಾಣಿ ರೀಲೋಡೆಡ್– ಸೀಸನ್ 3' ಇದೇ ನಿನ್ನೆಯಿಂದ ಆರಂಭವಾಗಿದೆ. ಸಂಚಿಕೆಗಳು ಪ್ರತಿ ಶನಿವಾರ ಮತ್ತು ಭಾನುವಾರ ರಾತ್ರಿ 7:30ಕ್ಕೆ ಪ್ರಸಾರಗೊಳ್ಳಲಿವೆ. ಕಳೆದ ಸೀಸನ್ನುಗಳ ಯಶಸ್ಸು ತಂಡದ ಉತ್ಸಾಹವನ್ನು ಹೆಚ್ಚಿಸಿದ್ದು, 'ರಾಜ ರಾಣಿ'ಯ ಮೂರನೇ ಸೀಸನ್ನಿನಲ್ಲಿ ಹಲವು ಬದಲಾವಣೆಗಳನ್ನು ಮಾಡಲಾಗಿದೆ. ಹನ್ನೆರಡು ಸೆಲೆಬ್ರಿಟಿ ದಂಪತಿಗಳು ಪಾಲ್ಗೊಳ್ಳಲಿರುವ 'ರಾಜ ರಾಣಿ ರೀಲೋಡೆಡ್' ನ ಹೊಸ ಸೀಸನ್ ಜೋಡಿಗಳ ಡಾನ್ಸಿನ ಮೇಲೆ ಹೆಚ್ಚು ಒತ್ತು ನೀಡಲಿದೆ. ಎಂದಿನಂತೆ ತಮಾಷೆ, ಹರಟೆ, ಆಟ, ಭಾವನೆಗಳೆಲ್ಲಾ ಇರುತ್ತವಾದರೂ ಈ ಸಲ ಜೋಡಿಗಳ ನರ್ತನ ಸಾಮರ್ಥ್ಯ ಹಿಂದಿನ ಸೀಸನ್ನುಗಳಿಗಿಂತ ಆದ್ಯತೆ ಪಡೆಯಲಿದೆ.

ಮೂರನೇ ತೀರ್ಪುಗಾರರಾಗಿ ನಟಿ ಅದಿತಿ ಪ್ರಭುದೇವ ಕಾಣಿಸಿಕೊಳ್ಳುತ್ತಿರುವುದು ಈ ಹೊಸ ಸೀಸನ್ನಿನ ಮತ್ತೊಂದು ಅಚ್ಚರಿ. ಈಗಾಗಲೇ ತೀರ್ಪುಗಾರರಾಗಿರುವ ಸೃಜನ್ ಲೋಕೇಶ್ ಮತ್ತು ತಾರಾ ಅವರನ್ನು ಅದಿತಿ ಕೂಡಿಕೊಳ್ಳಲಿದ್ದಾರೆ. ನಿರೂಪಕಿಯಾಗಿ ಅನುಪಮಾ ಗೌಡ ಮರಳಿದ್ದಾರೆ. ಈಗಾಗಲೇ ಹನ್ನೆರಡು ಸೆಲೆಬ್ರಿಟಿ ಜೋಡಿಗಳನ್ನು ಶೋಗೆ ಆಯ್ಕೆ ಮಾಡಲಾಗಿದ್ದು, ಟಿವಿ ಮುಖಗಳಿಂದ ಹಿಡಿದು ಸಾಮಾಜಿಕ ಮಾಧ್ಯಮಗಳ ತನಕ ಬೇರೆ ಬೇರೆ ಹಿನ್ನೆಲೆಯಿಂದ ಬಂದ ಜೋಡಿಗಳನ್ನು ನೀವೀ ಶೋನಲ್ಲಿ ನೋಡಬಹುದು. ಡಾನ್ಸ್ ಮತ್ತು ಗೇಮುಗಳ ಮೂಲಕ ಈ ಜೋಡಿಗಳು ತಮ್ಮ ನಡುವಿನ ಸಾಮರಸ್ಯವನ್ನು ಪರೀಕ್ಷೆಗೊಳಪಡಿಸಲಿದ್ದಾರೆ.



'ರಾಜ ರಾಣಿ ರೀಲೋಡೆಡ್' ಶುರುವಾಗುತ್ತಿರುವ ಬಗ್ಗೆ ಮಾತನಾಡಿದ ವಯಾಕಾಮ್ 18 ಪ್ರಾದೇಶಿಕ ಮನರಂಜನೆಯ ಕ್ಲಸ್ಟರ್ ಹೆಡ್ ಸುಷ್ಮಾ ರಾಜೇಶ್, ' ರಾಜ ರಾಣಿ ರೀಲೋಡೆಡ್ ಹಲವು ಹೊಸ ಪ್ರಯೋಗಗಳ ಜೊತೆಗೆ ಪ್ರಾದೇಶಿಕತೆಯ ಸೊಗಡನ್ನು ಮೈಗೂಡಿಸಿಕೊಂಡು ರಸಭರಿತವಾಗಿ ಮೂಡಿಬರಲಿದೆ' ಎಂದು ಹೇಳಿದರು. ಕಲರ್ಸ್ ಕನ್ನಡದ ಬ್ಯುಸಿನೆಸ್ ಹೆಡ್ ಪ್ರಶಾಂತ್ ನಾಯಕ್ ಕೂಡ ಈ ಹೊಸ ಸೀಸನ್ನಿನ ಬಗ್ಗೆ ಉತ್ಸಾಹದ ಮಾತುಗಳನ್ನಾಡಿ, 'ಡಾನ್ಸ್ ಕೇಂದ್ರಿತ ಹೊಸ ಫಾರ್ಮ್ಯಾಟ್ ಮತ್ತು ಹೊಸ ತೀರ್ಪುಗಾರರಾಗಿ ಅದಿತಿ ಸೇರ್ಪಡೆಯಾಗಿರುವುದು ಈ ಸಲದ ರಾಜರಾಣಿಗೆ ಹೊಸ ಚೈತನ್ಯ ತಂದುಕೊಟ್ಟಿದೆ' ಎಂದು ಹೇಳಿದರು.

ಲೋಕೇಶ್ ಪ್ರೊಡಕ್ಷನ್ಸ್ ಬ್ಯಾನರಿನಡಿಯಲ್ಲಿ ರಾಜ ರಾಣಿ ಶೋ ನಿರ್ಮಾಣಗೊಳ್ಳುತ್ತಿದೆ. ವೈಟ್ ಗೋಲ್ಡ್ ಅರ್ಪಿಸುವ ಈ ಶೋನ ಸಹ ಪ್ರಾಯೋಜಕರು ಅಮೃತ್ ನೋನಿ. ಜೊತೆಗೆ ಸ್ಪೆಷಲ್ ಪಾರ್ಟ್ನರ್ ಆಗಿ ಸ್ವಸ್ತಿಕ್ ತುಪ್ಪ, ಭೀಮಾ ಜ್ಯೂಯೆಲ್ಲರ್ಸ್, ಸದ್ಗುರು ಆಯುರ್ವೇದ ಗ್ರಾಮ್ ಫ್ಲೋರ್ ಸೋಪು, ಸಂಗೀತ ಮೊಬೈಲ್ಸ್ ಈ ಜನಪ್ರಿಯ ಕಾರ್ಯಕ್ರಮದ ಜೊತೆ ಕೈ ಜೋಡಿಸಿವೆ. ಜೂನ್ 8ರ ರಾತ್ರಿ ಏಳೂವರೆಗೆ ಮೊದಲ ಸಂಚಿಕೆಯನ್ನು ಆರಂಭಿಸಲಿರುವ ರಾಜರಾಣಿ ರೀಲೋಡೆಡ್ ಅನ್ನು ನೀವು ಕಲರ್ಸ್ ಕನ್ನಡ ಚಾನೆಲ್ ಹಾಗೂ ಜಿಯೊ ಸಿನಿಮಾ ಆಪ್ ನಲ್ಲೂ ವೀಕ್ಷಿಸಬಹುದು.

# ರುಕ್ಸ್ ಅಂಡ್ ರಕ್ಷ್ ಬೇಗ ಮದುವೆ ಆಗಿ ಎಂದ ಫ್ಯಾನ್ಸ್

ನಟ, ನಿರ್ದೇಶಕ ರಕ್ಷಿತ್ ಶೆಟ್ಟಿ ಮೊನ್ನೆಯಷ್ಟೇ ಹುಟ್ಟು ಹಬ್ಬವನ್ನು ಆಚರಿಸಿಕೊಂಡರು. ಈ ಸಂದರ್ಭದಲ್ಲಿ ಸೋಷಿಯಲ್ ಮೀಡಿಯಾ ಮೂಲಕ ಸಾಕಷ್ಟು ಜನರು ಅವರಿಗೆ ಶುಭ ಹಾರೈಸಿದ್ದಾರೆ. ಅದರಲ್ಲೂ ರುಕ್ಮಿಣಿ ವಸಂತ್ ಮಾಡಿರೋ ಪೋಸ್ಟ್ ಸಾಕಷ್ಟು ವೈರಲ್ ಆಗಿದ್ದು, ಸಪ್ತ ಸಾಗರದಾಚೆ ಎಲ್ಲೋ ಸಿನಿಮಾದ ಪ್ರಿಯಾ ಮತ್ತು ಮನು ಪಾತ್ರಗಳನ್ನು ಕಲ್ಪಿಸಿಕೊಂಡಿದ್ದಾರೆ ಫ್ಯಾನ್ಸ್.

ರಕ್ಷಿತ್ ಶೆಟ್ಟಿ ಹುಟ್ಟು ಹಬ್ಬಕ್ಕೆ ರುಕ್ಮಿಣಿ ವಸಂತ್ ಕ್ಯೂಟ್ ಆಗಿ ವಿಶ್ ಮಾಡಿದ್ದಾರೆ. ರುಕ್ಮಿಣಿ ಮಾಡಿರೋ ಪೋಸ್ಟ್ ಅಲ್ಲಿ ರಕ್ಷಿತ್ ಅವರನ್ನು ಸ್ವೀಟ್ ಆಗಿ 'ರಕ್ಷ್' ಎಂದು ಕರೆದಿದ್ದಾರೆ. ಅಷ್ಟೇ ಶಾರ್ಟ್ ಅಂಡ್ ಸ್ವೀಟ್ ಆಗಿ ರಕ್ಷಿತ್ ಕೂಡ ರುಕ್ಮಿಣಿ ಅವರಿಗೆ 'ರುಕ್ಸ್' ಎಂದು ಉತ್ತರಿಸಿದ್ದಾರೆ. ಈ ಅಕ್ಷರಗಳ ಸರಸವನ್ನು ಫ್ಯಾನ್ಸ್ ಮತ್ತೊಂದು ಹಂತಕ್ಕೆ ತಗೆದುಕೊಂಡು ಹೋಗಿದ್ದಾರೆ. ಕೆಲವರಂತೂ ನಿಮ್ಮ ಕ್ಯೂಟ್ ಕಪಲ್ ಬೇಗೆ ಮದುವೆ ಆಗಿ ಎಂದು ಕಾಮೆಂಟ್ ಮಾಡಿದ್ದಾರೆ.

ಸಿನಿಮಾ ಸೂಪರ್ ಹಿಟ್ ಆಗಿ ಯಶಸ್ವಿ ಜೋಡಿ ಅನಿಸಿಕೊಂಡಾಗ, ಅದರಲ್ಲೂ ನಟ ನಟಿಯರು ಬ್ಯಾಚ್ಯುಲರ್ ಆಗಿದ್ದಾಗ ಹೀಗೆ ಕಾಮೆಂಟ್ ಮಾಡೋದು ಸಹಜ. ಈ ಹಿಂದೆ ರಕ್ಷಿತ್ ಶೆಟ್ಟಿ ಜೊತೆ ಅನೇಕ ನಟಿಯರನ್ನು ಇದೇ ಫ್ಯಾನ್ಸ್




ಮದುವೆ ಮಾಡಿಸಿ ಆಗಿದೆ. ಈಗ ರುಕ್ಮಿಣಿ ಅವರನ್ನು ಎಳೆತರಲಾಗಿದೆ.

ಸಪ್ತ ಸಾಗರದಾಚೆ ಎಲ್ಲೋ ಸಿನಿಮಾದ ಯಶಸ್ಸಿ ನಂತರ ರಕ್ಷಿತ್ ಜೊತೆ ರುಕ್ಮಿಣಿಯ ಹೆಸರನ್ನು ತಳುಕು ಹಾಕೋದು ಇದೇ ಮೊದಲೇನೂ ಅಲ್ಲ. ರಕ್ಷಿತ್ ಮದುವೆ ವಿಚಾರ ಬಂದಾಗೆಲ್ಲ ಇತ್ತೀಚೆಗೆ ರುಕ್ಮಿಣಿ ಹೆಸರು ಕಾಣಿಸಿಕೊಳ್ಳುತ್ತಿದೆ. ಈಗ ರುಕ್ಸ್ ಅಂಡ್ ರಕ್ಷ್ ಟ್ರೆಂಡ್ ಆಗಿದೆ.

# ಆಫ್ರಿಕಾ ತಂಡಕ್ಕೆ ಸೋಲಿನ ಭಯ ಹುಟ್ಟಿಸಿ ಸೋತ ಡಚ್ಚರು..!

ಟಿ20 ವಿಶ್ವಕಪ್‌ನ 16ನೇ ಪಂದ್ಯದಲ್ಲಿ ನೆದರ್ಲೆಂಡ್ಸ್ ತಂಡವನ್ನು ಎದುರಿಸಿದ್ದ ದಕ್ಷಿಣ ಆಫ್ರಿಕಾ ತಂಡ 'ಕಿಲ್ಲರ್' ಮಿಲ್ಲರ್ ಅವರ ಅದ್ಭುತ ಅರ್ಧಶತಕದ ಇನಿಂಗ್ಸ್‌ನ ಆಧಾರದ ಮೇಲೆ ಡಚ್ಚರನ್ನು ನಾಲ್ಕು ವಿಕೆಟ್‌ಗಳಿಂದ ಸೋಲಿಸಿದೆ. ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ನೆದರ್ಲೆಂಡ್ಸ್ ತಂಡ ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್ ಕಳೆದುಕೊಂಡು 103 ರನ್ ಗಳಿಸಿತು. ಉತ್ತರವಾಗಿ ಗುರಿ ಬೆನ್ನಟ್ಟಿದ ದಕ್ಷಿಣ ಆಫ್ರಿಕಾ ತಂಡ 18.5 ಓವರ್‌ಗಳಲ್ಲಿ ಆರು ವಿಕೆಟ್ ಕಳೆದುಕೊಂಡು ಪ್ರಯಾಸದ ಗೆಲುವು ದಾಖಲಿಸಿತು. ಆಫ್ರಿಕಾ ಪರ ಅದ್ಭುತ ಇನ್ನಿಂಗ್ಸ್ ಆಡಿದ ಮಿಲ್ಲರ್ 51 ಎಸೆತಗಳನ್ನು ಎದುರಿಸಿ ಮೂರು ಬೌಂಡರಿ ಹಾಗೂ ನಾಲ್ಕು ಸಿಕ್ಸರ್‌ಗಳ ನೆರವಿನಿಂದ 59 ರನ್ ಗಳಿಸಿ ಅಜೇಯರಾಗಿ ಉಳಿದರು. ಈ ಪಂದ್ಯದಲ್ಲಿ ನೆದರ್ಲೆಂಡ್ಸ್ ಸೋತರೂ, ಗೆಲುವಿಗಾಗಿ ಈ ತಂಡ ನೀಡಿದ ಹೋರಾಟ ಎಲ್ಲರನ್ನು ಬೆರಗಗೊಳಿಸಿತು ಎಂದರೆ ತಪ್ಪಾಗಲಾರದು.

**ನೆದರ್ಲೆಂಡ್ಸ್ ಕಳಪೆ ಆರಂಭ:** ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ನೆದರ್ಲೆಂಡ್ಸ್ ತಂಡಕ್ಕೆ ಉತ್ತಮ ಆರಂಭ ಸಿಗಲಿಲ್ಲ. ವೇಗಿ ಮಾರ್ಕೊ ಯಾನ್ಸೆನ್, ಆರಂಭಿಕ ಮೈಕಲ್ ಲೆವಿಟ್ (0) ಮತ್ತು ವಿಕ್ರಮಜೀತ್ ಸಿಂಗ್ (12) ಅವರನ್ನು ಬಹುಬೇಗನೇ ಪೆವಿಲಿಯನ್‌ಗೆ ಕಳುಹಿಸಿದರು. ಅದೇ ವೇಳೆಗೆ ಕಳೆದ ಪಂದ್ಯದ



ಹೀರೋ ಎನಿಸಿಕೊಂಡಿದ್ದ ಮ್ಯಾಕ್ಸ್ ಒಡೌಡ್ ಎರಡು ರನ್ ಗಳಿಸಿ ಒಟ್ನಿಯಲ್ ಬಾಟ್ಮನ್‌ಗೆ ಬಲಿಯಾದರು. ಬಾಸ್ ಡಿ ಲೀಡೆ ಅವರನ್ನು ಆನ್ರಿಚ್ ನೋಕಿಯಾ ಪೆವಿಲಿಯನ್‌ಗೆ ಕಳುಹಿಸಿದರು. ನಾಯಕ ಸ್ಕಾಟ್ ಎಡ್ವರ್ಡ್ಸ್ 10 ರನ್ ಗಳಿಗೆ ಸುಸ್ತಾದರೆ, ತೇಜ ನಿಡುಮನೂರ್‌ಗೆ ಖಾತೆ ತೆರೆಯಲು ಸಾಧ್ಯವಾಗಲಿಲ್ಲ.

**ಬಾರ್ಟ್‌ಮ್ಯಾನ್ ಮಾರಕ ದಾಳಿ:** ಹೀಗಾಗಿ ಕೇವಲ 48 ರನ್ ಗಳಿಸುವಷ್ಟರಲ್ಲಿ ತಂಡ ಆರು ವಿಕೆಟ್ ಕಳೆದುಕೊಂಡಿತ್ತು. ಇದರ ನಂತರ ಸೈಬ್ರಾಂಡ್ ಎಂಗೆಲ್‌ಬ್ರೆಕ್ಟ್ ಏಳನೇ ವಿಕೆಟ್‌ಗೆ ಲೋಗನ್ ವ್ಯಾನ್ ಬೀಕ್ ಅವರೊಂದಿಗೆ 54 ರನ್ ಜೊತೆಯಾಟವನ್ನು ಮಾಡಿದರು. ಇದರಿಂದಾಗಿ ನೆದರ್ಲೆಂಡ್ಸ್ ತಂಡ 100 ರ ಗಡಿ ದಾಟಿತು. ಎಂಗಲ್‌ಬ್ರೆಕ್ಟ್ ಅವರ ವಿಕೆಟ್ ಪಡೆಯುವ ಮಾಡುವ ಮೂಲಕ ಬಾರ್ಟ್‌ಮ್ಯಾನ್ ಈ ಪಾಲುದಾರಿಕೆಯನ್ನು ಮುರಿದರು. ಎಂಗಲ್‌ಬ್ರೆಕ್ಟ್ 45 ಎಸೆತಗಳಲ್ಲಿ ಎರಡು ಬೌಂಡರಿ ಹಾಗೂ ಒಂದು ಸಿಕ್ಸರ್ ನೆರವಿನಿಂದ 40 ರನ್ ಗಳಿಸಿ ಔಟಾದರು. ಕೊನೆಯಲ್ಲಿ ವ್ಯಾನ್ ಬೀಕ್ 22 ಎಸೆತಗಳಲ್ಲಿ ಮೂರು ಬೌಂಡರಿಗಳ ನೆರವಿನಿಂದ 23 ರನ್ ಗಳಿಸಿದರು.

**ಮತ್ತೆ ವೇಗಿಗಳ ಮೇಲುಗೈ:** ನಿರೀಕ್ಷೆಯಂತೆ ನ್ಯೂಯಾರ್ಕ್‌ನ ನಸ್ಸೌ ಕೌಂಟಿ ಇಂಟರ್‌ನ್ಯಾಶನಲ್ ಸ್ಟೇಡಿಯಂನಲ್ಲಿ ಮತ್ತೊಮ್ಮೆ ವೇಗದ ಬೌಲರ್‌ಗಳ ಪರಾಕ್ರಮ ಕಂಡುಬಂತು. ನೆದರ್ಲೆಂಡ್ಸ್ ತಂಡದ ಒಂಬತ್ತು ವಿಕೆಟ್‌ಗಳಲ್ಲಿ ಎಂಟು ಆಫ್ರಿಕನ್ ವೇಗದ ಬೌಲರ್‌ಗಳ ಪಾಲಾದವು. ಇದರಲ್ಲಿ ಒಟ್ನಿಯಲ್ ಬಾರ್ಟ್‌ಮನ್ ಒಬ್ಬರೇ ನಾಲ್ಕು ವಿಕೆಟ್ ಪಡೆದರು. ಉಳಿದಂತೆ ಮಾರ್ಕೊ ಯಾನ್ಸೆನ್ ಮತ್ತು ಎನ್ರಿಕ್ ನೋಕಿಯಾ ತಲಾ ಎರಡು ವಿಕೆಟ್ ಪಡೆದರು.

**ಆಫ್ರಿಕಾಗೆ ಪ್ರಯಾಸದ ಗೆಲುವು:** ನೆದರ್ಲೆಂಡ್ಸ್ ನೀಡಿದ 103 ರನ್‌ಗಳ ಸುಲಭ ಗುರಿಗೆ ಉತ್ತರವಾಗಿ ದಕ್ಷಿಣ ಆಫ್ರಿಕಾ ತಂಡ ಆರಂಭದಲ್ಲೇ ಪೆವಿಲಿಯನ್ ಪರೇಡ್ ಆರಂಭಿಸಿತು. ತಂಡ ಕೇವಲ 12 ರನ್‌ಗಳಿಗೆ ನಾಲ್ಕು ವಿಕೆಟ್ ಕಳೆದುಕೊಂಡಿತ್ತು. ಹೀಗಾಗಿ ಮಾರ್ಕ್ರಮ್ ಪಡೆ ಸೋಲಿನ ಸುಳಿಗೆ ಸಿಲುಕಿಕೊಂಡಿತ್ತು. ಆದಾಗ್ಯೂ, ಟ್ರಿಸ್ಟಾನ್ ಸ್ಟಬ್ಸ್ ಮತ್ತು ಡೇವಿಡ್ ಮಿಲ್ಲರ್ ಐದನೇ ವಿಕೆಟ್‌ಗೆ 65 ರನ್‌ಗಳ ಜೊತೆಯಾಟವನ್ನು ಆಡಿ ತಂಡವನ್ನು ಸಂಕಷ್ಟದಿಂದ ಹೊರಗೆಳೆದರು. ನಂತರ ಮಿಲ್ಲರ್, ಯಾನ್ಸೆನ್ ಮತ್ತು ಕೇಶವ್ ಮಹಾರಾಜ್ ಅವರೊಂದಿಗೆ ಸಣ್ಣ ಪಾಲುದಾರಿಕೆಗಳನ್ನು ಮಾಡಿ ವಿಜಯಕ್ಕೆ ಕಾರಣರಾದರು.

## ಬೆಂಗಳೂರಿನಲ್ಲೊಂದು ಬೀಭತ್ಸ ಕೊಲೆ

# ದೇಹ ತುಂಡು ತುಂಡು ಮಾಡಿ ಮೋರಿಗೆ ಎಸೆದು ಕ್ರೌರ್ಯ

**ಬೆಂಗಳೂರು:** ಬೆಂಗಳೂರಿನಲ್ಲೊಂದು ಬೀಭತ್ಸ ಕೊಲೆ ಪ್ರಕರಣ ಬೆಳಕಿಗೆ ಬಂದಿದೆ. ವ್ಯಕ್ತಿಯೊಬ್ಬರನ್ನು ಆರೋಪಿ ಮನೆಯಲ್ಲೇ ತುಂಡುತುಂಡಾಗಿ ಕತ್ತರಿಸಿ ಹತ್ಯೆ ಮಾಡಿದ್ದಲ್ಲದೆ, ಮೃತದೇಹದ ಭಾಗಗಳನ್ನು ಬೇರೆ ಬೇರೆ ಮೋರಿಗೆ ಎಸೆದು ಸಾಕ್ಷ್ಯ ನಾಶ ಮಾಡಲಾಗಿದೆ. ಮೃತದೇಹದ ಪತ್ತೆಗೆ ನುರಿತ ತಜ್ಞರನ್ನು ಕರೆಸಿಕೊಂಡರೂ ಉಪಯೋಗವಾಗಿಲ್ಲ. ಮೂರು ದಿನಗಳಿಂದ ಹುಡುಕಿದರೂ ಮೃತದೇಹ ಇನ್ನೂ ಪತ್ತೆಯಾಗಿಲ್ಲ. ಬೆಂಗಳೂರಿನ ರಾಮಮೂರ್ತಿನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಕೃತ್ಯ ಎಸಗಲಾಗಿದೆ.

ಕೊಲೆಯಾದ ದುರ್ದೈವಿ ಕೆವಿ ಶ್ರೀಕಾಂತ್ (34) ಎಂಬುದು ತಿಳಿದುಬಂದಿದೆ. ಮಾಧವ ರಾವ್ ಎಂಬಾತನೇ ಕೊಲೆ ಆರೋಪಿಯಾಗಿದ್ದು, ಸಂಪಿಗೆಹಳ್ಳಿ ಪೊಲೀಸರು ಭಯಾನಕ ಕೊಲೆಯ ಕೃತ್ಯವನ್ನು ಬಯಲಿಗೆಳೆದಿದ್ದಾರೆ.

**ನಡೆದಿದ್ದೇನು :** ಬಸವೇಶ್ವರನಗರದಲ್ಲಿರುವ ಮಾರ್ಗದರ್ಶಿ ಚೀಟ್ ಫಂಡ್‌ನಲ್ಲಿ ಡೆವಲಪ್ಮೆಂಟ್ ಆಫೀಸರ್ ಆಗಿದ್ದ ಶ್ರೀಕಾಂತ್, ಥಣಿಸಂದ್ರದ ಅಂಜನಾದ್ರಿ ಲೇಔಟ್‌ನಲ್ಲಿ ವಾಸವಿದ್ದರು. ಮೇ 28ರ ಬೆಳಗ್ಗೆ ಮನೆಯಿಂದ ಹೊರಹೋಗಿದ್ದ ಶ್ರೀಕಾಂತ್ ಮನೆಗೆ ವಾಪಸ್ ಆಗಿಲ್ಲ. ಶ್ರೀಕಾಂತ್ ನಾಪತ್ತೆ ಬಗ್ಗೆ ಮೇ 29ರಂದು ಸಂಪಿಗೆಹಳ್ಳಿ ಪೊಲೀಸ್ ಠಾಣೆಗೆ ಅವರ ಪತ್ನಿ ದೂರು ನೀಡಿದ್ದರು.

ಈ ಪ್ರಕರಣದ ಬಗ್ಗೆ ತನಿಖೆ ನಡೆಸಿದ ಪೊಲೀಸರಿಗೆ ಶ್ರೀಕಾಂತ್ ಮೇ 28ರಂದು ಮಾಧವರಾವ್ ಮನೆಗೆ




ಹೋಗಿರುವುದು ಪತ್ತೆಯಾಗಿತ್ತು. ಕೆಆರ್ ಪುರಂನ ವಿಜಿನಪುರದಲ್ಲಿರುವ ಮಾಧವ ರಾವ್ ಮನೆಗೆ ಹೋಗಿರುವುದು ತಿಳಿದುಬಂದಿತ್ತು. ಮನೆಯ ಸಿಸಿಟಿವಿಯಲ್ಲಿ ಮಾಧವ ರಾವ್ ಮನೆಗೆ ಶ್ರೀಕಾಂತ್ ಪ್ರವೇಶಿಸಿರುವ ದೃಶ್ಯ ಸಿಕ್ಕಿತ್ತು. ಆದರೆ ಶ್ರೀಕಾಂತ್ ಮನೆಯಿಂದ ಹೊರಗೆ ಹೋಗುವುದು ರೆಕಾರ್ಡ್ ಆಗಿರಲಿಲ್ಲ. ಹೀಗಾಗಿ ಜೊತೆಗೆ ಮನೆಯ ಒಳಗಡೆ ಪರಿಶೀಲನೆ ಮಾಡಿದಾಗ ರಕ್ತದ ಕಲೆಗಳು ಪತ್ತೆಯಾಗಿದ್ದವು. ಬಳಿಕ ಮಾಧವ ರಾವ್ ಬಗ್ಗೆ ವಿಚಾರಿಸಿದಾಗ ಆತನೂ ನಾಪತ್ತೆಯಾಗಿರುವುದು ಗೊತ್ತಾಗಿತ್ತು.

ಬಳಿಕ ಆಂಧ್ರ ಪ್ರದೇಶದಲ್ಲಿ ಮಾಧವ ರಾವ್ ಪತ್ತೆ ಮಾಡಿ ಪೊಲೀಸರು ಕರೆತಂದಿದ್ದರು. ಪೊಲೀಸರ ವಿಚಾರಣೆ ವೇಳೆ ಮಾಧವ ರಾವ್ ಬಾಯ್ಬಿಟ್ಟಿದ್ದು, ನಡೆದ ವಿಚಾರ ತಿಳಿಸಿದ್ದಾನೆ.

**ಎರಡು ವರ್ಷಗಳಿಂದ ಇತ್ತು ಪರಿಚಯ:** ಮಾಧವ ರಾವ್ ಮತ್ತು ಶ್ರೀಕಾಂತ್‌ಗೆ ಎರಡು ವರ್ಷಗಳಿಂದ ಪರಿಚಯ ಇತ್ತು. ಶ್ರೀಕಾಂತ್ ಬಳಿ ಮಾಧವರಾವ್ 5 ಲಕ್ಷ ರೂ. ಹಣದ ಚೀಟಿ ಹಾಕಿದ್ದ. ಈ ಚೀಟಿ ಹಣದ ವಿಚಾರಕ್ಕೆ ಇಬ್ಬರ ನಡುವೆ ಗಲಾಟೆ ನಡೆಯುತ್ತಿತ್ತು. ಚೀಟಿ ಹಣ ವಾಪಸ್ ಕೊಡುವಂತೆ ಮಾಧವ ರಾವ್ ಒತ್ತಾಯ ಮಾಡುತ್ತಿದ್ದ. ಇಷ್ಟೇ ಅಲ್ಲದೆ, ಮಾಧವ ರಾವ್ ಪತ್ನಿ ಜೊತೆ ಶ್ರೀಕಾಂತ್‌ಗೆ ಅಕ್ರಮ ಸಂಬಂಧ ಇತ್ತು ಎಂಬ ಆರೋಪಗಳೂ ಇವೆ.

ಮೇ 28ರಂದು ಬೆಳಗ್ಗೆ ಮಾಧವ ರಾವ್ ಮನೆಗೆ ಶ್ರೀಕಾಂತ್ ತೆರಳಿದ್ದ. ಈ ವೇಳೆ ಮನೆಯಲ್ಲಿ ಇಬ್ಬರಿಗೂ ಹಣದ ವಿಚಾರಕ್ಕೆ ಗಲಾಟೆ ಆಗಿದೆ. ಬಳಿಕ ಮಾಧವ ರಾವ್ ಮನೆಯಲ್ಲಿದ್ದ ಜಾಕ್, ರಾಡ್‌ನಿಂದ ಶ್ರೀನಾಥ್ ತಲೆಗೆ ಹೊಡೆದಿದ್ದ. ಕುಸಿದು ಬಿದ್ದ ಶ್ರೀಕಾಂತ್ ದೇಹವನ್ನು ಮಚ್ಚಿನಿಂದ ತುಂಡು ತುಂಡಾಗಿ ಕತ್ತರಿಸಿದ್ದ. ಸಾಕ್ಷಿ ನಾಶ ಮಾಡಲು ಶ್ರೀಕಾಂತ್ ಮೃತದೇಹವನ್ನು ಮೂರು ಪ್ಲಾಸ್ಟಿಕ್ ಚೀಲದಲ್ಲಿ ತುಂಬಿದ್ದ. ಬಳಿಕ ಮೊದಲಿಗೆ ಒಂದು ಬ್ಯಾಗ್, ನಂತರ ಎರಡು ಬ್ಯಾಗ್‌ಗಳಲ್ಲಿ ಮೃತದೇಹದ ತುಂಡುಗಳನ್ನು ಬೆಳತ್ತೂರು ಬಳಿಯ ಮೋರಿಯಲ್ಲಿ (ಪಿನಾಕಿನಿ ನದಿ) ಹಾಕಿದ್ದ. ನಂತರ ತನ್ನ ಮೊಬೈಲ್ ಸ್ವಿಚ್ಡ್ ಆಫ್ ಮಾಡಿ ಶ್ರೀಕಾಂತ್ ಆಂಧ್ರ ಪ್ರದೇಶಕ್ಕೆ ಪರಾರಿಯಾಗಿದ್ದ. ಸದ್ಯ ಪ್ರಕರಣ ರಾಮಮೂರ್ತಿನಗರ ಪೊಲೀಸ್ ಠಾಣೆಗೆ ವರ್ಗಾವಣೆಯಾಗಿದೆ. ಕೊಲೆ ಮಾಡಿದ ಸ್ಥಳ ರಾಮಮೂರ್ತಿ ನಗರ ಠಾಣಾ ವ್ಯಾಪ್ತಿಗೆ ಬರುವ ಹಿನ್ನೆಲೆ ಈ ಕ್ರಮ ಕೈಗೊಳ್ಳಲಾಗಿದೆ. ರಾಮಮೂರ್ತಿನಗರ ಪೊಲೀಸರಿಂದ ಕೊಲೆ (302) ಮತ್ತು ಸಾಕ್ಷಿ ನಾಶ (201)ರಡಿ ಕೇಸ್ ದಾಖಲಾಗಿದೆ.

# ಪಾಕ್ ವಿರುದ್ಧ ಪಂದ್ಯಕ್ಕೂ ಮುನ್ನವೇ ಟೀಂ ಇಂಡಿಯಾಕ್ಕೆ ಆಘಾತ

ಪಾಕಿಸ್ತಾನ ವಿರುದ್ಧ ಇಂದು ನಡೆಯಲಿರುವ ಹೈವೋಲ್ಟೇಜ್ ಪಂದ್ಯಕ್ಕೂ ಮುನ್ನವೇ ಟೀಂ ಇಂಡಿಯಾಕ್ಕೆ ದೊಡ್ಡ ಆಘಾತವಾಗಿದೆ. ಐರ್ಲೆಂಡ್ ವಿರುದ್ಧ ಪಂದ್ಯದಲ್ಲಿ ನಾಯಕ ರೋಹಿತ್ ಶರ್ಮಾ ಅವರು ಕೈಗೆ ಗಾಯ ಮಾಡಿಕೊಂಡಿದ್ದಾರೆ. ಇದರಿಂದ ಮುಂದಿನ ಪಂದ್ಯದಲ್ಲಿ ಅವರು ಕಣಕ್ಕಿಳಿಯುತ್ತಾರಾ ಇಲ್ಲವೋ ಅನ್ನೋ ಪ್ರಶ್ನೆ ಮೂಡಿದೆ.



ಹೌದು.. ಪ್ರಸಕ್ತ ವರ್ಷ ಟಿ20 ವಿಶ್ವಕಪ್ ಟೂರ್ನಿಯ ಭಾರತ-ಪಾಕಿಸ್ತಾನ ಪಂದ್ಯ ಭಾನುವಾರ ನ್ಯೂಯಾರ್ಕ್‌ನಲ್ಲಿ ನಡೆಯಲಿದೆ. ಭಾರತೀಯ ಕಾಲಮಾನದ ಪ್ರಕಾರ ರಾತ್ರಿ 8:00 ಗಂಟೆಗೆ ಪಂದ್ಯ ಆರಂಭಗೊಳ್ಳಲಿದೆ.

2024ರ ಟಿ20 ವಿಶ್ವಕಪ್ ಟೂರ್ನಿಯ ಆರಂಭಿಕ ಪಂದ್ಯದಲ್ಲೇ ಅಮೆರಿಕ ತಂಡದ ವಿರುದ್ಧ ವಿರೋಚಿತ ಸೋಲಿಗೆ ತುತ್ತಾಗಿರುವ ಪಾಕಿಸ್ತಾನ ಟೀಂ ಇಂಡಿಯಾ ವಿರುದ್ಧ ಪುಟಿದೇಳುವ ತವಕದಲ್ಲಿದೆ. ಇನ್ನೂ ಐರ್ಲೆಂಡ್ ವಿರುದ್ಧ ಮೊದಲ ಪಂದ್ಯದಲ್ಲಿ ಗೆಲುವು ಸಾಧಿಸಿರುವ ಭಾರತ ಪಾಕ್ ವಿರುದ್ಧ ಗೆದ್ದು ಸೂಪರ್-8 ಹಂತಕ್ಕೆ ಲಗ್ಗೆಯಿಡುವ ಉತ್ಸಾಹದಲ್ಲಿದೆ. ಈ ಹೊತ್ತಿನಲ್ಲೇ ರೋಹಿತ್ ಶರ್ಮಾ ಅವರ ಕೈಬೆರಳು ಗಾಯಕ್ಕೆ ತುತ್ತಾಗಿದ್ದು, ಅವರ ಮುಂದಿನ ನಡೆಯ ಬಗ್ಗೆ ತೀವ್ರ ಕುತೂಹಲ ಕೆರಳಿಸಿದೆ. ಅಲ್ಲದೇ ಸೂಪರ್-8 ಪ್ರವೇಶಿಸಲು ಈ ಗೆಲುವು ನಿರ್ಣಾಯಕವೂ ಆಗಿದ್ದು, ಪಾಕ್ ತಂಡಕ್ಕೂ ಗೆಲ್ಲಲೇಬೇಕಾದ ಅನಿವಾರ್ಯತೆ ಇದೆ. ಐರ್ಲೆಂಡ್ ವಿರುದ್ಧ ನಡೆದ ಮೊದಲ ಪಂದ್ಯದಲ್ಲಿ ನಾಯಕ ರೋಹಿತ್ ಶರ್ಮಾ 37 ಎಸೆತಗಳಲ್ಲಿ 52 ರನ್ ಬಾರಿಸಿದ್ದರು. ಈ ವೇಳೆ ವೇಗಿ ಜೋಶ್ ಲಿಟಲ್ ಅವರ ಎಸೆತವು ರೋಹಿತ್ ಕೈ ಬೆರಳಿಗೆ ಬಲವಾಗಿ ತಾಗಿ ಗಾಯಗೊಂಡಿದ್ದರು. ಇದರಿಂದ ಪಂದ್ಯದ ಮಧ್ಯದಲ್ಲಿಯೇ ಮೈದಾನ ತೊರೆದಿದ್ದರು. ಹಾಗಾಗಿ ಪಾಕಿಸ್ತಾನದ ವಿರುದ್ಧ ಅವರು ಕಣಕ್ಕಿಳಿಯುತ್ತಾರಾ ಇಲ್ಲವೋ ಎಂಬುದನ್ನು ಕಾದುನೋಡಬೇಕಿದೆ.

ರೋಹಿತ್ ಶರ್ಮಾ ಅವರು ಗಾಯಗೊಂಡಿರುವ ಬಗ್ಗೆ ಬಿಸಿಸಿಐ ಯಾವುದೇ ಅಧಿಕೃತ ಹೇಳಿಕೆ ನೀಡಿಲ್ಲ. ಒಂದು ವೇಳೆ ರೋಹಿತ್ ಪಾಕ್ ವಿರುದ್ಧದ ಪಂದ್ಯಕ್ಕೆ ಅಲಭ್ಯರಾದರೆ, ಉಪನಾಯಕ ಹಾರ್ದಿಕ್ ಪಾಂಡ್ಯ ತಂಡವನ್ನು ಮುನ್ನಡೆಸಲಿದ್ದಾರೆ. ಆರಂಭಿಕನಾಗಿ ಯಶಸ್ವಿ ಜೈಸ್ವಾಲ್ ರೋಹಿತ್ ಶರ್ಮಾ ಅವರ ಸ್ಥಾನ ತುಂಬಲಿದ್ದಾರೆ ಎಂದು ಮೂಲಗಳಿಂದ ತಿಳಿದುಬಂದಿದೆ.

**ವಿಶ್ವಕಪ್‌ನಲ್ಲಿ ಸೋಲನ್ನೇ ನೋಡದ ಭಾರತ:** 2007ರಿಂದ ಈವರೆಗೆ ವಿಶ್ವಕಪ್ ಟೂರ್ನಿಯಲ್ಲಿ ಭಾರತ ಪಾಕ್ ಎದುರು ಸೋಲನ್ನೇ ಕಂಡಿಲ್ಲ. ಏಷ್ಯಾಕಪ್ ಟೂರ್ನಿಯಲ್ಲಿ ಮಾತ್ರ ಸೋಲು ಕಂಡಿದೆ. 2007ರಿಂದ ಈವರೆಗೆ ನಡೆದ 12 ಟಿ20 ಪಂದ್ಯಗಳಲ್ಲಿ ಕೇವಲ 3 ಪಂದ್ಯಗಳಲ್ಲಿ ಮಾತ್ರ ಪಾಕಿಸ್ತಾನ ಗೆದ್ದಿದ್ದರೆ, ಟೀಂ ಇಂಡಿಯಾ 8 ಪಂದ್ಯಗಳಲ್ಲಿ ಗೆಲುವು ಸಾಧಿಸಿದೆ. ಒಂದು ಪಂದ್ಯ ಟೈನಲ್ಲಿ ಅಂತ್ಯವಾಗಿದೆ.

# ನಾವು ಶಿಸ್ತುಬದ್ಧವಾಗಿ, ಒಗ್ಗಟ್ಟಿನಿಂದ ಇರಬೇಕು

**ನವದೆಹಲಿ:** ನಾವು ಶಿಸ್ತಿನಿಂದ ಒಗ್ಗಟ್ಟಾಗಿರಬೇಕು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ದೆಹಲಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕಾರಣಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತ್ ಜೋಡೋ ಯಾತ್ರೆ ಹೋದಲ್ಲೆಲ್ಲಾ ಕಾಂಗ್ರೆಸ್ ಪಕ್ಷಕ್ಕೆ ಶೇಕಡಾವಾರು ಮತಗಳಲ್ಲಿ ಹೆಚ್ಚಳವನ್ನು ಕಂಡಿದ್ದೇವೆ. ಇದನ್ನು ನಾನು ನಿಮ್ಮ ಗಮನವನ್ನು ಸೆಳೆಯಲು ಬಯಸುತ್ತೇನೆ. ಮಣಿಪುರದಲ್ಲಿ ನಾವು ಎರಡೂ ಸ್ಥಾನಗಳನ್ನು ಗೆದ್ದಿದ್ದೇವೆ. ನಾಗಾಲ್ಯಾಂಡ್, ಅಸ್ಸಾಂ ಮತ್ತು ಮೇಘಾಲಯದಲ್ಲಿಯೂ ಸ್ಥಾನಗಳನ್ನು ಗೆದ್ದಿದ್ದೇವೆ ಎಂದರು.



ಮಹಾರಾಷ್ಟ್ರದಲ್ಲಿ ನಾವು ಏಕೈಕ ದೊಡ್ಡ ಪಕ್ಷವಾಗಿ ಹೊರಹೊಮ್ಮಿದ್ದೇವೆ. ಎಲ್ಲಾ ವರ್ಗದ ಜನರು ಬೆಂಬಲಿಸಿದ್ದಾರೆ. ದೇಶದ ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ಉಳಿಸಲು ಕಾಂಗ್ರೆಸ್ ಪಕ್ಷವು ಎಸ್‌ಸಿ, ಎಸ್‌ಟಿ, ಒಬಿಸಿ ಮತ್ತು ಅಲ್ಪಸಂಖ್ಯಾತ ಮತದಾರರ ಪ್ರಾಬಲ್ಯವನ್ನು ನಾವು ನೋಡಿದ್ದೇವೆ. ಹೀಗಾಗಿ ನಗರ ಪ್ರದೇಶಗಳಲ್ಲೂ ನಮ್ಮ ಅಸ್ತಿತ್ವವನ್ನು ತೋರಬೇಕು ಎಂದು ಕರೆ ನೀಡಿದರು.

ನಾವು ಈ ಹಿಂದೆ ವಿಧಾನಸಭಾ ಚುನಾವಣೆಯಲ್ಲಿ ಉತ್ತಮ ಪ್ರದರ್ಶನ ನೀಡಿ ಸರ್ಕಾರ ರಚಿಸಿದ್ದ ರಾಜ್ಯಗಳಲ್ಲಿ ನಮ್ಮ ಸಾಧನೆಯನ್ನು ಪುನರಾವರ್ತಿಸಲು ಸಾಧ್ಯವಾಗಲಿಲ್ಲ. ಅಂತಹ ಪ್ರತಿಯೊಂದು ರಾಜ್ಯಗಳ ಬಗ್ಗೆ ನಾವು ಶೀಘ್ರದಲ್ಲೇ ಪ್ರತ್ಯೇಕ ಚರ್ಚೆಗಳನ್ನು ನಡೆಸಬೇಕಾಗಿದೆ. ಈ ಮೂಲಕ ನಾವು ತುರ್ತು ಪರಿಹಾರ ಕ್ರಮಗಳನ್ನು ತೆಗೆದುಕೊಳ್ಳಬೇಕಾಗಿದೆ. ಇದು ಸಾಂಪ್ರದಾಯಿಕವಾಗಿ ಕಾಂಗ್ರೆಸ್‌ಗೆ ಒಲವು ಹೊಂದಿರುವ ರಾಜ್ಯಗಳಾಗಿವೆ, ಅಲ್ಲಿ ನಾವು ಅವಕಾಶಗಳನ್ನು ಹೊಂದಿದ್ದೇವೆ ಎಂದು ಹೇಳಿದರು.

ನಾವು ಶಿಸ್ತಿನಿಂದ ಇರಬೇಕು, ಒಗ್ಗಟ್ಟಾಗಿರಬೇಕು. ಜನರು ತಮ್ಮ ನಂಬಿಕೆಯನ್ನು ಮರಳಿ ಪಡೆದಿದ್ದಾರೆ ಮತ್ತು ಅವರು ನಂಬಿಕೆ ಇಡುವಂತೆ ನಾವು ಮಾಡಬೇಕು. ನಾವು ಈ ತೀರ್ಪನ್ನು ನಿಜವಾದ ನಮ್ರತೆಯಿಂದ ಸ್ವೀಕರಿಸುತ್ತೇವೆ ಎಂದು ತಿಳಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com